♦ ಮಂಡ್ಯ ♦ ಮೈಸೂರು ♦ ಚಾಮರಾಜನಗರ ♦ ಹಾಸನ ♦ ರಾಮನಗರ ♦ ತುಮಕೂರು ♦ ಬೆಂಗಳೂರು ಗ್ರಾಮಾಂತರ ♦ ಬೆಂಗಳೂರು ನಗರ

E-mail:kayakayogi @gmail.com

website: www.kayakayogi.com

ಕಾಯಕ ಯೋಗಿ

ಸಂಪಾದಕರು:ಅರುಣಜ್ಯೋತಿ ಬಿ.ಕೆ. KAYAKA YOGI - Regional Daily ಪ್ರಾದೇಶಿಕ ದಿನಪತ್ರಿಕೆ

Connecting hearts in the cultural capital

ASK ಮೈಸೂರು

#askmysuru

RNI NO.KARKAN/2018/77805 | POST NO.KA/SK/MND/999/2022-2024 | ಮಂಡ್ಯ Mandya | ಸಂಜಿಟ volume 07 | ಸಂಚಿಕೆ Issue 06 | ಭಾನುವಾರ Sunday | 07-04-2024 | ಪುಟಗಳು Pages 06 | ಬೆಲೆ Rate 02 | ಸಂಪರ್ಕ 9980605484

ಚುಟುಕು ಸುದ್ದಿ

ಬೆಂಗಳೂರಿನ ವೈದ್ಯಕೀಯ ಕಾಲೇಜಿನ 47 ವಿದ್ಯಾರ್ಥಿನಿಯರು ಅಸ್ವಸ್ಥ

ಬೆಂಗಳೂರಿನ ವೈದ್ಯಕೀಯ ಕಾಲೇಜು ಮತ್ತು ಸಂಶೋಧನಾ ಸಂಸ್ಥೆಯ ಬಾಲಕಿಯರ ಹಾಸ್ಟೆಲ್‌ನ 47 ವಿದ್ಯಾರ್ಥಿನಿಯರು ಅಸ್ವಸ್ಥಗೊಂಡಿದ್ದು, ಕೂಡಲೇ ಅವರನ್ನು ಏಕ್ಟೋರಿಯಾ ಆಸ್ಪತ್ರೆಗೆ ದಾಖಲಿಸಲಾಗಿದೆ.

ವಾಂತಿ-ಭೇದಿಯಿಂದ ತೀವ್ರ ಅಸ್ವಸ್ಥ ಗೊಂಡಿದ್ದು, 28 ವಿದ್ಯಾರ್ಥಿ ನಿಯರಿಗೆ ಟ್ರಾಮಾ ಕೇರ್ ಸೆಂಟರ್‌ನಲ್ಲಿ ಚಿಕಿತ್ಸೆ ನೀಡಲಾಗುತ್ತಿದ್ದರೆ, ಐವರಿಗೆ ಹೆಚ್ ಡ್ಡಾಕ್ ಹಾಗೂ ನಾಲ್ವರಿಗೆ ಐಸಿಯುನಲ್ಲಿ ಚಿಕಿತ್ಸೆ ಮುಂದುವರೆದಿದೆ. ಕಾಲರಾದಿಂದ ವಿದ್ಯಾರ್ಥಿಗಳು ಅಸ್ವಸ್ಥರಾಗಿದ್ದಾರೆ ಎಂದು ಸಹಪಾಠಿಗಳು ಹೇಳುತ್ತಿದ್ದಾರೆ. ಇನ್ನೊಂದು ಕಡೆ ಬೆಂಗಳೂರಿನಲ್ಲಿ ಹೆಚ್ಚು ತಾಪಮಾನ ನಡುವೆ ಕಾಲರಾ ಭೀತಿಯು ಶುರುವಾಗಿದೆ.

ಸದ್ಯ ವೈದ್ಯರು ಚಿಕಿತ್ಸೆ ನೀಡುತ್ತಿದ್ದು, ವಿದ್ಯಾರ್ಥಿನಿಯರ ಆರೋಗ್ಯ ಉತ್ತಮ ವಾಗಿದೆ. ವಿದ್ಯಾರ್ಥಿನಿಯರು ಅಸ್ವಸ್ಥಗೊಳ್ಳಲು ಕಾರಣವೇನು ಎಂಬುದರ ಬಗ್ಗೆ ಅಧಿಕಾರಿಗಳು ತನಿಖೆ ನಡೆಸುತ್ತಿದ್ದಾರೆ ಎಂದು ಬಿಎಂಸಿಆರ್‌ಐ ಮುಖ್ಯಸ್ಥ ಮತ್ತು ನಿರ್ದೇಶಕ ಡಾ.ರಮೇಶ್ ಕೃಷ್ಣ ತಿಳಿಸಿದ್ದಾರೆ.

ಹಾಸ್ಟೆಲ್‌ನಲ್ಲಿ ಕಲುಷಿತ ನೀರು ಸೇವಿಸಿ ದ್ದರಿಂದ ಕಾಲರಾ ಕಾಣಿಸಿಕೊಂಡಿದೆ ಎಂದು ವಿದ್ಯಾರ್ಥಿನಿಯರು ಹೇಳುತ್ತಿದ್ದಾರೆ. ಸದ್ಯ ಎಲ್ಲಾ ಹಾಸ್ಟೆಲ್ ವಿದ್ಯಾರ್ಥಿನಿಯರ ವೈದ್ಯಕೀಯ ಪರೀಕ್ಷೆ ನಡೆಸಲಾಗಿದ್ದು, ವರದಿ ಬಳಿಕ ನಿಖರ ಕಾರಣ ತಿಳಿದು ಬರಲಿದೆ.

ಜೈಲಿನಿಂದ ಸರ್ಕಾರ ನಡೆಸಲು ಬಯಸುವ ಕೇಜ್ರಿವಾಲ್‌ಗೆ ವಿಶೇಷ ಸವಲತ್ತು ನೀಡಲು ಆಗುವುದಿಲ್ಲ

ನವದೆಹಲಿ: 'ಜೈಲಿನಲ್ಲಿದ್ದುಕೊಂಡೇ ಸರ್ಕಾರವನ್ನು ಮುನ್ನಡೆಸಲು ಬಯಸು ತ್ತಾರೆ ಎಂಬ ಕಾರಣಕ್ಕೆ ದೆಹಲಿ ಮುಖ್ಯ ಮಂತ್ರಿ ಅರವಿಂದ ಕೇಜ್ರಿವಾಲ್ ಅವರಿಗೆ ವಿಶೇಷ ಸವಲತ್ತುಗಳನ್ನು ನೀಡಲು ಆಗುವುದಿಲ್ಲ' ಎಂದು ಜಾರಿ ನಿರ್ದೇಶ ನಾಲಯ (ಇ.ಡಿ) ನ್ಯಾಯಾಲಯಕ್ಕೆ ತಿಳಿಸಿದೆ.

ತನ್ನ ವಕೀಲರೊಂದಿಗೆ ಸಮಾ ಲೋಚನೆ ನಡೆಸುವುದಕ್ಕಾಗಿ ಹೆಚ್ಚು ಸಮಯ ನೀಡುವಂತೆ ಕೋರಿ ಕೇಜ್ರಿವಾಲ್ ಅವರು ಸಲ್ಲಿಸಿರುವ ಅರ್ಜಿ ವಿಚಾರಣೆ ವೇಳೆ, ಜಾರಿ ನಿರ್ದೇಶನಾಲಯ ಈ ವಾದ ಮಂಡಿಸಿತು. ಅಲ್ಲದೇ, ಹೆಚ್ಚು ಸಮಯ ನೀಡುವಂತೆ ಕೋರಿ ಕೇಜ್ರಿವಾಲ್ ಸಲ್ಲಿಸಿದ ಅರ್ಜಿಗೆ ವಿರೋಧ ವ್ಯಕ್ತಪಡಿಸಿತು.

ಸಿಬಿಐ ಮತ್ತು ಇ.ಡಿ ಪ್ರಕರಣಗಳಿಗೆ ಸಂಬಂಧಿಸಿದ ವಿಶೇಷ ನ್ಯಾಯಾಧೀಶ ಕಾವೇರಿ ಬವೇಜಾ ಅವರು ಅರ್ಜಿ ವಿಚಾರಣೆ ನಡೆಸಿ, ಸೋಮವಾರಕ್ಕೆ ಆದೇಶವನ್ನು ಕಾಯ್ದಿರಿಸಿದ್ದಾರೆ

ಕಾಂಗ್ರೆಸ್ ಸತ್ಯದ ಮೇಲೆ ಪ್ರಚಾರ ಮಾಡುತ್ತದೆ

ಕುರುಡುಮಲೆ ವಿನಾಯಕ ದೇವಸ್ಥಾನದಲ್ಲಿ ಸಿಎಂ ಪೂಜೆ

■ ಕಾಯಕಯೋಗಿ ಸುದ್ದಿ

ಬೆಂಗಳೂರು/ ಕೋಲಾರ: ಕುರುಡುಮಲೆ ವಿನಾಯಕ ದೇವಸ್ಥಾನದಲ್ಲಿ ಪೂಜೆ ಸಲ್ಲಿಸುವ ಮೂಲಕ ಲೋಕಸಭಾ ಚುನಾವಣೆ ಪ್ರಚಾರ ಕಾರ್ಯವನ್ನು ಶನಿವಾರ ಅಧಿಕೃತವಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ಆರಂಭಿಸಿದರು.

ಈ ವೇಳೆ ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದ ಅವರು, ಲೋಕಸಭೆ ಚುನಾವಣಾ ಪ್ರಚಾರ ಕಾರ್ಯ ಈಗಾಗಲೇ ಆರಂಭವಾಗಿದೆ ಆದರೆ ಇಂದು ಕುರುಡುಮಲೆ ಗಣೇಶ ದೇವಸ್ಥಾನದಲ್ಲಿ ಪೂಜೆ ಸಲ್ಲಿಸಿದ ಬಳಿಕ ಮುಳುಬಾಗಿಲಿನಿಂದಿಂದ ಅಧಿಕೃತವಾಗಿ ಆರಂಭವಾಗಲಿದೆ ಎಂದು ಹೇಳಿದರು.

ನಾನು ಈಗಾಗಲೇ ಕೆಲ ಕ್ಷೇತ್ರಗಳಲ್ಲಿ ಚುನಾವಣಾ ಪ್ರಚಾರ ನಡೆಸಿರುವುದನ್ನು ಜನ ನೋಡಿದ್ದಾರೆ. ಚಾಮರಾಜನಗರ, ಮೈಸೂರು –ಕೊಡಗು ಮತ್ತು ಚಿತ್ರದುರ್ಗ ಲೋಕಸಭಾ ಕ್ಷೇತ್ರಗಳಲ್ಲಿ ಕಾಂಗ್ರೆಸ್ ಅಭ್ಯರ್ಥಿಗಳ ಪರ ಪ್ರಚಾರ ನಡೆಸಿದ್ದೇನೆ. ಬಿಜೆಪಿ ನಾಯಕರು ಸುಳ್ಳಿನ ಮೇಲೆ ಪ್ರಚಾರ ಮಾಡುತ್ತಾರೆ ಆದರೆ ಕಾಂಗ್ರೆಸ್ ಸತ್ಯದ ಮೇಲೆ ಪ್ರಚಾರ ಮಾಡಲಿದೆ ಎಂದು ಹೇಳಿದರು.

ಈ ವೇಳೆ ಮಾತನಾಡಿದ ಡಿಸಿಎಂ ಡಿ ಕೆ ಶಿವಕುಮಾರ್, 1999ರಲ್ಲಿ ಎಸ್.ಎಂ.ಕೃಷ್ಣ ಕುರುಡುಮಲೆಯಿಂದ ಪಾಂಚಜನ್ಯ ಯಾತ್ರೆ ಆರಂಭಿಸಿ ಪಕ್ಷ ಅಧಿಕಾರಕ್ಕೆ ತಂದಿದ್ದರು. ಈಗ ಅದೇ ರೀತಿ ನಾನು ಪಾಂಚಜನ್ಯ ಮೊಳಗಿಸಲಿದ್ದೇನೆ. ತನ್ವೀರ್ ಸೇಠ್‌ರನ್ನ ಭೇಟಿ ಮಾಡಿ ಚರ್ಚೆ ಮಾಡುವೆ ಎಂದು ರಾಮಸಂದ್ರದಲ್ಲಿ ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್ ಹೇಳಿದರು. ಇನ್ನು ಡಿಕೆ ಶಿವಕುಮಾರ್ ಅವರಿಗೆ



ರಾಮಲಿಂಗಾರೆಡ್ಡಿ, ಕೆ.ಆರ್.ರಮೇಶ್ ಕುಮಾರ್, ಕೆ.ಹೆಚ್.ಮುನಿಯಪ್ಪ, ಬಿ.ಕೆ.ಹರಿಪ್ರಸಾದ್ ಸಾಥ್ ನೀಡಿದರು.

ಕುರುಡುಮಲೆ ಗಣೇಶನಿಗೆ ಡಿಕೆಶಿ ಪೂಜೆ: ಕೋಲಾರ ಜಿಲ್ಲೆ ಮುಳಬಾಗಿಲು ತಾಲೂಕಿನ ಕುರುಡುಮಲೆಗೆ ತೆರಳಿದ ಡಿ.ಕೆ.ಶಿವಕುಮಾರ್, ಕುರುಡುಮಲೆ ಗಣೇಶ ದೇಗುಲದಲ್ಲಿ ಪೂಜೆ ಸಲ್ಲಿಸಿದ್ದಾರೆ. ಬಳಿಕ ಕೋಲಾರದಲ್ಲಿ ಜನಧ್ವನಿ ಕಾರ್ಯಕ್ರಮದಲ್ಲಿ ಭಾಗಿಯಾಗಿದ್ದಾರೆ. ಪಕ್ಷ ಸಂಘಟನೆ ಮಾಡುವ ನಿಟ್ಟಿನಲ್ಲಿ ಇಂದು ಕುರುಡುಮಲೆಗೆ ಭೇಟಿ ನೀಡಿ ವಿನಾಯಕನಿಗೆ ಪೂಜೆ ಸಲ್ಲಿಸಲಾಗಿದೆ. ದರ್ಗಾಗೆ ಡಿಕೆಶಿ ಭೇಟಿ ಮುಳಬಾಗಿಲು ಪಟ್ಟಣದಲ್ಲಿರುವ ಪುರಾತನ ಇತಿಹಾಸ ಹೊಂದಿರುವ ಹೈದರ್ ಶಾಬ್ ದರ್ಗಾಕ್ಕೆ ಡಿಕೆಶಿ ಭೇಟಿ ನೀಡಿ ಪ್ರಾರ್ಥನೆ ಸಲ್ಲಿಸಿದ್ದಾರೆ. ಡಿಕೆಶಿ ಜೊತೆ ಸ್ಥಳೀಯ ಮುಖಂಡರು ಹಾಗೂ ರಾಜ್ಯ ನಾಯಕರು ಭಾಗಿಯಾಗಿದ್ದರು.

ಎಸ್‌ಎಸ್‌ಎಲ್‌ಸಿ ಪರೀಕ್ಷಾ ನಿಯಮ ಉಲ್ಲಂಘನೆ ಆರೋಪ ಇಬ್ಬರು ಮುಖ್ಯ ಶಿಕ್ಷಕರ ಅಮಾನತು

■ ಕಾಯಕಯೋಗಿ ಸುದ್ದಿ

ಮೈಸೂರು: ಎಸ್‌ಎಸ್‌ಎಲ್‌ಸಿ ಪರೀಕ್ಷಾ ಕೇಂದ್ರಗಳಲ್ಲಿ ವೆಬ್ ಕಾಸ್ಟಿಂಗ್ ಮತ್ತು ಸಿಸಿಟಿವಿ ಕ್ಯಾಮೆರಾಗಳ ನಿರ್ವಹಣೆಯಲ್ಲಿ ಲೋಪವೆಸಗಿದ ಆರೋಪದ ಹಿನ್ನೆಲೆಯಲ್ಲಿ ಮೈಸೂರಿನ ಕೆ.ಆರ್. ನಗರ ತಾಲೂಕಿನ ಇಬ್ಬರು ಮುಖ್ಯ ಶಿಕ್ಷಕರನ್ನು ಅಮಾನತುಗೊಳಿಸಿ ಆದೇಶ ಹೊರಡಿಸಲಾಗಿದೆ.



ಕೆ.ಆರ್. ನಗರ ತಾಲೂಕಿನ ಭೇರ್ಯ ಸರ್ಕಾರಿ ಪ್ರೌಢಶಾಲೆಯ ಮುಖ್ಯಶಿಕ್ಷಕಿ ಕಾತ್ಯಾಯಿನಿ ಹಾಗೂ ಹಂಪಾಪುರ ಶಾಲೆಯ ಮುಖ್ಯ ಶಿಕ್ಷಕ ಅರವಿಂದ ಅವರನ್ನು ಅಮಾನತು ಮಾಡಿ ಶಾಲಾ ಶಿಕ್ಷಣ ಇಲಾಖೆ ಆಯುಕ್ತರು ಆದೇಶ ಹೊರಡಿಸಿದ್ದಾರೆ. ಏಪ್ರಿಲ್ 2ರಂದು ಪರೀಕ್ಷೆ ಸಂದರ್ಭ ಈ ಕೇಂದ್ರಗಳಿಗೆ ಉಪನಿರ್ದೇಶಕರು ಭೇಟಿ ನೀಡಿ ಪರಿಶೀಲಿಸಿದ್ದರು. ಈ ಕೇಂದ್ರಗಳಲ್ಲಿ ನಿಯಮಾನುಸಾರ ಪರೀಕ್ಷೆ ವೇಳೆ ಪರೀಕ್ಷಾ ಕೊಠಡಿಗಳ ವೆಬ್ ಕಾಸ್ಟಿಂಗ್ ಮಾಡಿಲ್ಲ. ಕೆಲವು ಅವಧಿವರೆಗೆ ಉದ್ದೇಶಪೂರ್ವಕವಾಗಿ ಕ್ಯಾಮೆರಾಗಳನ್ನು ಬಂದ್ ಮಾಡಲಾಗಿದೆ. ಹೀಗಾಗಿ ಪರೀಕ್ಷಾ ಅಕ್ರಮ ನಡೆದಿರುವ ಸಾಧ್ಯತೆ ಇದೆ ಎಂಬ ಆರೋಪ ಕೇಳಿ ಬಂದಿತ್ತು.

ಪರೀಕ್ಷಾ ಕೇಂದ್ರದ ನಿರ್ವಹಣೆಯಲ್ಲಿ ಲೋಪ ತೋರಿದ ಆರೋಪದ ಮೇಲೆ ಡಿಡಿಪಿಐ ನೀಡಿರುವ ವರದಿ ಆಧರಿಸಿ ಶಿಕ್ಷಣ ಇಲಾಖೆ ಆಯುಕ್ತರಾದ ಬಿ.ಬಿ. ಕಾವೇರಿ ಅಮಾನತು ಆದೇಶ ಹೊರಡಿಸಿದ್ದಾರೆ.

ಅಪರಾಧ ಪ್ರಕರಣಗಳು : ಜಿಲ್ಲೆಯಿಂದ 15 ಮಂದಿ ಗಡಿಪಾರು

■ ಕಾಯಕಯೋಗಿ ಸುದ್ದಿ



ತುಮಕೂರು: ಲೋಕಸಭಾ ಚುನಾವಣೆಯನ್ನು ಶಾಂತಿಯುತ ಹಾಗೂ ನ್ಯಾಯಸಮ್ಮತವಾಗಿ ನಡೆಸಲು ಸಾರ್ವಜನಿಕ ಶಾಂತಿ ಕಾಪಾಡುವ ಸಲುವಾಗಿ, ಪದೇ ಪದೇ ಅಪರಾಧಿ ಚಟುವಟಿಕೆಗಳಲ್ಲಿ ಭಾಗಿಯಾದ ಆರೋಪ ಹೊತ್ತಿರುವ 15 ಮಂದಿಯನ್ನು ಗಡಿಪಾರು ಮಾಡಿ ತುಮಕೂರು ಪೊಲೀಸ್ ವರಿಷ್ಠಾಧಿಕಾರಿ ಆರೋಜ್ ಕೆ ಎ ಆದೇಶಿದ್ದಾರೆ.

ಲೋಕಸಭಾ ಚುನಾವಣೆಯನ್ನು ಶಾಂತಿಯುತ ಹಾಗೂ ನ್ಯಾಯ ಸಮ್ಮತವಾಗಿ ನಡೆಸುವ ಸಂಬಂಧ ಕಾನೂನು ಸುವ್ಯವಸ್ಥೆ ಹಾಳು ಮಾಡುವಂತಹ ಹಿನ್ನೆಲೆಯುಳ್ಳ 11 ಪೊಲೀಸ್ ಠಾಣಾ ವ್ಯಾಪ್ತಿಯ 15 ಜನರನ್ನು ಗಡಿಪಾರು ಮಾಡಲಾಗಿದೆ.

ತಿಪಟೂರು ನಗರ ಸಲ್ಟಾನ್ ಹಾಗೂ ಚೇತನ ಬಿ.ಆರ್, ತುರುವೇಕೆರೆ ತಂಡಗ ಗ್ರಾಮದ ನಾಗರಾಜು ಟಿ.ಎಸ್ ಹಾಗೂಕೊಡಗಿಹಳ್ಳಿ ಗ್ರಾಮದ ಮಂಜುನಾಥ, ಹುಳಿಯಾರು ಪಟ್ಟಣದ ಹರೀಶ, ಚಿಕ್ಕನಾಯಕನಹಳ್ಳಿ ತಾಲ್ಲೂಕಿನ ಹರೀಶ್ ನಾಯ್ಕ್, ಕೆಂಕೆರೆ ಗ್ರಾಮದ ಬಸವರಾಜು, ಕುಣಿಗಲ್ ತಾಲ್ಲೂಕು ಕೂಕರಾಬಳ್ಳಿ ಆಕಾಶ್ ಕೆ.ಡಿ ಹಾಗೂ ಮಾವಿನಕಟ್ಟೆ ಪಾಳ್ಯ ಗ್ರಾಮದ ಶ್ರೀನಿವಾಸ, ತಿಪಟೂರು ಗ್ರಾಮಾಂತರದ ಶಶಿಧರ, ಅಳ್ಳೇರಹಳ್ಳಿ ಗ್ರಾಮದ ಯಧಾನಂದನ, ತುಮಕೂರು ತಿಲಕ್ ಪಾರ್ಕ್ ಠಾಣಾ ವ್ಯಾಪ್ತಿಯ ಅಲಿ ಹುಸೇನ್, ಜಯನಗರದ ಸಂಪತ್ ಕುಮಾರ್, ಹೊಸ ಬಡಾವಣೆ ರವಿಕುಮಾರ, ಗುಬ್ಬಿ ಠಾಣೆ ವ್ಯಾಪ್ತಿಯ ಫರ್ಮಾನ್ ಖಾನ್, ತುರುವೇಕೆರೆ ತಾಲ್ಲೂಕು ಚಿಕ್ಕಶೆಟ್ಟಿಕೆರೆ ಕೋರ ಕಿರಣ್, ಪಾವಗಡ ತಾಲ್ಲೂಕು ವೈಎನ್ ಹೊಸಕೋಟೆ ವಿರೇಶ ಸೇರಿದಂತೆ ಒಟ್ಟು 15 ಜನರನ್ನು ಗಡಿಪಾರು ಮಾಡಿ ಆದೇಶಿಸಿದ್ದಾರೆ.

ಚುನಾವಣಾ ಚೆಕ್ ಪೋಸ್ಟ್‌ಗೆ ಲಾರಿ ಡಿಕ್ಕಿ: ಸಿಬ್ಬಂದಿ ಪಾರು

ರಾಮನಗರ: ಚುನಾವಣಾ ಚೆಕ್ ಪೋಸ್ಟ್‌ಗೆ ಡಿಕ್ಕಿ ಹೊಡೆದು ಲಾರಿ ಪಲ್ಟಿಯಾದ ಘಟನೆ ಚನ್ನಪಟ್ಟಣ ತಾಲೂಕಿನ ಕೋಲೂರು ಗ್ರಾಮದ ಬಳಿ ತಡರಾತ್ರಿ ನಡೆದಿದೆ. ಮರದ ಹೊಟ್ಟು ತುಂಬಿಕೊಂಡು ಮಂಡ್ಯದಿಂದ ಬೆಂಗಳೂರು ಕಡೆಗೆ ಹೋಗುತ್ತಿದ್ದ ಲಾರಿ ಚೆಕ್ ಪೋಸ್ಟ್‌ಗೆ ಡಿಕ್ಕಿ ಹೊಡೆದು ಪಲ್ಟಿಯಾಗಿದೆ. ಅದೃಷ್ಟವಶಾತ್ ಕೂದಲೆಳೆ ಅಂತರದಲ್ಲಿ ಪ್ರಾಣಾಪಾಯ ದಿಂದ ಕರ್ತವ್ಯ ನಿರತರಾಗಿದ್ದ ಸಿಬ್ಬಂದಿ ಪಾರಾಗಿದ್ದಾರೆ. ಚನ್ನಪಟ್ಟಣ ಸಂಚಾರಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಲಾರಿ ಚಾಲಕನನ್ನು ಪೊಲೀಸರು ವಶಕ್ಕೆ ಪಡೆದು ವಿಚಾರಣೆ ನಡೆಸುತ್ತಿದ್ದಾರೆ.

ಬ್ಯಾರಿಗಳು ಉದ್ಯೋಗ ಕೇಳುವವರಾಗದೆ ಉದ್ಯೋಗ ನೀಡುವವರಾಗಬೇಕು

ಬೆಂಗಳೂರು: ಬ್ಯಾರಿ ಸಮುದಾಯದ ಯುವಕರು ಆರ್ಥಿಕವಾಗಿ ಸಬಲೀಕರಣಗೊಂಡು ಸಮುದಾಯದ ನಿರುದ್ಯೋಗಿಗಳಿಗೆ ಉದ್ಯೋಗ ನೀಡುವಂತಾಗಬೇಕು ಎಂದು ಖ್ಯಾತ ಉದ್ಯಮಿ ಟಿ.ಕೆ.ಉಮರ್ ಹೇಳಿದರು.

ಬೆಂಗಳೂರಿನಲ್ಲಿ ನೆಲೆಸಿರುವ ಬ್ಯಾರಿ ಸಮುದಾಯದ ಸಣ್ಣ ಉದ್ಯಮಿಗಳು–ವ್ಯಾಪಾರಿಗಳು ಹಾಗೂ ವಿವಿಧ ರೀತಿಯ ವ್ಯವಹಾರಗಳನ್ನು ನಡೆಸುವ ಬ್ಯಾರಿಗಳನ್ನು ಸಂಘಟಿಸಿ ಅವರನ್ನು ಸಮುದಾಯದ ಪ್ರಗತಿಗೆ ಪೂರಕವಾದ ವಿವಿಧ ಕ್ಷೇತ್ರದ ಅಭಿವೃದ್ಧಿ ಕಾರ್ಯಗಳಲ್ಲಿ ತೊಡಗುವಂತೆ ಉತ್ತೇಜಿಸುವ ಉದ್ದೇಶದಿಂದ ಬೆಂಗಳೂರಿನಲ್ಲಿ ಇತ್ತೀಚೆಗೆ ಬೆಂಗಳೂರು ಬ್ಯಾರೀಸ್ ಫಾರಂ ನ ಸದಸ್ಯರು ಸಂಘಟಿಸಿದ್ದ 'ಇಫ್ತಾರ್ ಕೂಟ'ದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಬ್ಯಾರಿ ಭವನದಲ್ಲಿ ನಡೆದ ಈ ಸಭೆಯಲ್ಲಿ ಫಾರಂನ ಸದಸ್ಯರು ತಮ್ಮ ಸಂಘಟನೆಯ ಧ್ಯೇಯೋದ್ದೇಶ ಹಾಗೂ ಯೋಜನೆಗಳ ಮಾಹಿತಿಯನ್ನು ಹಂಚಿಕೊಂಡರು.

ಬೆಂಗಳೂರಿನಲ್ಲಿ ವಾಸಿಸುವ ಬ್ಯಾರಿಗಳ ಸಮೀಕ್ಷೆಯನ್ನು ನಡೆಸಿ ಅವರಿಗೆ ನೆರವು–ಪ್ರೋತ್ಸಾಹ–ಸಹಯೋಗ ನೀಡುವ ಕೇಂದ್ರೀಕೃತ ಪದ್ಧತಿಯನ್ನು ರೂಪಿಸುವುದು, ಬ್ಯಾರಿ ಸಮುದಾಯಕ್ಕೆ ಬೆಂಗಳೂರಿನ ಅವಕಾಶಗಳ ಬಗ್ಗೆ ಮಾರ್ಗದರ್ಶನ ನೀಡುವುದು, ಹೆಲ್ಪ್ ಸೆಂಟರ್ ನಿರ್ಮಿಸಿ ಆ ಮೂಲಕ ಅವರ ಬೇಡಿಕೆ ಮತ್ತು ತುರ್ತು ನೆರವುಗಳಿಗೆ ಸ್ಪಂದಿಸುವುದು, ಆರ್ಥಿಕ ಶಿಸ್ತು ಮತ್ತು ವ್ಯವಹಾರ ಹೊಣೆಗಾರಿಕೆಯ ಮಾದರಿಯನ್ನು ರೂಪಿಸುವುದು, ಶೈಕ್ಷಣಿಕವಾಗಿ ಅಗತ್ಯ ಇರುವ ನೆರವನ್ನು ಪ್ರೋತ್ಸಾಹ ಮತ್ತು ಸೂಚನೆಗಳನ್ನು ನೀಡುವ ಬಗ್ಗೆ ಸಭೆಯಲ್ಲಿ ಚರ್ಚಿಸಲಾಯಿತು. ಇದೇ ವೇಳೆ ಇತ್ತೀಚೆಗೆ ನೂತನವಾಗಿ ನೇಮಕಗೊಂಡ ಬ್ಯಾರಿ ಅಕಾಡೆಮಿ ಅಧ್ಯಕ್ಷ ಯು.ಎಚ್. ಉಮರ್ ಅವರನ್ನು ಸನ್ಮಾನಿಸಲಾಯಿತು.

ಎಸ್.ಬಾಲರಾಜ್ ವಿರುದ್ಧ ಅಪಪ್ರಚಾರ ; ಇಬ್ಬರ ವಿರುದ್ಧ ದೂರು

ಚಾಮರಾಜನಗರ: ಚಾಮರಾಜ ನಗರ ಲೋಕಸಭಾ ಕ್ಷೇತ್ರದ ಬಿಜೆಪಿ ಮತ್ತು ಜೆಡಿಎಸ್ ಮೈತ್ರಿ ಅಭ್ಯರ್ಥಿ ಎಸ್. ಬಾಲರಾಜು ವಿರುದ್ಧ ಅಪಪ್ರಚಾರ ಮಾಡಿದವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಪಟ್ಟಣದ ದುರ್ಯೋಧ ಬುದ್ಧ ಎಂಬುವರು ಪಟ್ಟಣ ಪೊಲೀಸ್ ಠಾಣೆಗೆ ದೂರು ನೀಡಿದ್ದಾರೆ. ಹಿರಿಯ ರಾಜಕಾರಣಿ ಹಾಗೂ ಸಂಸದ ವಿ.ಶ್ರೀನಿವಾಸ್ ಪ್ರಸಾದ್ ಅವರು ಉತ್ತಮ ಸಂಬಂಧವನ್ನು ಹೊಂದಿದ್ದಾರೆ. ಇದನ್ನು ಸಹಿಸಲಾಗದ ಸುನೀಲ್ ಬೋಸ್ ಅಭಿಮಾನಿ ಬಳಗದ ನವಾಜ್, ರವಿ ಎನ್ನುವರು ಸಾಮಾಜಿಕ ಜಾಲತಾಣಗಳಲ್ಲಿ ಬಾಲರಾಜ್ ಅವರ ವಿರುದ್ಧ ಅಪಪ್ರಚಾರ ಮಾಡುತ್ತಿದ್ದಾರೆ ಎಂದು ದೂರಿನಲ್ಲಿ ತಿಳಿಸಿದ್ದಾರೆ. ವಿ.ಶ್ರೀನಿವಾಸಪ್ರಸಾದ್ ಅವರನ್ನು ಅವಹೇಳನ ಮಾಡಿದ್ದಾರೆ ಎಂಬ ಎಸ್.ಬಾಲರಾಜ್ ಅವರ ಹೇಳಿಕೆಯನ್ನು ರವಿ ಮತ್ತು ನವಾಜ್ ಅವರು ಸಾಮಾಜಿಕ ಜಾಲತಾಣಗಳಲ್ಲಿ ಹರಿಯ ಬಿಟ್ಟಿದ್ದಾರೆ ಎಂದು ದೂರಿನಲ್ಲಿ ತಿಳಿಸಿದ್ದಾರೆ. ಈ ಸಂಬಂಧ ಪಟ್ಟಣ ಠಾಣೆಯ ಪೊಲೀಸರು ದೂರು ಪಡೆದು ವಿಚಾರಣೆ ನಡೆಸಿ ಮುಂದಿನ ಕ್ರಮ ಜರುಗಿಸುವುದಾಗಿ ತಿಳಿದಿದ್ದಾರೆ.

ಚುನಾವಣೆ ಎಂಬುವುದು ಮನೋರಂಜನೆಯಲ್ಲ, ಅದು ಬದುಕು ಕಟ್ಟುವ ಪ್ರಕ್ರಿಯೆ: ರಮೇಶ್

■ ಕಾಯಕಯೋಗಿ ಸುದ್ದಿ



ಮಂಡ್ಯ: ಚುನಾವಣೆ ಎಂಬುದು ಮನೋರಂಜನೆಯಲ್ಲ. ಅದು ಬದುಕು ಕಟ್ಟುವ ಪ್ರಕ್ರಿಯೆ. ಜವಾಬ್ದಾರಿಯುತವಾಗಿ ತಪ್ಪದೇ ನೈತಿಕ ಮತದಾನ ಮಾಡಿ ಉತ್ತಮ ನಾಯಕರನ್ನು ಆಯ್ಕೆ ಮಾಡಿ ಉತ್ತಮ ಸಮಾಜವನ್ನು ಕಟ್ಟಿ, ಸಮಾಜದಲ್ಲಿ ಬದುಕನ್ನು ರೂಪಿಸಿಕೊಳ್ಳಿ ಎಂದು ಹಿರಿಯ ರಂಗಕರ್ಮಿ, ನಿರ್ದೇಶಕ, ನಟ ಹಾಗೂ ಮಂಡ್ಯ ಜಿಲ್ಲಾ ಸ್ವೀಪ್ ಐಕಾನ್ ಮಂಡ್ಯ ರಮೇಶ್ ಅವರು ಅಭಿಪ್ರಾಯ ವ್ಯಕ್ತ ಪಡಿಸಿದರು.

ಅವರು ಇಂದು ಜಿಲ್ಲಾಡಳಿತ ಹಾಗೂ ಸ್ವೀಪ್ ಸಮಿತಿ ವತಿಯಿಂದ ಡಾ ಬಿ ಆರ್ ಅಂಬೇಡ್ಕರ್ ಭವನದಲ್ಲಿ ಮತದಾನದ ಮಹತ್ವ ಹಾಗೂ ನೈತಿಕ ಮತದಾನ ಕುರಿತು ಜಾಗೃತಿ ಮೂಡಿಸುವ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು. ಮನೋರಂಜನೆಗಾಗಿ ನಾವು ಬಹಳಷ್ಟು ಸಮಯವನ್ನು ಜಂಗಮವಾಣಿಯೊಂದಿಗೆ ಕಳೆಯುತ್ತೇವೆ. ದೇಶದ ಪ್ರಜಾಪ್ರಭುತ್ವ ವ್ಯವಸ್ಥೆಯನ್ನು ಎತ್ತಿಹಿಡಿಯುವ ಮತದಾನಕ್ಕಾಗಿ ಏಪ್ರಿಲ್ 26 ರಂದು ಸಮಯ ಮೀಸಲಿಟ್ಟು, ತಪ್ಪದೇ ಮತದಾನ ಮಾಡೋಣ ಎಂದರು.

ಒಂದು ಮತದಾನದಿಂದ ಯಾವ ಬದಲಾವಣೆಯಾಗುತ್ತದೆ ಎಂಬ ಆಲೋಚನೆಯನ್ನು ದೂರಮಾಡಿಕೊಳ್ಳಬೇಕು. ಬೇರೆ ಊರು, ದೇಶಗಳಿಂದ ಬಂದು ತಮ್ಮ ಮತದಾನದ ಹಕ್ಕನ್ನು ಚಲಾಯಿಸುವ ಜನರಿದ್ದಾರೆ. ಅವರು ನಮಗೆ ನಿದರ್ಶನವಾಗಬೇಕು. ಮತದಾನ ಪವಿತ್ರವಾದ, ಜವಾಬ್ದಾರಿಯುತ ಹಾಗೂ ಆತ್ಮತೃಪ್ತಿ ನೀಡುವ ಕೆಲಸ. ಎಲ್

website: www.kayakayogi.com

ಕಾಯಕ ಯೋಗಿ

KAYAKA YOGI - Regional Daily

ಪುಟ-2 | 07-04-2024

ಮಂಡ್ಯ

ರಾಹುಲ್‌ಗಾಂಧಿಯವರ ಭಾರತ್ ಜೋಡೋ ಯಾತ್ರೆ ಸಂಪೂರ್ಣ ವಿಫಲ

■ ಕಾಯಕಯೋಗಿ ಸುದ್ದಿ

ಮಂಡ್ಯ : ಬಿಜೆಪಿ ಭಾರತ್ ಜೋಡೋ ಕೆಲಸ ಮಾಡಿದರೆ, ಕಾಂಗ್ರೆಸ್ ಭಾರತ್ ತೋಡೋ ಕೆಲಸ ಮಾಡುತ್ತಿದೆ ಎಂದು ಬಿಜೆಪಿ ಜಿಲ್ಲಾಧ್ಯಕ್ಷ ಡಾ. ಎಸ್.ಎನ್. ಇಂದ್ರೇಶ್ ತಿಳಿಸಿದರು.

ನಗರದ ಬಿಜೆಪಿ ವಿಕಾಸ ಭವನದಲ್ಲಿ ನಡೆದ ಬಿಜೆಪಿ ಸಂಸ್ಥಾಪನಾ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ರಾಹುಲ್‌ಗಾಂಧಿಯವರ ಭಾರತ್ ಜೋಡೋ ಯಾತ್ರೆ ಸಂಪೂರ್ಣ ವಿಫಲವಾಗಿದೆ. ನಕ್ಸಲೈಟ್‌ಗಳು, ವಿಭಜನವಾದಿಗಳು, ಗಡಿ ಸಮಸ್ಯೆಗಳಿಗೆ ಮತ್ತು ದೇಶ ವಿಭಜಿಸುವ ಶಕ್ತಿಗಳನ್ನು ಕಾಂಗ್ರೆಸ್ ಬೆಂಬಲಿಸಿತ್ತು ಎಂದು ಜನರಿಗೆ ತಿಳಿದಿತ್ತು. ಆದ್ದರಿಂದ ಈ ಯಾತ್ರೆಗೆ ಜನ ಸಮರ್ಥನೆ ಸಿಕ್ಕಿಲ್ಲ ಎಂದು ಹೇಳಿದರು.

ಕಾಂಗ್ರೆಸ್ ಪಕ್ಷ ತುಷ್ಟೀಕರಣದ ರಾಜಕೀಯ ಮಾಡುತ್ತಿದೆ. ದಿಗ್ವಿಜಯ್‌ಸಿಂಗ್ ಮತ್ತು ಕಂಪನಿಯು ಸರ್ಜಿಕಲ್ ಸ್ಟ್ರೈಕ್‌ಗೆ ಸಾಕ್ಷಿ ಕೇಳುತ್ತಾರೆ. ದೇಶದ ವಿಕಸಿತ, ಅಖಂಡತೆ ಕುರಿತು ಕಾಂಗ್ರೆಸ್ ಎಂದೂ ಚಿಂತಿಸಿಲ್ಲ. ನೆಹರು ಆಡಳಿತದಲ್ಲಿದ್ದಾಗ ಕಾಶ್ಮೀರದಲ್ಲಿ ಪ್ರತ್ಯೇಕ ಧ್ವಜ, ವಿಶೇಷ ಸ್ಥಾನಮಾನಕ್ಕೆ ಒಪ್ಪಂದ ಆಗಿತ್ತು. ಮೋದಿಜಿ ಅವರು 370ನೇ ವಿಧಿಯನ್ನು ರದ್ದುಪಡಿಸಿದರು. ಬಿಜೆಪಿ ದೇಶದ ವಿಕಸಿತ, ಅಖಂಡತೆಗಾಗಿ ಶ್ರಮಿಸುತ್ತಿದೆ ಎಂದು ತಿಳಿಸಿದರು.

ಬಿಜೆಪಿ ಜಿಲ್ಲಾ ವಕ್ತಾರ ಸಿ.ಟಿ. ಮಂಜುನಾಥ್ ಮಾತನಾಡಿ, ಕಾಂಗ್ರೆಸ್ ಪಕ್ಷ ಸದಾ ದೇಶ, ಧರ್ಮ ಮತ್ತು ಜಾತಿಯನ್ನು ಒಡೆಯುವ ಕೆಲಸ ಮಾಡುತ್ತಿದೆ. ಇದಕ್ಕೆ ರಾಹುಲ್‌ಗಾಂಧಿ ಅವರು ಭಾರತ ಒಂದು ದೇಶವಲ್ಲ. ಬರೀ ರಾಜ್ಯಗಳ ಒಕ್ಕೂಟ ಮಾತ್ರ ಎಂದು ಹೇಳಿರುವುದೇ ಉದಾಹರಣೆಯಾಗಿದೆ ಎಂದು ದೂರಿದರು.

ಡಿ.ಕೆ. ಸುರೇಶ್‌ರಿಂದ ಹಿಡಿದು ನೂತನವಾಗಿ ಆಯ್ಕೆಯಾದ ರಾಜ್ಯಸಭಾ ಸದಸ್ಯ ನಾಸೀರ್ ಹುಸೇನ್ ಸಹಚರರ ಪಾಕಿಸ್ತಾನ ಜಿಂದಾಬಾದ್ ಹೇಳಿಕೆವರೆಗೆ ಇದನ್ನೇ ಮಾಡಿಕೊಂಡು ಬಂದಿದೆ. ತಮ್ಮ ಅಣ್ಣನ ಮೇಲಿರುವ ಕೇಸಿನಿಂದ ಡಿ.ಕೆ. ಸುರೇಶ್ ಅವರು ದೇಶ ಒಡೆಯುವ ಹುನ್ನಾರ ಮಾಡುತ್ತಿದ್ದಾರೆ ಎಂದು ಆರೋಪಿಸಿದರು.

ಚಿದಂಬರಂ ಅವರು ಪಂಚ ರಾಜ್ಯಗಳ ಚುನಾವಣೆಯ ನಂತರ ದಕ್ಷಿಣ ಭಾರತ ಮತ್ತು ಉತ್ತರ ಭಾರತ ಎಂಬ ವಿಭಜನೆಯನ್ನು ಎಕ್ಸ್ ಖಾತೆಯಲ್ಲಿ ಬೆಂಬಲಿಸಿದ್ದಾರೆ. ಕಾಶ್ಮೀರ ಪ್ರತ್ಯೇಕವಾಗಬೇಕೆನ್ನುವ ಅಬ್ದುಲ್ಲಾ ಅವರ ಪಕ್ಷವು ಇಂಡಿ ಆಲ್ಯೆನ್ಸ್‌ನ ಭಾಗವಾಗಿದೆ. ಕಾಂಗ್ರೆಸ್‌ನವರು ಜೈ ಭಾರತ ಜನನಿಯ ತನುಜಾತೆ ಜಯಹೇ ಕರ್ನಾಟಕ ಮಾತೆ ಎಂಬುದರ ವಿರುದ್ಧ ನಡೆದುಕೊಳ್ಳುತ್ತಿದ್ದಾರೆ ಎಂದು ಆಕ್ರೋಶ ವ್ಯಕ್ತಪಡಿಸಿದರು. ಬಿಜೆಪಿ ಮುಖಂಡರಾದ ವಿವೇಕ್, ಪ್ರೀತಂ, ಸುರೇಶ್, ನಾಗಾನಂದ್, ವಸಂತ್‌ಕುಮಾರ್, ಪುಟ್ಟಮ್ಮ, ತಾಯಮ್ಮ, ಮಾಧು, ಆನಂದ್, ರಾಸಿ. ಸಿದ್ದರಾಜುಗೌಡ ಇತರರು ಸಮಾರಂಭದಲ್ಲಿ ಭಾಗವಹಿಸಿದ್ದರು.

ಕಾಯಕ ಯೋಗಿ ಪತ್ರಿಕೆ ಕೊಂಡು ಓದಿ

ಮತಗಟ್ಟೆಗಳಲ್ಲಿ ಮೂಲಭೂತ ವ್ಯವಸ್ಥೆಗಳಲ್ಲಿ ಯಾವುದೇ ಲೋಪವಾಗದಂತೆ ನೋಡಿಕೊಳ್ಳಿ

■ ಕಾಯಕಯೋಗಿ ಸುದ್ದಿ

ಮಂಡ್ಯ: ಸಾರ್ವಜನಿಕರು ಮತದಾನ ಮಾಡಲು ಮತಗಟ್ಟೆಗೆ ಆಗಮಿಸಿದಾಗ ಅವರಿಗೆ ತೊಂದರೆಯಾಗದಂತೆ ಕುಡಿಯುವ ನೀರು, ಶೌಚಾಲಯ, ರ್‍ಯಾಂಪ್ ಸೇರಿದಂತೆ ಎಲ್ಲಾ ರೀತಿಯ ಮೂಲಭೂತ ವ್ಯವಸ್ಥೆಗಳು ಇರಬೇಕು. ಈ ಕುರಿತಂತೆ ಸಹಾಯಕ ಚುನಾವಣಾಧಿಕಾರಿಗಳು ತಮ್ಮ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಮತಗಟ್ಟೆಗಳನ್ನು ಪರಿಶೀಲಿಸಿಕೊಳ್ಳಬೇಕು ಎಂದು ಮಂಡ್ಯ ಲೋಕಸಭಾ ಕ್ಷೇತ್ರದ ಸಾಮಾನ್ಯ ಚುನಾವಣಾ ವೀಕ್ಷಕರಾದ ನೀರಜ್ ಕುಮಾರ್ ಅವರು ತಿಳಿಸಿದರು.



ಜಿಲ್ಲಾ ಪಂಚಾಯತ್ ಕಚೇರಿ ಸಭಾಂಗಣದಲ್ಲಿ ಆಯೋಜಿಸಲಾಗಿದ್ದ ಅಧಿಕಾರಿಗಳ ಸಭೆಯಲ್ಲಿ ಭಾಗವಹಿಸಿ ಮಾತನಾಡಿದರು. ಮುಕ್ತ ಹಾಗೂ ನ್ಯಾಯಸಮ್ಮತ ಚುನಾವಣೆ ನಡೆಯಬೇಕು. ಮಾದರಿ ನೀತಿ ಸಂಹಿತೆ ಉಲ್ಲಂಘನೆಯಾಗದಂತೆ ಎಚ್ಚರಿಕೆಯಿಂದ ಕಾರ್ಯನಿರ್ವಹಿಸಿ ಎಂದು ಅಧಿಕಾರಿಗಳಿಗೆ ತಿಳಿಸಿದರು.

85 ವರ್ಷ ಮೇಲ್ಪಟ್ಟ ಹಾಗೂ ವಿಕಲಚೇತನರಿಗೆ ಮನೆಯಿಂದ ಮತದಾನ ಮಾಡಲು ಅವಕಾಶ ಕಲ್ಪಿಸಲಾಗಿದ್ದು, ಅರ್ಹರಿಗೆ ಫಾರಂ 12 ಡಿ ನೀಡಿ ಸಮ್ಮತಿ ಪಡೆದಿರುವ ಬಗ್ಗೆ, ಮತದಾನಕ್ಕೆ ಮಾಡಿಕೊಂಡಿರುವ ವ್ಯವಸ್ಥೆಯ ಬಗ್ಗೆ ಮಾಹಿತಿ ಪಡೆದುಕೊಂಡ ವೀಕ್ಷಕರು. ಜಿಲ್ಲೆಯಲ್ಲಿ ಹೆಚ್ಚು ಮತದಾನ ಜಾಗೃತಿ ಕಾರ್ಯಕ್ರಮವನ್ನು ಆಯೋಜಿಸಿ, ಸಾರ್ವಜನಿಕರಿಗೆ ಮತದಾನದ ಮಹತ್ವದ ಬಗ್ಗೆ ತಿಳಿಸಿ ಎಂದರು.

ಚುನಾವಣೆಯಲ್ಲಿ ನಡೆಯುವ ಅಕ್ರಮಗಳ ಬಗ್ಗೆ ಸಾರ್ವಜನಿಕರು ಸಿ.ವಿಜಿಲ್ ???ಪ್ ಮೂಲಕ ದೂರುಗಳನ್ನು ಸಲ್ಲಿಸಬಹುದಾಗಿದ್ದು, ಬರುವ ದೂರುಗಳನ್ನು 100 ನಿಮಿಷದಲ್ಲಿ ವಿಲೇವಾರಿ ಮಾಡಬೇಕು. ಯಾವುದೇ ಚುನಾವಣಾ ಅಕ್ರಮಗಳಿಗೆ ಅವಕಾಶ ನೀಡದಂತೆ ಚುನಾವಣಾ ಪ್ರಚಾರಗಳಿಗೆ ಬಳಸುವ ವಸ್ತುಗಳನ್ನು ಸರಿಯಾಗಿ ಲೆಕ್ಕ ಮಾಡಿ ವರದಿಯನ್ನು ವೆಚ್ಚವೀಕ್ಷಕರಿಗೆ ಒದಗಿಸಿ ಎಂದರು.

ಮಸ್ಟರಿಂಗ್, ಡಿ.ಮಸ್ಟರಿಂಗ್, ಸ್ಟ್ರಾಂಗ್ ರೂಂ ಗಳಲ್ಲಿ ಚುನಾವಣಾ ಆಯೋಗ ನೀಡಿರುವ ನಿರ್ದೇಶನದಂತೆ ಎಲ್ಲಾ ರೀತಿಯ ಸಿದ್ಧತೆಗಳನ್ನು ಮಾಡಿಕೊಳ್ಳಬೇಕು. ಚುನಾವಣಾ ಕೆಲಸಕ್ಕೆ ನಿಯೋಜನೆಯಾಗಿರುವ ವಾಹನಗಳಿಗೆ ಜಿ.ಪಿ.ಎಸ್ ಅಳವಡಿಕೆಯ ಬಗ್ಗೆ ಮಾಹಿತಿ ಪಡೆದುಕೊಂಡ ವೀಕ್ಷಕರು, ಎಲ್ಲಾ ವಿಧಾನಸಭಾ ಕ್ಷೇತ್ರಕ್ಕೂ ಭೇಟಿ ನೀಡಿ ಪರಿಶೀಲನೆ ನಡೆಸಲಾಗುವುದು ಎಂದರು.

ದೊಡ್ಡ ರ‍್ಯಾಲಿಗಳು, ಚುನಾವಣಾ ಪ್ರಚಾರ ಸಮಾರಂಭಗಳು ನಡೆಯುವ ಸಂದರ್ಭದಲ್ಲಿ ಸ್ಥಳದ ವ್ಯಾಪ್ತಿಗೆ ನಿಯೋಜನೆಗೊಂಡಿರುವ ಎಫ್.ಎಸ್.ಟಿ ಹಾಗೂ ವಿವಿಟಿ ತಂಡದವರು ಪೂರ್ಣಪ್ರಮಾಣದಲ್ಲಿ ನಿಗಾ ಇಡಲು ಸಾಧ್ಯವಾಗುವುದಿಲ್ಲ. ಹೆಚ್ಚಿನ ಎಫ್.ಎಸ್.ಟಿ ಹಾಗೂ ವಿವಿಟಿ ತಂಡದವರನ್ನು ನಿಯೋಜಿಸುವಂತೆ ಚುನಾವಣಾ ವೆಚ್ಚ ವೀಕ್ಷಕರಾದ ರೋಹಿತ್ ಅಸುದಾನಿ ಅವರು ತಿಳಿಸಿದರು.

ಜಿಲ್ಲಾಧಿಕಾರಿ ಡಾ: ಕುಮಾರ ಅವರು ವೀಕ್ಷಕರುಗಳಿಗೆ ಚುನಾವಣೆಗೆ ಸಂಬಂಧಿಸಿದಂತೆ ವಿವಿಧ ನೋಡಲ್ ಅಧಿಕಾರಿಗಳು, ಸಹಾಯಕ ಚುನಾವಣಾಧಿಕಾರಿಗಳ ನೇಮಕ, ಮತದಾರರ ಸಂಖ್ಯೆ, ಮತಗಟ್ಟೆಗಳು, ಸೂಕ್ಷ್ಮ ಮತಗಟ್ಟೆ ಚಿಕ್ ಫೋಸ್ಟ್, 85 ವರ್ಷ ಮೇಲ್ಪಟ್ಟ ಹಾಗೂ ವಿಕಲಚೇತನರಿಗೆ ಮನೆಯಿಂದ ಮತದಾನ ಮಾಡಲು ಮಾಡಿರುವ ವ್ಯವಸ್ಥೆಗಳ ಬಗ್ಗೆ ವಿವರಿಸಿದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶೀಪ್ ತನ್ವೀರ್ ಆಸೀಫ್ ಅವರು ಮತದಾನ ಗ್ರಾಮ, ತಾಲ್ಲೂಕು ಹಾಗೂ ಜಿಲ್ಲಾ ಮಟ್ಟದಲ್ಲಿ ಸ್ವೀಪ್ ಕಾರ್ಯಕ್ರಮಗಳನ್ನು ಆಯೋಜಿಸಲಾಗುತ್ತಿದ್ದು, ಮುಖ್ಯವಾಗಿ ನಗರ ಪ್ರದೇಶದಲ್ಲಿ ಹೆಚ್ಚಿನ ಕಾರ್ಯಕ್ರಮಗಳನ್ನು ಆಯೋಜಿಸುತ್ತಿರುವುದಾಗಿ ತಿಳಿಸಿದರು.

ಸಭೆಯಲ್ಲಿ ಚುನಾವಣಾ ವೆಚ್ಚ ವೀಕ್ಷಕರಾದ ಕುಮಾರ್ ಪ್ರಿಯತಮ್ ಅಶೋಕ್, ಪೊಲೀಸ್ ವೆಚ್ಚ ವೀಕ್ಷಕರಾದ ದೀಪ ಸತ್ಯನ್, ಜಿಲ್ಲಾ ಪಂಚಾಯತ್ ಯೋಜನಾ ನಿರ್ದೇಶಕ ಸಂಜೀವಪ್ಪ ಸೇರಿದಂತೆ ಇನ್ನಿತರ ಅಧಿಕಾರಿಗಳು ಉಪಸ್ಥಿತರಿದ್ದರು.

ಸಭೆಯ ನಂತರ ಸಾಮಾನ್ಯ ಚುನಾವಣಾ ವೀಕ್ಷಕರಾದ ನೀರಾಜ್ ಕುವಾರ್, ಚುನಾವಣಾ ವೆಚ್ಚ ವೀಕ್ಷಕರಾದ ರೋಹಿತ್ ಅಸುದಾನಿ, ಕುವಾರ್ ಪ್ರಿಯತಮ್ ಅಶೋಕ್, ಪೊಲೀಸ್ ವೆಚ್ಚ ವೀಕ್ಷಕರಾದ ದೀಪ ಅವರು ಮಸ್ಟರಿಂಗ್ ಹಾಗೂ ಡಿ ಮಸ್ಟರಿಂಗ್ ನಡೆಯುವ ಮಂಡ್ಯ ವಿಶ್ವವಿದ್ಯಾಲಯಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಕಾಂಗ್ರೆಸ್ ವೈಫಲ್ಯಗಳ ಕುರಿತು ಕರಪತ್ರ ಬಿಡುಗಡೆ

■ ಕಾಯಕಯೋಗಿ ಸುದ್ದಿ

ಮಂಡ್ಯ : ರಾಜ್ಯದ ಜನತೆಗೆ ಸುಳ್ಳು ಹೇಳಿ ಅಧಿಕಾರಕ್ಕೆ ಬಂದಿರುವ ಕಾಂಗ್ರೆಸ್ ಸರ್ಕಾರ ಕಳೆದ 10 ತಿಂಗಳಲ್ಲಿ ಮಾಡಿದ್ದು ಕೇವಲ ಕಲೆಕ್ಷನ್, ಕಮಿಷನ್ ಮತ್ತು ಕರಪ್ಷನ್ ಮಾತ್ರ ಎಂದು ಜಿಲ್ಲಾ ಬಿಜೆಪಿ ವಕ್ತಾರ ಸಿ.ಟಿ.ಮಂಜುನಾಥ್ ಆರೋಪಿಸಿದರು.

ನಗರದ ಬಿಜೆಪಿ ವಿಕಾಸ ಭವನದಲ್ಲಿ ಮೋದಿ ಸಾಧನೆ ಹಾಗೂ ಕಾಂಗ್ರೆಸ್ ವೈಫಲ್ಯಗಳ ಕರಪತ್ರ ಬಿಡುಗಡೆ ಮಾಡಿ ಮಾತನಾಡಿದ ಅವರು, ರಾಜ್ಯದಲ್ಲಿ 900ಕ್ಕೂ ಹೆಚ್ಚು ರೈತರು ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಆದರೆ, ರೈತರಿಗೆ ಆತ್ಮಸ್ಥೈರ್ಯ ತುಂಬಲು ಕ್ರಮಗಳೇ ಇಲ್ಲ. ಸರ್ಕಾರ ಇದ್ದೂ ಸತ್ತಂತಾಗಿದೆ. ಗಲಭೆಕೋರ ಪಿಎಫ್‌ಐ ಕಾರ್ಯಕರ್ತರ ಕೇಸು ಖುಲಾಸೆ ಮಾಡುತ್ತೀರಿ. ಇನ್ಯೂರೆಂಡೆ ರಾಮಭಕ್ತ ಕರಸೇವಕರನ್ನು ಟಾರ್‌ಗೆಟ್ ಮಾಡುತ್ತೀರಿ. ಹಿಂದೂ ವಿರೋಧಿ ತುಷ್ಟೀಕರಣ ನೀತಿಯ ಮಾಡುತ್ತಿರುವ ಕಾಂಗ್ರೆಸ್ ಸರ್ಕಾರಕ್ಕೆ



ಜನತೆ ತಕ್ಕ ಪಾಠ ಕಲಿಸುವ ದಿನ ದೂರವಿಲ್ಲ ಎಂದು ತಿಳಿಸಿದರು.

ಬಿಜೆಪಿ ಸರ್ಕಾರವಿದ್ದಾಗ ಕಿಸಾನ್ ಸಮ್ಮಾನ್ ಯೋಜನೆಯಡಿ 4 ಸಾವಿರ ರೂ. ಕೊಡುತ್ತಿತ್ತು. ಮೋದಿಯವರು 6 ಸಾವಿರ ಕೊಡುತ್ತಿದ್ದರು. ಅದಕ್ಕೆ ರಾಜ್ಯ ಸರ್ಕಾರ 4 ಸಾವಿರ ಸೇರಿಸಿ ನೀಡಲಾಗುತ್ತಿತ್ತು. ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಬಂದ ತಕ್ಷಣ ಅದನ್ನು ಸ್ಥಗಿತಗೊಳಿಸಿ ರೈತ ವಿರೋಧಿ ಧೋರಣೆ ಯನ್ನು ಅನುಸರಿಸುತ್ತಿದೆ ಎಂದು ಆರೋಪಿಸಿದರು.

ಕಾಂಗ್ರೆಸ್ ಸರ್ಕಾರದ ದುರಾಡಳಿತದಿಂದ ಹಾಗೂ ಕೆಟ್ಟ ಆರ್ಥಿಕ ನೀತಿಗಳಿಂದ ರಾಜ್ಯದ ಖಜಾನೆ ಖಾಲಿಯಾಗಿದೆ. ಬೊಕ್ಕಸ ಸಂಪೂರ್ಣ ವಾಗಿ ಬರಿದಾಗಿದೆ. ರಾಜ್ಯ ಸಂಪೂರ್ಣವಾಗಿ ಆರ್ಥಿಕವಾಗಿ ದಿವಾಳಿ ಯಾಗಿದೆ. ಸರ್ಕಾರ ವೊಂದು ರಾಜ್ಯದ ಆರ್ಥಿಕ ಸ್ಥಿತಿಯನ್ನು ಈ ಪರಿ ಹದಗೆಡಿಸಿರು ವುದು ರಾಜ್ಯದ ಇತಿಹಾಸ ದಲ್ಲೇ ಇದೇ ಮೊದಲಾಗಿದೆ ಎಂದು ದೂರಿದರು.

ದೆಹಲಿ ಹೈಕಮಾಂಡ್‌ಗೆ ಎಟಿಎಂ ಆಗಿರುವ ಕಾಂಗ್ರೆಸ್ ಸರ್ಕಾರ ರಾಜ್ಯದ ಖಜಾನೆಯನ್ನು ಲೂಟಿ ಮಾಡಿದ್ದು, ಅನುತ್ಪಾದಕ ವಲಯಕ್ಕೆ ಸಂಪೂರ್ಣ ಸಾಲ ಮೀಸಲಾಗಿದೆ. ಆದಾಯ ಹೆಚ್ಚಿಸಲು ಯಾವುದೇ ಉಪಕ್ರಮಗಳನ್ನು ಘೋಷಿಸದೆ ಕೇವಲ ಸಾಲ ಮಾಡಿದ್ದಾರೆ ಎಂದು ಕಿಡಿಕಾರಿದರು.

ವರ್ಗಾವಣೆ ದಂಧೆಯಲ್ಲಿ ತಿಂಗಳುಗಳ ಕಾಲ ನಿರತವಾಗಿದ್ದು, ತೆರಿಗೆ ಸಂಗ್ರಹಣೆಯಲ್ಲೂ ಅವ್ಯಾಹತ ಭ್ರಷ್ಟಾಚಾರ ನಡೆದಿದೆ. ಪಂಚ ರಾಜ್ಯಗಳ ಚುನಾವಣೆಗೆ ಕರ್ನಾಟಕ ದಿಂದ ದೇಣಿಗೆ ಕಲೆಕ್ಷನ್ ಮಾಡಿದ್ದು, ಹೆಚ್ಚು ಕಮೀಷನ್ ಕೊಟ್ಟ ಗುತ್ತಿದಾರರಿಗೆ ಮಾತ್ರ ಬೇಕಾಬಿಟ್ಟಿಯಾಗಿ ಬಿಲ್ ಪಾವತಿಸಲಾಗಿದೆ ಎಂದು ಆರೋಪಿಸಿದರು.

ಬಿಜೆಪಿ ಮುಖಂಡರಾದ ನಾಗಾನಂದ, ಶಿವಕುಮಾರ್ ಕಂಪಮ್ಮ, ಪ್ರಸನ್ನಕುಮಾರ್, ಶಿವಲಿಂಗಯ್ಯ, ಬೀಮೇಶ್, ಶಾಕನೂರು ಯೋಗೇಶ್, ಪದ್ಮಾ, ಜ್ಯೋತಿ ಕೃಷ್ಣೇಗೌಡ, ಶಂಕರ್, ಧರಣಿ, ಶಶಿಕುಮಾರ್ ಸೇರಿದಂತೆ ಇತರರು ಇದ್ದರು.

ಯಾರು ದುಷ್ಟರು ಎಂಬುದು ಜಿಲ್ಲೆಯ ಜನತೆಗೆ ಗೊತ್ತಿದೆ: ನರೇಂದ್ರಸ್ವಾಮಿ

ಮಂಡ್ಯ : ಮಾಜಿ ಸಚಿವ ಸಿ.ಎಸ್.ಪುಟ್ಟರಾಜು ಅವರು ನನ್ನನ್ನು ಟೀಕಿಸುವ ಭರದಲ್ಲಿ ದುಷ್ಟ ಶಾಸಕ ಎಂದು ಹೇಳಿದ್ದಾರೆ. ಜಿಲ್ಲೆಯ ಅಕ್ಕಮ ಗಣಿಗಾಗಿಕೆಯಲ್ಲಿ ಯಾರ ಹೆಸರು ಕೇಳಿ ಬರುತ್ತಿತ್ತು? ಯಾರು ದುಷ್ಟರ ರೀತಿ ನಡೆದುಕೊಳ್ಳುತ್ತಿದ್ದರು ಎಂಬುದು ಜಿಲ್ಲೆಯ ಜನರಿಗೆ ತಿಳಿದಿದೆ ಎಂದು ಶಾಸಕ ಪಿ.ಎಂ.ನರೇಂದ್ರಸ್ವಾಮಿ ತಿರುಗೇಟು ನೀಡಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, 2008ರಲ್ಲಿ ನಾನು ಪಕ್ಷೇತರ ಶಾಸಕನಾಗಿ ಗೆಲ್ಲುವ ಮೂಲಕ ಮಳವಳ್ಳಿ ಕ್ಷೇತ್ರದಲ್ಲಿ ನಿಜವಾದ ಕಾಂಗ್ರೆಸ್ ಏನು ಎಂಬುದನ್ನು ಸಾಭೀತುಪಡಿಸಿದ್ದೆ. ಆದರಂತೆ ಯಡಿಯೂರಪ್ಪ ಅವರು ಬೆಂಬಲ ಕೋರಿದಾಗ 9 ಮಂದಿ ಪಕ್ಷೇತರ ಶಾಸಕರು ಬೆಂಬಲ ನೀಡಿದ್ದೆವು. ಆದರೆ, ನೀವು ಮತ್ತು ಮಾಜಿ ಪ್ರಧಾನಿ ದೇವೇಗೌಡರು ಯಡಿಯೂರಪ್ಪ ಸರ್ಕಾರ ಕಿತ್ತು ಹಾಕಲು ಏನೇನು ಮಾಡಿದಿರಿ ಎಂಬುದನ್ನು ಮರೆತ್ತಿದ್ದೀರಾ? ಎಂದು ಯಡಿಯೂರಪ್ಪ ಸರ್ಕಾರ ಬೀಳಲು ಕಾರಣರಾದವರ ಬಗ್ಗೆ ಬಹಿರಂಗಪಡಿಸಿದರು.

ಎಲ್ಲೆಲ್ಲಿ ಸಭೆ ಮಾಡಿದಿರಿ: ನನ್ನ ಬಗ್ಗೆ ದೊಡ್ಡ ದೊಡ್ಡ ಮಾರುಗಳನ್ನಾಡಿರುವ ನಿಮ್ಮನ್ನು ಪುಟ್ಟರಾಜು ಅಲ್ಲ. ಮಹಾ ದೊಡ್ಡರಾಜು ಎಂದು ಕರೆಯಬೇಕು. ಯಡಿಯೂರಪ್ಪ ಸರ್ಕಾರ ಬೀಳಿಸಲು ನೀವು ಎಲ್ಲೆಲ್ಲಿ ಸಭೆ ಮಾಡಿದಿರಿ. ಪ್ರಚೋದನೆ ಮಾಡಿದಿರಿ. ನಿಮ್ಮ ಪಕ್ಷದ ಮುಖಂಡರು ಗೋವಾ, ಬಾಂಬೆ, ಚೆನ್ನೈ, ಕೇರಳಕ್ಕೆ ಕರೆದುಕೊಂಡು ಹೋಗಿ ನಂತರ ಈಗಲ್ಟನ್ ರೆಸಾರ್ಟ್‌ಗೆ ಕರೆದುಕೊಂಡು ಬಂದರು. ನಿಮ್ಮನ್ನು ಕರೆದುಕೊಂಡು ಬಂದ ಪುಟ್ಟಣ್ಣನವರು ಚೆನ್ನೈನಲ್ಲಿ 9 ಮಂದಿ ಸಚಿವರ ರಾಜೀನಾಮೆ ಪಡೆದ ರಾಜ್ಯಪಾಲರಿಗೆ ನೀಡಿದ್ದೀವಿ. ನಾನು ಬಾಯಿ ಬಿಟ್ಟರೆ ನಿಮ್ಮ ಬಣ್ಣ ಬಯಲಾಗಲಿದೆ ಎಂದು ಎಚ್ಚರಿಸಿದರು. ಗೋಷ್ಠಿಯಲ್ಲಿ ಕಾಂಗ್ರೆಸ್ ಜಿಲ್ಲಾಧ್ಯಕ್ಷ ಸಿ.ಡಿ.ಗಂಗಾಧರ್, ಕಾರ್ಯಾಧ್ಯಕ್ಷ ಚಿದಂಬರ್, ಸುರೇಶ್‌ಕಂಠಿ, ಸಿದ್ದರಾಜು, ಸ್ವಾಮಿ, ನಾಗೇಶ್, ಲಿಂಗದೇವರು ಇದ್ದರು.

ಪ್ರತಿಭಾವಂತ ವೈದ್ಯರಿಗೆ ಚಿನ್ನದ ಪದಕ ವಿತರಣೆ



ಮಂಡ್ಯ : ನಗರದಲ್ಲಿರುವ ಮಂಡ್ಯ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ಸಭಾಂಗಣದಲ್ಲಿ ಸಂವಿದ್-ಪದವಿ ಪ್ರದಾನ ಸಮಾರಂಭವು ಮಿಮ್ಸ್ ಡೀನ್ ಮತ್ತು ನಿರ್ದೇಶಕ ಡಾ.ಪಿ.ನರಸಿಂಹಸ್ವಾಮಿ ಅಧ್ಯಕ್ಷತೆಯಲ್ಲಿ ಯಶಸ್ವಿಯಾಗಿ ನಡೆಯಿತು.

ಸಮಾರಂಭದಲ್ಲಿ ಪಾಲ್ಗೊಂಡಿದ್ದ ಗಣ್ಯರು ಪ್ರತಿಭಾವಂತ ವೈದ್ಯರಿಗೆ ಚಿನ್ನದ ಪದಕ ಮತ್ತು ಪ್ರಮಾಣಪತ್ರಗಳನ್ನು ನೀಡಿ ಗೌರವಿಸಿದರು. ಬಳಿಕ ಇನ್ಯಾರಿದ ವೈದ್ಯರಿಗೆ ಪ್ರದಾನಪತ್ರಗಳನ್ನು ವಿತರಿಸಿದರು.

ಬಳಿಕ ಆಕಾಡೆಮಿ ಫಾರ್ ಕ್ರಿಯೇಟಿವ್ ಟೀಚಿಂಗ್ ಭರ್ತಿನ್ ಡಾ.ಗುರುರಾಜ್‌ಕರಜಿಗಿ ಉಪನ್ಯಾಸ ನೀಡಿದರು. ನಿಮಾನ್ಸ್ ನಿರ್ದೇಶಕ ಡಾ.ಪ್ರತಿಮಾಮೂರ್ತಿ ದಿಕ್ಸೂಚಿ ಭಾಷಣ ನೆರವೇರಿಸಿದರು. ವೇದಿಕೆಯಲ್ಲಿ ಪ್ರಾಂಶುಪಾಲ ಡಾ.ಪಿ.ಎಸ್.ತಮ್ಮಣ್ಣ, ವೈದ್ಯಕೀಯ ಅಧೀಕ್ಷಕ ಡಾ.ಜಿ.ಶಿವಕುಮಾರ್ ಮತ್ತು ವಿವಿಧ ವಿಭಾಗಳ ಎಚ್.ಓ.ಡಿಗಳು, ಸಹಾಯಕ ಪ್ರಾಧ್ಯಾಪಕರು, ಸಿಬ್ಬಂದಿಗಳು ಹಾಜರಿದ್ದರು.

ಮೈತ್ರಿ ಅಭ್ಯರ್ಥಿ ಆಸ್ತಿ ವಿವರ

ಮಂಡ್ಯ : ಮಂಡ್ಯ ಲೋಕಸಭಾ ಚುನಾವಣೆಗೆ ಬಿಜೆಪಿ-ಜೆಡಿಎಸ್ ಮೈತ್ರಿ ಅಭ್ಯರ್ಥಿಯಾಗಿರುವ ಹೆಚ್.ಡಿ.ಕುಮಾರಸ್ವಾಮಿ ಅವರು ರೂ.10.71ಕೋಟಿ ರೂ ಮೌಲ್ಯದ ಚರಾಸ್ತಿ 43.94 ಕೋಟಿ ರೂ. ಮೌಲ್ಯದ ಸ್ಥಿರಾಸ್ತಿ ಸೇರಿದಂತೆ 54.65 ಕೋಟಿ ರೂ. ಮೌಲ್ಯದ ಆಸ್ತಿ ಹೊಂದಿದ್ದಾರೆ.

ಇವರ ಪತ್ನಿ ಅನಿತಾ ಕುಮಾರಸ್ವಾಮಿ ಅವರು 90.32 ಕೋಟಿ ಮೌಲ್ಯದ ಚರಾಸ್ತಿ 64.07 ಕೋಟಿ ರೂ. ಮೌಲ್ಯದ ಸ್ಥಿರಾಸ್ತಿ ಸೇರಿದಂತೆ 154.39 ಕೋಟಿ ರೂ. ಮೌಲ್ಯದ ಆಸ್ತಿ ಹೊಂದಿದ್ದಾರೆ. ಕುಮಾರಸ್ವಾಮಿ ಅವರಿಗಿಂತ ಪತ್ನಿಯೇ ಶ್ರೀಮಂತೆಯಾಗಿದ್ದಾರೆ.ಹೆಚ್.ಡಿ.ಕುಮಾರಸ್ವಾಮಿ ಅವರ ಮೇಲೆ ಎರಡು ಕ್ರಿಮಿನಲ್ ಒಂದು ಎನ್.ಸಿ.ಆರ್. ಸೇರಿದಂತೆ ಮೂರು ಪ್ರಕರಣಗಳಿವ

website: www.kayakayogi.com

ಕಾಯಕಯೋಗಿ

KAYAKA YOGI - Regional Daily

ಪುಟ–3 | 07–04–2024

ಮೈಸೂರು

ಮತ್ತೆ ಒಂದಾದ ವಿಶ್ವನಾಥ್, ಎಚ್‌ಡಿಕೆ



■ ಕಾಯಕಯೋಗಿ ಸುದ್ದಿ

ಮೈಸೂರು: ಸಮ್ಮಿಶ್ರ ಸರ್ಕಾರ ಪತನದ ನಂತರ ದೂರವಾಗಿದ್ದ ಹಳ್ಳಿಹಕ್ಕಿ ಎಚ್.ವಿಶ್ವನಾಥ್ ಹಾಗೂ ಎಚ್‌ಡಿ.ಕುಮಾರಸ್ವಾಮಿ ಇದೀಗ ಲೋಕಸಭಾ ಚುನಾವಣೆಯ ಸಂದರ್ಭದಲ್ಲಿ ಮತ್ತೆ ಒಂದಾಗಿದ್ದಾರೆ. ಮೈಸೂರಿನ ಕೆ.ಆರ್.ನಗರದಲ್ಲಿರುವ ವಿಶ್ವನಾಥ್ ನಿವಾಸಕ್ಕೆ ಆಗಮಿಸಿದ ಎಚ್.ಡಿ.ಕುಮಾರಸ್ವಾಮಿ ಚರ್ಚೆ ನಡೆಸಿದರು.

ಕೆ.ಆರ್.ನಗರವು ಮಂಡ್ಯ ಲೋಕಸಭಾ ಕ್ಷೇತ್ರಕ್ಕೆ ವ್ಯಾಪ್ತಿಗೆ ಸೇರುವ ಕಾರಣ ಜೆಡಿಎಸ್ ಅಭ್ಯರ್ಥಿ ಎಚ್‌ಡಿಕೆ ವಿಶ್ವನಾಥ್ ಸಭೆ ಮಹತ್ವ ಪಡೆದಿದೆ. ಎಚ್ಡಿಕೆ ಅವರಿಗೆ ಜೆಡಿಎಸ್ ನಾಯಕ ರಾದ ಜಿ.ಟಿ.ದೇವೆಗೌಡ, ಸಾ.ರಾ.ಮಹೇಶ್, ಪುಟ್ಟರಾಜು ಸಾಥ್ ನೀಡಿದರು.

ಬಳಿಕ ಮಾತನಾಡಿದ ಎಚ್. ವಿಶ್ವನಾಥ್, ರಾಜಕಾರಣ ನಿಂತ ನೀರಲ್ಲ. ಹರಿಯುವ ಗಂಗೆ. ಮಾತು, ಸಂಘರ್ಷ ರಾಜಕಾರಣದಲ್ಲಿ ಸಹಜ. ಇದನ್ನೆಲ್ಲಾ ಒಂದೊಂದು ಬಾರಿ ಸರಿಪಡಿಸಿಕೊಳ್ಳ ಬೇಕು. ದೇವೇಗೌಡರು ನನಗೆ ಸದಾ ಸ್ಫೂರ್ತಿ ಯಾರು. ನನ್ನ ಸಾರಾ ಮಹೇಶ್ ಭಗ್ನಾಪ್ರಣಯ ಜಾಮೂಡಿ ಬೆಟ್ಟದ ತನಕಹೋಗಿತ್ತು ಇದೆಲ್ಲಾ ಸಹಜ. ಈಗ ಅದನ್ನೆಲ್ಲಾ ಮರೆತು ಜೊತೆಯಾ ಗಿದ್ದೇವೆ. ಈಗ ಎಲ್ಲಾ ಮರೆತು ಕುಮಾರಸ್ವಾಮಿ ನಮ್ಮ ಮನೆಗೆ ಬಂದಿದ್ದಾರೆ ಎಂದರು.

ಕಾಂಗ್ರೆಸ್ ನಲ್ಲಿ 17 ಜನರ ಮಕ್ಕಳು ಲೋಕ ಸಭೆಗೆ ಟಿಕೆಟ್ ಕೊಟ್ಟಿದ್ದಾರೆ. ಆಡಳಿತಾತ್ಮಕವಾಗಿ ಎಚ್ ಡಿ ಕುಮಾರಸ್ವಾಮಿಯನ್ನು ಟೀಕಿಸುತ್ತಿದ್ದಾರೆ. ಆದರೆ, ಎಚ್ ಡಿ ದೇವೇಗೌಡರ ಬಗ್ಗೆ ಮಾತಾಡಬೇಡಿ. ಆ ನೈತಿಕತೆ ಯಾರಿಗೂ ಇಲ್ಲ. ಯಡುವಂಶದ ರಾಜರು ಅವಿರೋಧವಾಗಿ ಆಯ್ಕೆಯಾಗಲಿ ಎಂದು. ದೇವೇಗೌಡರ ಫ್ಯಾಮಿಲಿಯನ್ನು ಸೋಲಿಸತ್ತೇನೆಂಬ ಮಾತನ್ನು ಸಿದ್ದರಾಮಯ್ಯ ಬಿಡಬೇಕು. ಸಿದ್ದರಾಮಯ್ಯ ದುರಹಂಕಾರದ ಮಾತು ಮೊದಲು ಬಿಡಬೇಕು. ಸಿದ್ದರಾಮಯ್ಯ ಅವರೇ, ಮೈಸೂರಲ್ಲಿ ನಿಮ್ಮ ಮಗನನ್ನು ನಿಲ್ಲಿಸಬೇಕು ಅಂತುಕೊಂಡಿದ್ದಿರಿ. ನನ್ನ ಹೆಸರೂ ಇತ್ತು. ಸರ್ವೆ ವರದಿ ಬಂದ ಮೇಲೆ ಪಾಪ ಲಕ್ಷ್ಮಣ್ ಅವರನ್ನು ನಿಲ್ಲಿಸ್ದಿರಿ. ಒಕ್ಕಲಿಗರಿಗೆ ಅಪಮಾನ ಮಾಡುತ್ತಿದ್ದೀರಿ. ಮೈಸೂರಲ್ಲಿ ಯದುವೀರ್, ಮಂಡ್ಯದಿಂದ ಕುಮಾರ ಸ್ವಾಮಿ ಗೆಲ್ಲಬೇಕು ಎಂದು ವಿಶ್ವನಾಥ್ ಹೇಳಿದರು.

ನಿಷ್ಪಕ್ಷಪಾತ ಚುನಾವಣಾ ಪ್ರಕ್ರಿಯೆ ಖಾತ್ರಿಪಡಿಸುವಲ್ಲಿ ವೆಚ್ಚದ ಮೇಲೆ ನಿಗಾ ಇಡಿ



■ ಕಾಯಕಯೋಗಿ ಸುದ್ದಿ

ಮೈಸೂರು: ಮುಕ್ತ ಹಾಗೂ ನ್ಯಾಯಸಮ್ಮತವಾಗಿ ಚುನಾವಣೆ ನಡೆಸಬೇಕು. ಚುನಾವಣಾ ನೀತಿ ಸಂಹಿತೆಯನ್ನು ಉಲ್ಲಂಘಿಸದಂತೆ ಪ್ರತಿಯೊಂದು ಘಟನೆಗಳನ್ನು ಸೂಕ್ಷ್ಮವಾಗಿ ಗಮನಿಸಿ ಅಭ್ಯರ್ಥಿಗಳ ವೆಚ್ಚದ ಬಗ್ಗೆ ನಿಗಾ ವಹಿಸಬೇಕು ಎಂದು ಕರ್ನಾಟಕ ರಾಜ್ಯಕ್ಕೆ ನೇಮಕವಾಗಿರುವ ವಿಶೇಷ ವೆಚ್ಚ ವೀಕ್ಷಕರಾದ ಬಿ ಮುರುಳಿ ಕುಮಾರ್ ತಿಳಿಸಿದರು.

ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ವಿಧಾನಸಭಾ ಕ್ಷೇತ್ರದ ಸಹಾಯಕ ಚುನಾವಣಾ ಅಧಿಕಾರಿಗಳು, ಸಹಾಯಕ ಚುನಾವಣಾ ವೆಚ್ಚ ಸಮಿತಿಯ ಅಧಿಕಾರಿಗಳು ಹಾಗೂ ಸಮಿತಿಗಳ ನೋಡಲ್ ಅಧಿಕಾರಿಗಳೊಂದಿಗೆ ಸಭೆ ನಡೆಸಿದರು.

ಮುಕ್ತ ಹಾಗೂ ನ್ಯಾಯಸಮ್ಮತವಾಗಿ ಚುನಾವಣೆ ನಡೆಯಬೇಕು. ಚೆಕ್ ಪೋಸ್ಟ್ ಗಳಲ್ಲಿ ತಪಾಸಣೆಯನ್ನು ತೀವ್ರಗೊಳಿಸಿ ದಾಖಲೆ ರಹಿತ ಹಣ ಅಥವಾ ಇನ್ನಿತರೆ ವಸ್ತುಗಳು ಸಾಗಾಣಿಕೆಯಾಗದಂತೆ ನೋಡಿಕೊಳ್ಳಿ ಎಂದರು.

ಅಧಿಕಾರಿಗಳು ಉಲ್ಲಂಘನೆಯ ದೂರುಗಳನ್ನು ಸ್ವೀಕರಿಸಿದಾಗ ಮತ್ತು ಅವುಗಳನ್ನು ಸ್ವೀಕರಿಸಿದಾಗ ಮತ್ತು ದೂರುಗಳ ನೋಂದಣಿ ಮತ್ತು ಅವುಗಳ ಮೇಲೆ ತೆಗೆದುಕೊಂಡ ಕ್ರಮಗಳನ್ನು ನಿರ್ವಹಿಸುವಂತೆ ತಿಳಿಸಿದರು.

ಚುನಾವಣಾ ಕೆಲಸಕ್ಕಾಗಿ ನೇಮಕವಾಗಿರುವ ಎಫ್.ಎಸ್.ಟಿ, ಎಸ್.ಎಸ್.ಟಿ, ವಿ.ವಿ.ಟಿ ಹಾಗೂ ಇನ್ನಿತರೆ ತಂಡಗಳು ಜವಾಬ್ದಾರಿಯುತವಾಗಿ ಕೆಲಸ ನಡೆಸಿ ಅಭ್ಯರ್ಥಿಯು ಚುನಾವಣಾ ಆಯೋಗ ನೀಡಿರುವ ನಿರ್ದೇಶನಗಳನ್ನು ಪಾಲಿಸುತ್ತಿರುವ ಬಗ್ಗೆ ನಿಗಾ ವಹಿಸಬೇಕು.

ಪ್ರತಿ ವಿಧಾನಸಭಾ ಕ್ಷೇತ್ರಕ್ಕೆ ಅಭ್ಯರ್ಥಿಗಳ ಚುನಾವಣಾ ವೆಚ್ಚ ನಿರ್ವಹಿಸಲು ನೇಮಕವಾಗಿರುವ ಅಧಿಕಾರಿಗಳು ಹಾಗೂ ಸಿಬ್ಬಂದಿಗಳು ಸಮನ್ವಯದಿಂದ ಕಾರ್ಯನಿರ್ವಹಿಸಬೇಕು ಎಂದರು.

ಚುನಾವಣಾ ಅವಧಿಯಲ್ಲಿ ಎಲ್ಲ ಬ್ಯಾಂಕುಗಳ ಮೂಲಕ ನಡೆಯಬಹುದಾದ ಅನುಮಾನಾಸ್ಪದ ವ್ಯವಹಾರಗಳು, ಹಣ ಪಡೆಯುವ ಬಗ್ಗೆ ಬ್ಯಾಂಕುಗಳು ಪ್ರತಿನಿತ್ಯ ಮಾಹಿತಿ ಒದಗಿಸಬೇಕು ಎಂದು ಅವರು ತಿಳಿಸಿದರು.

ಜಿಲ್ಲಾಧಿಕಾರಿ ಡಾ ಕೆ.ವಿ.ರಾಜೇಂದ್ರ ಅವರು ಮಾತನಾಡಿ ಜಿಲ್ಲೆಯಲ್ಲಿ ಚುನಾವಣಾ ಕೆಲಸಕ್ಕಾಗಿ ನೇಮಕವಾಗಿರುವ ವಿವಿಧ ತಂಡಗಳು, ಅಧಿಕಾರಿಗಳು, ಸ್ಥಾಪನೆಯಾಗಿರುವ ಚೆಕ್ ಪೋಸ್ಟ್ ಗಳು ಹಾಗೂ ಇನ್ನಿತರೆ ಮಾಹಿತಿಗಳನ್ನು ವಿವರಿಸಿದರು.

ನಂತರ ಚುನಾವಣಾ ನಿಯಂತ್ರಣ ಕೊಠಡಿ ಮತ್ತು ಮಾಧ್ಯಮ ಪ್ರಮಾಣೀಕರಣ ಮತ್ತು ನಿಗಾ ಕೇಂದ್ರವನ್ನು ವೀಕ್ಷಕರು ಪರಿಶೀಲಿಸಿದರು.

ಸಭೆಯಲ್ಲಿ ಹುಣಸೂರು, ಪಿರಿಯಾಪಟ್ಟಣ ವಿಧಾನಸಭಾ ಕ್ಷೇತ್ರದ ವೆಚ್ಚ ವೀಕ್ಷಕರಾದ ಎ. ಸುರೇಶ್, ನಗರ ಪೊಲೀಸ್ ಆಯುಕ್ತರಾದ ರಮೇಶ್ ಬಿ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಕೆ.ಎಂ.ಗಾಯತ್ರಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಸೀಮಾ ಲಾಟ್ಕರ್, ಅಪರ ಜಿಲ್ಲಾಧಿಕಾರಿ ಪಿ.ಶಿವರಾಜು ಹಾಗೂ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

ರೈತರಿಗೆ ಮೂರು ದಿನಗಳ ಆನ್‌ಲೈನ್ ತರಬೇತಿ

■ ಕಾಯಕಯೋಗಿ ಸುದ್ದಿ

ಮೈಸೂರು: ನಾಗನಹಳ್ಳಿಯ ಜಿಲ್ಲಾ ಕೃಷಿ ತರಬೇತಿ ಕೇಂದ್ರದ ವತಿಯಿಂದ ಏ.12 ರಂದು "ಕೃಷಿ ಜಮೀನಿನಲ್ಲಿ ಮಣ್ಣು ಮತ್ತು ನೀರು ಸಂರಕ್ಷಣಾ ಕ್ರಮಗಳ ಅಳವಡಿಕೆ" ಏ.16 ರಂದು "ಪ್ರಸ್ತುತ ಬೇಸಿಗೆಯಲ್ಲಿ ತೋಟಗಾರಿಕೆ ಬೆಳೆಗಳ ನಿರ್ವಹಣೆ" ಏ.19 ರಂದು "ಬೇಸಿಗೆ ಬೆಳೆಗಳನ್ನು ಬಾದಿಸುವ ಗೆದ್ದಲು, ಕೆಂಜಿಗ ಹಾಗೂ ಇರುವೆ ನಿರ್ವಹಣೆ" ಎಂಬ ವಿಷಯಗಳ ಕುರಿತು ರೈತ ಅಥವಾ ರೈತಮಹಿಳೆಯರಿಗೆ ಆನ್‌ಲೈನ್ ತರಬೇತಿಗಳನ್ನು ಏರ್ಪಡಿಸಲಾಗಿದೆ.

ಬನ್ನಿಕುಪ್ಪೆಯಲ್ಲಿ ಮತದಾರ ಜಾಗೃತಿ ಕಾರ್ಯಕ್ರಮ

■ ಕಾಯಕಯೋಗಿ ಸುದ್ದಿ

ಬನ್ನಿಕುಪ್ಪೆ: ಹುಣಸೂರು ತಾಲೂಕು ಪಂಚಾಯಿತಿ ಸ್ವೀಪ್ ವತಿಯಿಂದ ಬನ್ನಿಕುಪ್ಪೆ ಗ್ರಾಮ



ಪಂಚಾಯಿತಿಯವರು ಮಾರಿಗುಡಿ ಆವರಣದಲ್ಲಿ ಕಡ್ಡಾಯ ಮತದಾನ ಕುರಿತು ಜಾಗೃತಿಯನ್ನು ಮೂಡಿಸಲಾಯಿತು ಕಾರ್ಯಕ್ರಮದಲ್ಲಿ ತಾಲೂಕು ಪಂಚಾಯಿತಿ ನಿರ್ವಾಹಣಾಧಿಕಾರಿ ಅಧಿಕಾರಿ ಶಿವಕುಮಾರ್ ಮಾತನಾಡಿ ನಾಗರೀಕರು ಮತದಾರರು ಚುನಾವಣೆ ವೇಳೆಯಲ್ಲಿ ಆಮಿಷಗಳಿಗೆ ಒಳಗಾಗದೆ ಚುನಾವಣಾದಲ್ಲಿ ಆಕ್ರಮ ಕಂಡುಬಂದಲ್ಲಿ ಸಿವಿಲ್ ಆಪ್ ಮೂಲಕ ಮಾಹಿತಿ ನೀಡಿ ಎಂದು ಮತದಾರರಲ್ಲಿ ಮನವಿ ಮಾಡಿದರು.

ಕಾರ್ಯಕ್ರಮದಲ್ಲಿ ನಾಗರಿಕರಿಗೆ ಮತ್ತು ಮತದಾರರಿಗೆ ಗ್ರಾಮ ಪಂಚಾಯಿತಿ ಪಿಡಿಒ ರಾಘವೇಂದ್ರ ಪ್ರಸನ್ನ ಮಾನವ ಸರಪಳಿ ನಿರ್ಮಿಸಿ ಪ್ರಜಾಪ್ರಭುತ್ವವನ್ನು ಬೋಧಿಸುತ್ತಾ ಪ್ರಜಾಪ್ರಭುತ್ವದಲ್ಲಿ ವಿಶ್ವಾಸವುಳ್ಳ ಭಾರತದ ಪೌರರಾದ ನಾವು ನಮ್ಮ ದೇಶದ ಪ್ರಜಾಸತ್ತಾತ್ಮಕ ಸಂಪ್ರದಾಯಗಳು ಮತ್ತು ಮುಕ್ತ ನ್ಯಾಯ ಸಮ್ಮತ ಮತ್ತು ಶಾಂತಿಯುತ ಚುನಾವಣೆಗಳ ಘನತೆಯನ್ನು ಎತ್ತಿ ಹಿಡಿಯುತ್ತೇವೆ ಎಂದು ಮತ್ತು ಪ್ರತಿಯೊಂದು ಚುನಾವಣೆಯಲ್ಲಿ ನಿರ್ಭಿತರಾಗಿ ಮತ್ತು ಧರ್ಮ ಜನಾಂಗ ಜಾತಿ ಮತ ಭಾಷೆ ಅಥವಾ ಯಾವುದೇ ಪ್ರೇರೇಪಣೆಗಳ ದಾಕ್ಷಿಯಿಣಿಗಳಿಗೆ ಇಂದ ಪ್ರಭಾವಿತರಾಗದೆ ಮತ ಚಲಾಯಿಸುವೆಂದು ಪ್ರತಿಜ್ಞೆ ಬೋಧನೆಯನ್ನು ಬೋಧಿಸಿದರು ಹಾಗೂ ಪ್ರಮುಖ ಬೀದಿಗಳಲ್ಲಿ ಜಾತ ನಡೆಸಿ ನಾಗರೀಕರಲ್ಲಿ ಜಾಗೃತಿ ಮೂಡಿಸಿದರು ಕಾರ್ಯಕ್ರಮದಲ್ಲಿ ಗ್ರಾಮ ಪಂಚಾಯಿತಿ ಸಿಬ್ಬಂದಿ ಎನ್.ಆರ್.ಎಲ್.ಎಂ ತಾಲೂಕು ಸಂಯೋಜಕಿ ಮಂಜುಳಾ. ಪರಿಷತ್ ಭಾನು ಒಕ್ಕೂಟದ ಅಧ್ಯಕ್ಷರು ಪದಾಧಿಕಾರಿಗಳು ಮತ್ತು ಸದಸ್ಯರು ಭಾಗವಹಿಸಿದ್ದರು

ವಿಂಟೇಜ್ ಕಾರ್ ರ‍್ಯಾಲಿ ಮೂಲಕ ಮತದಾನ ಜಾಗೃತಿ

■ ಕಾಯಕಯೋಗಿ ಸುದ್ದಿ

ಮೈಸೂರು: ಮತದಾರರಲ್ಲಿ ಚುನಾವಣಾ ಅರಿವು ಮೂಡಿಸಲು ಜಿಲ್ಲಾಡಳಿತ ಮತ್ತು ಜಿಲ್ಲಾ ಸ್ವೀಪ್ ಸಮಿತಿಯ ವತಿಯಿಂದ ಪುರಭವನ(ಟೌನ್ ಹಾಲ್)ದಿಂದ ದೇವರಾಜ್ ಅರಸು ರಸ್ತೆ, ಸಯ್ಯಾಜಿರಾವ್ ರಸ್ತೆಯ ಮೂಲಕ ಪುರಭವನದವರೆಗೆ ವಿಂಟೇಜ್ ಕಾರ್ ರ‍್ಯಾಲಿ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು.



ಕಾರ್ಯಕ್ರಮದಲ್ಲಿ ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಚುನಾವಣಾಧಿಕಾರಿ ಡಾ. ಕೆ ವಿ ರಾಜೇಂದ್ರ ಅವರು ಮಾತನಾಡಿ, 70 ರಿಂದ 75 ವರ್ಷಗಳ ಇತಿಹಾಸವಿರುವ ಈ ಚುನಾವಣೆ ಮತ್ತು ವಿಂಟೇಜ್ ಕಾರ್ ಅನ್ನು ಹೊಲಿಸಿರದೆ ಪ್ರತಿವರ್ಷವೂ ಅದರ ಮಹತ್ವ ಹಾಗೂ ಭಾವ ಹೆಚ್ಚಾಗುತ್ತಲೇ ಇದೆ ಎಂದರು.

ಪ್ರಜೆಗಳಲ್ಲೂರೂ ಪ್ರಜಾಪ್ರಭುತ್ವ ಮತ್ತು ಚುನಾವಣೆಯ ಯಜಮಾನರು. ಇದನ್ನು ಹೆಚ್ಚಿನ ಜಾಗರೂಕತೆಯಿಂದ ನೋಡಿಕೊಳ್ಳುವುದು ನಮ್ಮ ಜವಾಬ್ದಾರಿಯಾಗಿರುತ್ತದೆ. ಹಾಗಾಗಿ ಪ್ರತಿಧರಿಯೂ ಚುನಾವಣಾ ಹಬ್ಬದ ಮೆರಗನ್ನು ಹೆಚ್ಚಿಸಲು ಎಲ್ಲರು ಕಡ್ಡಾಯವಾಗಿ ಮತದಾನ ಮಾಡಬೇಕು ಎಂದು ತಿಳಿಸಿದರು.

ಪ್ರತಿಯೊಬ್ಬ ಮತದಾರನು ಈ ದೇಶದ ಹಾಗೂ ಪ್ರಜಾಪ್ರಭುತ್ವದ ಆಸ್ತಿ. ಮತದಾರರು ಯಾವುದೇ ರೀತಿಯ ಚುನಾವಣಾ ಅಕ್ರಮವನ್ನು ಮಾಡದೆ ನೈತಿಕ ಮತದಾನವನ್ನು ಮಾಡಿ ಬೇರೆಯವರಿಗೂ ನೈತಿಕ ಮತದಾನ ಮಾಡುವಂತೆ ಅರಿವು ಮೂಡಿಸಬೇಕು ಎಂದರು.

ಕಳೆದ 2018 ರ ಚುನಾವಣೆಯಲ್ಲಿ ಮೈಸೂರಿನಲ್ಲಿ ಶೇ.70 ರಷ್ಟು ಮತದಾನ ವಾಗಿದ್ದು, ಈ ಬಾರಿ ಪ್ರಮಾಣವನ್ನು ಹೆಚ್ಚಿಸುವ ಸಲುವಾಗಿ ಜಿಲ್ಲಾಡಳಿತ ಹಾಗೂ ಜಿಲ್ಲಾ ಸ್ವೀಪ್ ಸಮಿತಿಯ ವತಿಯಿಂದ ಫ್ಲಾಶ್ ಮಾಬ್, ರ‍್ಯಾಲಿ ಸೇರಿದಂತೆ ಮಾಲ್, ಆಪಾರ್ಟ್‌ಮೆಂಟ್ ಹೀಗೆ ನಗರದಾದ್ಯಂತ ಹಲವಾರು ವಿಶಿಷ್ಟ ಕಾರ್ಯಕ್ರಮಗಳನ್ನು ಆಯೋಜಿಸಿ ನಗರ ಪ್ರದೇಶದ ಮತದಾರರು ಹಾಗೂ ಯುವ ಜನರನ್ನು ಸೆಳೆಯಲಾಗುತ್ತಿದೆ ಎಂದು ಮಾಹಿತಿ ನೀಡಿದರು.

ಎಷ್ಟೋ ಜನರು ಅಕ್ಷರಸ್ಥರಾಗಿದ್ದರು ಸಹ ಮತದಾನದ ವಿಷಯದಲ್ಲಿ ಪ್ರಜ್ಞಾವಂತರಾಗಿರುವುದಿಲ್ಲ ಅಂತಹವರಿಗೂ ಸಹ ಜಾಗೃತಿಯನ್ನು ಮೂಡಿಸುವ ಕಾರ್ಯಕ್ರಮ ವನ್ನು ಸ್ವೀಪ್ ಸಮಿತಿ ಮಾಡುತ್ತಿದೆ. ಹಾಗಾಗಿ ಪ್ರತಿಯೊಬ್ಬರೂ ಮತದಾನದ ಮಹತ್ವವನ್ನು ಅರಿತು ಕಡ್ಡಾಯವಾಗಿ ಮತ ಹಾಕಬೇಕು ಎಂದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಪಂಚಾಯಿತಿಯ ಮುಖ್ಯ ಕಾರ್ಯನಿರ್ವಾಹಣಾಧಿಕಾರಿ ಹಾಗೂ ಜಿಲ್ಲಾ ಸ್ವೀಟ್ ಸಮಿತಿಯ ಅಧ್ಯಕ್ಷರಾದ ಕೆ ಎಂ ಗಾಯತ್ರಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಯಾದ ಸೀಮಾ ಲಾಟ್ಕರ್, ಮೈಸೂರು ಮಹಾನಗರ ಪಾಲಿಕೆಯ ಆಯುಕ್ತರಾದ ಎನ್ ಎನ್ ಮಧು ಸೇರಿದಂತೆ ಇನ್ನಿತರರು ಭಾಗವಹಿಸಿದ್ದರು.

ಕುಡಿಯುವ ನೀರಿನ ಸಮಸ್ಯೆ: ಕಂಟ್ರೋಲ್ ರೂಂ ಸ್ಥಾಪನೆ

ಮೈಸೂರು: ತಿ.ನರಸೀಪುರ ತಾಲ್ಲೂಕು ಪಂಚಾಯಿತಿ ವ್ಯಾಪ್ತಿಯ ಎಲ್ಲಾ ಗ್ರಾಮ ಪಂಚಾಯಿತಿಗಳ ಗ್ರಾಮಗಳಲ್ಲಿ ಕುಡಿಯುವ ನೀರಿಗೆ ಸಮಸ್ಯೆಯಾದರೆ ಸಾರ್ವಜನಿಕರು ಹಾಗೂ ಜನಪ್ರತಿನಿಧಿಗಳು 24x7 ಸೇವೆಯಲ್ಲಿರುವ ಕಂಟ್ರೋಲ್ ರೂಂ ನಂ:08227–261223 ಅಥವಾ ದೂ.:866 0826823 ನ್ನು ಸಂಪರ್ಕಿಸಿ ದೂರು ಸಲ್ಲಿಸ ಬಹುದು ಎಂದು ತಾಲ್ಲೂಕು ಪಂಚಾಯಿತಿಯ ಕಾರ್ಯನಿರ್ವಾಹಕ ಅಧಿಕಾರಿಯಾದ ಚಿಂದ್ರ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಆಸಕ್ತ ರೈತ ಅಥವಾ ರೈತಮಹಿಳೆಯರು ಗೂಗಲ್ ಮೀಟ್ ಟಜಜಣ:ಇಟಿತಿ–ಇತಖಥ–ಥಿಛ ಲಿಂಕ್‌ನ ಮೂಲಕ ತರಬೇತಿ ಕಾರ್ಯಕ್ರಮದಲ್ಲಿ ಭಾಗವಹಿಸಬಹುದಾಗಿದೆ. ಹೆಚ್ಚಿನ ಮಾಹಿತಿಗೆ ತರಬೇತಿ ಕೇಂದ್ರದ ಕೃಷಿ ಅಧಿಕಾರಿಯ ದೂ.ಸಂ:8277933116 ನ್ನು ಸಂಪರ್ಕಿಸಿ ತಮ್ಮ ಹೆಸರುಗಳನ್ನು ನೋಂದಾಯಿಸಿಕೊಳ್ಳಬಹುದು.

ಏ.9ರಿಂದ ಶ್ರೀರಾಮನವಮಿ ಸಂಗೀತೋತ್ಸವ

■ ಕಾಯಕಯೋಗಿ ಸುದ್ದಿ

ಹುಣಸೂರು: ಹುಣಸೂರಿನ ಎಸ್.ಜೆ. ರಸ್ತೆಯಲ್ಲಿರುವ ವಿಕ್ರಂ ವೇದಿಕೆಯಲ್ಲಿ ಹುಣಸೂರಿನ ಸಾಂಸ್ಕೃತಿಕ ಕೇಂದ್ರ ಟ್ರಸ್ಟ್ ಮತ್ತು ಶ್ರೀ ರಾಮನವಮಿ ಸಂಗೀತೋತ್ಸವ ಸಮಿತಿ ಇವರ ಸಂಯುಕ್ತಶ್ರಯದಲ್ಲಿ ಏ.9 ರಿಂದ ಏ.17ರವರೆಗೆ ಶ್ರೀ ರಾಮನವಮಿ ಸಂಗೀತೋತ್ಸವ ಕಾರ್ಯಕ್ರಮ ನಡೆಯಲಿದೆ.



ಈ ಕಾರ್ಯಕ್ರಮವದಲ್ಲಿ ಮಾದಳ್ಳಿ ಉಕಿನಕಂತ್ತೆ ಮಠದ ಶ್ರೀಸಾಂಬಸದಾಶಿವ ಸ್ವಾಮಿಗಳು ಮತ್ತು ಗಾವಡಗೆರೆಯ ಗುರುಲಿಂಗಜಂಗಮ ದೇವರ ಮಠದ ಶ್ರೀನಟರಾಜಸ್ವಾಮಿಗಳು ಹಾಗೂ ಪ್ರಜಾಪೀತ ಬ್ರಹ್ಮಕುಮಾರಿ ಈಶ್ವರಿ ವಿಶ್ವವಿದ್ಯಾಲಯದ ರಾಜಯೋಗಿನಿ ನಾಗಶ್ರೀಜಹೆನ್ ರವರ ದಿವ್ಯ ಸಾನಿಧ್ಯದಲ್ಲಿ ದಿ.9 ರಿಂದ ಏ.17ರ ವರೆಗೆ ಶ್ರೀ ರಾಮನವಮಿ ಸಂಗೀತೋತ್ಸವ ಕಾರ್ಯಕ್ರಮ ನಡೆಯಲಿದೆ.

ಈ ಕಾರ್ಯಕ್ರಮದಲ್ಲಿ . ಪ್ರತಿನಿತ್ಯ ಸಂಜೆ 6–30 ರಿಂದ 10–00 ಗಂಟೆಯವರೆಗೆ ಸ್ಥಳೀಯ ಭಜನಾ ಮಂಡಳಿಗಳಿಂದ ಭಜನೆ, ನಂತರ ರಾಜ್ಯದ ವಿವಿದೆಡೆಗಳಿಂದ ಆಗಮಿಸುವ ಪ್ರಸಿದ್ಧ ಗಾಯಕ ಗಾಯಕಿಯರಿಂದ ಸುಗಮಸಂಗೀತ, ಭಕ್ತಿಗೀತೆಗಳು, ದಾಸರಪದಗಳು, ಶಿಶುನಾಳ ಷರೀಫರಗೀತೆಗಳು, ಭಾವಗೀತೆ, ಜಾನಪದಗೀತೆಗಳು ತಾಳ ವಾದ್ಯ ಹೀಗೆ ವಿವಿಧ ಕಾರ್ಯಕ್ರಮಗಳು ನಡೆಯಲಿದೆ.

ಏಪ್ರಿಲ್.9 ರಂದು: ಪ್ರಭುಸೋನೂರವರ ನಿರ್ದೇಶನದಲ್ಲಿ ಸಾಂಸ್ಕೃತಿಕ ಕೇಂದ್ರದ ವಿದ್ಯಾರ್ಥಿಗಳಿಂದ ಭಕ್ತಿಗೀತೆಗಳು ಏಪ್ರಿಲ್.10 ರಂದು: ಮೈಸೂರಿನ ವಿದ್ವಾನ್ ಶಿವಶಂಕರ ಸ್ವಾಮಿ ವೃಂದದವರಿಂದ ಲಯಬಹರಿ ತಾಳವಾದ್ಯ. ಏಪ್ರಿಲ್.11 ರಂದು: ಸಂಗಮ ಭ್ಯಾತಿಯ ಅಮೂಲ್ಯ ಮತ್ತು ಪುರುಶೋತ್ತಮರವರಿಂದ ಏಪ್ರಿಲ್.12 ರಂದು: ಅಜಯ್ ವಾರಿಯರ್ ಮತ್ತು ವಿಂದ್ಯಾಸುರೇಶ್ ರವರಿಂದ ಏಪ್ರಿಲ್.13 ರಂದು: ಸವಿತಾ ಗಣೇಶ್ ಪ್ರಸಾದ್ ಮತ್ತು ರಾಜೀವ್ ಆಗಳಿರವರಿಂದ ಏಪ್ರಿಲ್.14 ರಂದು: ಶಂಕರ್ ಶ್ಯಾನ್‌ಭಾಗ್ ಮತ್ತು ಕೆ.ಜಿ. ರೇವತಿ ರವರಿಂದ ಏಪ್ರಿಲ್.15 ರಂದು: ಶ್ರೀನಿವಾಸ್, ಶಶಿಧರ್, ಪ್ರಶಾಂತ್, ಭವ್ಯ ದಿವಾಕರ್ ಇವರುಗಳಿಂದ ಏಪ್ರಿಲ್.16 ರಂದು: ಸರಿಗಮಪ ವಿಜೇತ ಕೀರ್ತನ್ ಹೊಳ್ಳ ಮತ್ತು ಟಿ.ಸಿ ಸಿಂಚನ ರವರಿಂದ ಏಪ್ರಿಲ್.17 ರಂದು: ರವಿಶಂಕರ್, ಮಹೇಂದ್ರ, ಸೋಮು, ಶೃತಿ ರವರಿಂದ ಗಾಯನ ಕಾರ್ಯಕ್ರಮಗಳು ನಡೆಯಲಿದೆ.

ಶ್ರೀ ರಾಮನವಮಿಯ ಪ್ರಯುಕ್ತ ದಿ.17ರ ಬೆಳಿಗ್ಗೆ ಶ್ರೀಹರಿರಾವ್ ರವರಿಂದ ರಾಮಕಾರ ಹೋಮ ಮತ್ತು ರಾತ್ರಿ 8–00 ಗಂಟೆಗೆ ರಾವಣದಹನ ನಡೆಯಲಿದೆ ಈ ಕಾರ್ಯಕ್ರಮಕ್ಕೆ ಹುಣಸೂರಿನ ನಾಗರಿಕರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಬೇಕೆಂದು ಎಂಯ ಟ್ರಸ್ಟ್ ಪ್ರಧಾನ ಕಾರ್ಯದರ್ಶಿಗಳಾದ ಪಿ.ಎನ್. ದಾಸ್ ರವರು ಪತ್ರಿಕಾ ಹೇಳಿಕೆಯಲ್ಲಿ ತಿಳಿಸಿದ್ದಾರೆ.

ಯಾರೊಬ್ಬರು ಮತದಾನದಿಂದ ದೂರ ಉಳಿಯಬಾರದು

■ ಕಾಯಕಯೋಗಿ ಸುದ್ದಿ

ಮೈಸೂರು: ಏಪ್ರಿಲ್ 26 ರಂದು ನಡೆಯಲಿರುವ ಲೋಕಸಭಾ ಚುನಾವಣೆಯಲ್ಲಿ ಯಾರೊಬ್ಬರು ಸಹ ಮತದಾನದಿಂದ ದೂರ ಉಳಿಯದೆ ಎಲ್ಲರು ಕಡ್ಡಾಯವಾಗಿ ಮ

website: www.kayakayogi.com
ಕಾಯಕಯೋಗಿ
KAYAKA YOGI - Regional Daily
ಪುಟ–4
07–04–2024
ತುಮಕೂರು–ಚಾಮರಾಜನಗರ

ಹಳೇ ದ್ವೇಷದ ಹಿನ್ನೆಲೆ ಮಚ್ಚಿನಿಂದ ಕತ್ತಿಗೆ ಹಲ್ಲೆ ಆರೋಪಿಗೆ 30 ತಿಂಗಳ ಜೈಲು ಶಿಕ್ಷೆ

■ ಕಾಯಕಯೋಗಿ ಸುದ್ದಿ

ಹಾನಸ: ಮಚ್ಚಿನಿಂದ ಹಲ್ಲೆ ಮಾಡಿ ಕೊಲೆಗೆ ಯತ್ನಿಸಿದ ಆರೋಪಿಗೆ 30 ತಿಂಗಳ ಜೈಲು ಶಿಕ್ಷೆ ವಿಧಿಸಿ ಹಾಸನ 2ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ ಮಾ.28ರಂದು ತೀರ್ಪು ನೀಡಿದೆ. ಪಿರ್ಯಾದಿ ಯಶೋದನಂದನ ರವರ ಸೋದರ ಸಂಬಂಧಿ ಆರೋಪಿ ಹೊನ್ನೇಗೌಡ ಮತ್ತು ಅಣ್ಣತಮ್ಮಂದಿರು. ಜಮೀನಿನ ಬಗ್ಗೆ ಕೋರ್ಟ್‌ನಲ್ಲಿ ಕೇಸ್ ಹಾಕಿಕೊಂಡಿದ್ದು, ಈ ಬಗ್ಗೆ ಪಿರ್ಯಾದಿ ಆರೋಪಿ ಅಣ್ಣತಮ್ಮಂದಿರಿಗೆ ಕೇಸ್‌ಗೆ ಸಪೋರ್ಟ್ ಮಾಡುತ್ತಾರೆಂದು ಪಿರ್ಯಾದಿಯವರ ಮೇಲೆ 2 ವರ್ಷಗಳಿಂದ ದ್ವೇಷವಿದ್ದು, ಹಲವಾರು ಬಾರಿ, ಪಿರ್ಯಾದಿಗೆ ನಿಂದಿಸಿ ಕೊಲೆ ಬೆದರಿಕೆಯನ್ನು ಹಾಕುತ್ತಿದ್ದನು. ಈ ರೀತಿ ಆರೋಪಿಗೆ ಪಿರ್ಯಾದಿಯ ಮೇಲೆ ದ್ವೇಷವಿದ್ದು, 2019ರ ಮೇ 18ರಂದು ರಂದು ಪಿರ್ಯಾದಿ ಮತ್ತು ಅವರ ದೊಡ ಸಂಬಂಧಿ ದುದ್ದ ಹೋಬಳಿ, ಅಟ್ಟಾವರ ಗ್ರಾಮದ ಹರೀಶರವರು ಸಂಜೆ 6.30 ಗಂಟೆ ಸಮಯದಲ್ಲಿ ಬಲ್ಲೇನಹಳ್ಳಿ ಗ್ರಾಮದ ಹೊಸ ಕಟ್ಟೆಯ ಹತ್ತಿರ ಕಲ್ಲು ಕೋರೆ ಕ್ಷಪ್ರಸಿಂದ ಊರಿಗೆ ಬರುತ್ತಿದ್ದಾಗ, ಆರೋಪಿ ಹೊನ್ನೇಗೌಡನು ತನ್ನ ಕೈ–13–ಬಿ–2201 ರ ಕಾರಿನಲ್ಲಿ ಎದುರಿಗೆ ಬಂದು ಕಾರನ್ನು ಅಡ್ಡಕ್ಕೆ ನಿಲ್ಲಿಸಿ, ಅಡ್ಡಗಟ್ಟಿ, ಕಾರಿನಿಂದ ಇಳಿದು, ಪಿರ್ಯಾದಿಗೆ ಏನೋ ಬೋಳೆ ಮಗನೇ, ಅಣ್ಣತಮ್ಮಂದಿರಿಗೆ ಕೋರ್ಟ್‌ನ ಜಮೀನಿನ ಕೇಸ್‌ನಲ್ಲಿ ಅವರಿಗೆ ಸಪೋರ್ಟ್ ಮಾಡುತ್ತೀಯಾ, ಎಂದು ಕಾರಿನಿಂದ ಮಚ್ಚನ್ನು ತೆಗೆದುಕೊಂಡು ಪಿರ್ಯಾದಿಯನ್ನು ಬದುಕಿದ್ದರೆ ತಾನೇ, ಸಪೋರ್ಟ್ ಮಾಡುವುದು ಎಂದು ಸಾಯಿಸುವ ಉದ್ದೇಶದಿಂದ ಪಿರ್ಯಾದಿಯ ಕತ್ತನ್ನು ಕತ್ತರಿಸಿ, ಸಾಯಿಸಲು ಹೋದಾಗ, ಪಿರ್ಯಾದಿಯು ಎಡಕೈಯನ್ನು ಎತ್ತಿದಾಗ, ಮಚ್ಚಿನ ಬಟ ಎಡಕೈಗೆ ಬೀಸಿ ಹೊಡೆದು, ಎಡ ಕೈಗೆ ರಕ್ತಗಾಯವಪಡಿಸಿ, ಸಾಯಿಸಲು ಪ್ರಯತ್ನಿಸಿದನು.ಪ್ರಕರಣದ ವಿಚಾರಣೆ ನಡೆಸಿದ ಹಾಸನದ 2ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಎಸ್.ಎ. ಹಿದಾಯತುಲ್ಲಾ ಶರೀಫ್ ಅವರು ಆರೋಪಿಯ ಮೇಲಿರುವ ದೋಷಾರೋಪಣೆ ಸಾಬೀತಾಗಿದೆ ಎಂದು ತೀರ್ಮಾನಿಸಿ, ಆರೋಪಿ ಹೊನ್ನೇಗೌಡ ಅವರಿಗೆ ಭಾ.ದಂ.ಸಂ ಕಲಂ 307 ಕ್ಕೆ 30 ತಿಂಗಳ ಕಠಿಣ ಕಾರಾಗೃಹವಾಸ ಶಿಕ್ಷೆ 25 ಸಾವಿರ ದಂಡ, ಭಾ.ದಂ.ಸಂ ಕಲಂ 506 ರಡಿ ಅಪರಾಧಕ್ಕಾಗಿ 1 ವರ್ಷ ಕಠಿಣ ಕಾರಾಗೃಹವಾಸ ಶಿಕ್ಷೆ 5 ಸಾವಿರ ದಂಡ, ಭಾ.ದಂ.ಸಂ ಕಲಂ 504 ರಡಿ ಅಪರಾಧಕ್ಕಾಗಿ 1 ವರ್ಷ ಕಠಿಣ ಕಾರಾಗೃಹವಾಸ ಶಿಕ್ಷೆ 5 ಸಾವಿರ ದಂಡ, ಭಾ.ದಂ.ಸಂ ಕಲಂ 341 ರಡಿ ಅಪರಾಧಕ್ಕಾಗಿ 1 ತಿಂಗಳ ಕಠಿಣವಾಸ ಶಿಕ್ಷೆ 500 ದಂಡ, ವಿಧಿಸಿ, ಮಾರ್ಚ್ 28ರಂದು ತೀರ್ಮಾನ ನೀಡಿ ಆದೇಶಿಸಿರುತ್ತಾರೆ.

ಕೈ ಅಭ್ಯರ್ಥಿ ವಿರುದ್ಧ ಬಿಜೆಪಿ ದೂರು ಅವಿವಾಹಿತ ಎಂದು ಸುಳ್ಳು ನಾಮಪತ್ರ ಸಲ್ಲಿಕೆ ಆರೋಪ

ಚಾಮರಾಜನಗರ: ಕಾಂಗ್ರೆಸ್ ಅಭ್ಯರ್ಥಿ ಸುನಿಲ್ ಬೋಸ್ ಅವಿವಾಹಿತರೆಂದು ಸುಳ್ಳು ನಾಮಪತ್ರ ಸಲ್ಲಿಸಿದ್ದಾರೆ ಎಂದು ಶುಕ್ರವಾರ ಸಂಜೆ ಜಿಲ್ಲಾ ಚುನಾವಣಾಧಿಕಾರಿಗೆ ಬಿಜೆಪಿ ಮುಖಂಡ ದೂರು ನೀಡಿದ್ದಾರೆ.

ಬಿಜೆಪಿ ಮಾಜಿ ಜಿಲ್ಲಾಧ್ಯಕ್ಷ ನಾರಾಯಣಪ್ರಸಾದ್ ಚಾಮರಾಜನಗರ ಡಿಸಿಗೆ ಸುನಿಲ್ ಬೋಸ್ ಸಾಮಾಜಿಕ ಜಾಲತಾಣದಲ್ಲಿ ಹಂಚಿಕೊಂಡಿರುವ ಫೋಟೋಗಳನ್ನು ಲಗತ್ತಿಸಿ ದೂರು ಕೊಡಲಾಗಿದೆ.

ಏ.3 ರಂದು ಚಾಮರಾಜನಗರದಲ್ಲಿ ಭರ್ಜರಿ ರೋಡ್ ಶೋ ನಡೆಸಿ ಸುನಿಲ್ ಬೋಸ್ ನಾಮಪತ್ರ ಸಲ್ಲಿಸಿದ್ದರು. ನಾಮಪತ್ರದ ಅಫಿಡವಿಟ್ ನಲ್ಲಿ ಪತ್ನಿ, ಅವಲಂಬಿತರು ಯಾರೂ ಇಲ್ಲಾ ಎಂದು ನಮೂದು ಮಾಡಿದ್ದಾರೆ.

ಇನ್ನು, ನನ್ನ ಮಗಳಿಗೆ ಹುಟ್ಟುಹಬ್ಬದ ಶುಭಾಶಯಗಳು, ಹೆಚ್ಚಿನ ಆರೋಗ್ಯ, ಆಯುಷ್ಯು ಸಿಗಲೆಂದು ಪೋಸ್ಟ್ ಮಾಡಿರುವ ಫೋಟೋ. ಕುಟುಂಬದ ಜೊತೆ ಇರುವ ಫೋಟೋಗಳನ್ನು ಫೇಸ್ ಬುಕ್ ನಲ್ಲಿ ಅಪಲೋಡ್ ಮಾಡಿದ್ದು ಇದರ ಫೋಟೋಗಳನ್ನು ಬಿಜೆಪಿಯು ಅಸ್ತ್ರವಾಗಿ ಬಳಸಿಕೊಂಡು ದೂರು ನೀಡಿದೆ.

ಮೋದಿ ಪ್ರಧಾನಿಯಾಗಲು ಬಾಲರಾಜು ಗೆಲುವು ಮುಖ್ಯ: ಮಂಜುನಾಥ್

■ ಕಾಯಕಯೋಗಿ ಸುದ್ದಿ



ಚಾಮರಾಜನಗರ: ನರೇಂದ್ರ ಮೋದಿ ಮತ್ತೊಮ್ಮೆ ಭಾರತ ದೇಶದ ಪ್ರಧಾನಿಯಾಗಲು ಚಾಮರಾಜನಗರ ಮೀಸಲು ಲೋಕಸಭಾ ಕ್ಷೇತ್ರದ ಬಿಜೆಪಿ ಮತ್ತು ಜೆಡಿಎಸ್ ಬೆಂಬಲಿತ ಅಭ್ಯರ್ಥಿ ಎಸ್. ಬಾಲರಾಜು ಗೆಲುವು ಮುಖ್ಯ ಎಂದು ಶಾಸಕ ಎಂ.ಆರ್. ಮಂಜುನಾಥ್ ತಿಳಿಸಿದರು.

ಹನೂರು ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಪಾಳ್ಯ ಚಿಕ್ಕಲ್ಲೂರು, ಲೊಕ್ಕನಹಳ್ಳಿ ಮತ್ತು ಬಂಡಳ್ಳಿ ಗ್ರಾಮಗಳಲ್ಲಿ ಮುಖಂಡರ ಮತ್ತು ಕಾರ್ಯಕರ್ತರ ಸಭೆಯಲ್ಲಿ ಅವರು ಮಾತನಾಡಿದರು.

ದೇಶ ಮತ್ತು ರಾಜ್ಯದ ಹಿತ ದೃಷ್ಟಿಯಿಂದ ಜೆಡಿಎಸ್ ಪಕ್ಷದ ವರಿಷ್ಠರಾದ ದೇವೇಗೌಡರು ಮತ್ತು ಕುಮಾರಸ್ವಾಮಿ ರವರು ಬಿಜೆಪಿ ಪಕ್ಷದ ಜೊತೆ ಮೈತ್ರಿ ಮಾಡಿಕೊಂಡಿದ್ದಾರೆ. ಆದ್ದರಿಂದ ಮುಂದಿನ ಬಾರಿ ನರೇಂದ್ರ ಮೋದಿಯವರನ್ನು ಪ್ರಧಾನಿ ಮಾಡುವ ಮೂಲಕ ದೇಶದ ಭವಿಷ್ಯವನ್ನು ಉಜ್ವಲ ಗೊಳಿಸಬೇಕು. ಚಾಮರಾಜನಗರ ಕ್ಷೇತ್ರದಲ್ಲಿ ಬಿಜೆಪಿ ಮತ್ತು ಜೆಡಿಎಸ್ ಮುಖಂಡರು ಎಲ್ಲರೂ ಒಗ್ಗಟ್ಟಿನಿಂದ ಬಿಜೆಪಿ ಅಭ್ಯರ್ಥಿ ಎಸ್ ಬಾಲರಾಜು ರವರನ್ನು ಹೆಚ್ಚಿನ ಮತಗಳ ಅಂತರದಲ್ಲಿ ಜಯಶೀಲರನ್ನಾಗಿ ಮಾಡಲು ಎರಡು ಪಕ್ಷದ ಕಾರ್ಯಕರ್ತರು ಶ್ರಮಿಸಬೇಕು ಎಂದರು.

ಓಬಿಸಿ ಜಿಲ್ಲಾಧ್ಯಕ್ಷ ಬಿ.ವೆಂಕಟೇಶ್ ಮಾತನಾಡಿ ನರೇಂದ್ರ ಮೋದಿ ಯವರ ಜನಪರ ಕಾಳಜಿ ಮತ್ತು ದೂರದೃಷ್ಟಿಯನ್ನು ಮನದಲ್ಲಿಟ್ಟುಕೊಂಡು 2047ರ ಹೊತ್ತಿಗೆ ಪ್ರಪಂಚದಲ್ಲಿಯೇ ಭಾರತ ನಂಬರ್ ಒನ್ ದೇಶವಾಗಬೇಕು ಎಂಬ ಕನಸು ಹೊತ್ತಿರುವ ನರೇಂದ್ರ ಮೋದಿಯವರ ಕೈ ಬಲಪಡಿಸಬೇಕಾದರೆ ಚಾಮರಾಜನಗರ ಮೀಸಲು ವಿಧಾನಸಭಾ ಕ್ಷೇತ್ರದಲ್ಲಿ ಜೆಡಿಎಸ್ ಮತ್ತು ಬಿಜೆಪಿ ಅಭ್ಯರ್ಥಿ ಎಸ್ ಬಾಲರಾಜು ರವರನ್ನು ಜಯಶೀಲರನ್ನಾಗಿ ಮಾಡಬೇಕು ಎಂದು ಕಾರ್ಯಕರ್ತರಲ್ಲಿ ಮನವಿ ಮಾಡಿದರು.

ಬಿಜೆಪಿ ಮುಖಂಡ ನಿಶಾಂತ್ ಮಾತನಾಡಿ ನರೇಂದ್ರ ಮೋದಿಯವರ 10 ವರ್ಷಗಳ ಆಡಳಿತದ ಅಭಿವೃದ್ಧಿ ಕಾರ್ಯಗಳು ಮತ್ತು ಅಭಿವೃದ್ಧಿ ಯೋಜನೆಗಳು ದೇಶವನ್ನು ಮುನ್ನಡೆಸುತ್ತಿದೆ. ನರೇಂದ್ರ ಮೋದಿ ಅವರ ಜನಪ್ರಿಯತೆಯನ್ನು ಸಹಿಸದ ಕಾಂಗ್ರೆಸ್ ಅವರ ವಿರುದ್ಧ ಸುಳ್ಳು ಆರೋಪಗಳನ್ನು ಮಾಡುತ್ತಿದೆ ಎಂದು ತಿಳಿಸಿದರು.

ಬಿಜೆಪಿ ಅಭ್ಯರ್ಥಿ ಬಾಲರಾಜು ಮಾತನಾಡಿ ಕಳೆದ 50 ವರ್ಷಗಳಿಂದ ಕಾಂಗ್ರೆಸ್ ಗರೀಬಿ ಹಠವು ಎಂದು ಹೇಳಿಕೊಂಡು ಬರುತ್ತಿದೆ. ಆದರೆ ಇಲ್ಲಿಯವರೆಗೆ ಬಡತನ ನಿರ್ಮೂಲನೆಯಾಗಿಲ್ಲ. ನರೇಂದ್ರ ಮೋದಿಯವರ 10 ವರ್ಷಗಳ ಆಡಳಿತ ಪ್ರಪಂಚದಲ್ಲಿ ಭಾರತದ ಅಭಿವೃದ್ಧಿಯಲ್ಲಿ ಮೂರನೇ ಸ್ಥಾನಕ್ಕೆ ನಿಂತಿರುವುದಕ್ಕೆ ಸಾಕ್ಷಿಯಾಗಿದೆ ಎಂದರು.

ಕಾಂಗ್ರೆಸ್ ಸಂವಿಧಾನ ಮತ್ತು ಬಾಬಾ ಸಾಹೇಬ್ ಅಂಬೇಡ್ಕರ್ ಅವರ ಹೆಸರು ಹೇಳಿಕೊಂಡು ಮತ ಕೇಳುತ್ತಿದೆ. ಆದರೆ ಬಾಬಾ ಸಾಹೇಬರ ನಿಧನದ ಸಂದರ್ಭದಲ್ಲಿ ಇದ್ದ ಕಾಂಗ್ರೆಸ್ ಸರ್ಕಾರ ಅವರ ಶವಸಂಸ್ಕಾರಕ್ಕೆ ಸ್ಥಳ ನೀಡಲಿಲ್ಲ. ಕೊನೆಗೆ ಸಮುದ್ರ ತೀರದಲ್ಲಿ ಅವರ ಅಂತ್ಯಸಂಸ್ಕಾರ ನೆರವೇರಿಸಲಾಯಿತು. ಈ ದುರ್ಘಟನೆಯನ್ನು ನೆನೆಸಿಕೊಂಡರೆ ಬಾಬಾ ಸಾಹೇಬರ ಹೆಸರನ್ನು ಹೇಳುವ ನೈತಿಕತೆ ಕಾಂಗ್ರೆಸ್ ಪಕ್ಷದವರಿಗಿಲ್ಲ.

ಬಿಜೆಪಿ ಪಕ್ಷವು ನನ್ನನ್ನು ಗುರುತಿಸಿ ಈ ಚುನಾವಣೆಯಲ್ಲಿ ಅಭ್ಯರ್ಥಿಯನ್ನಾಗಿ ಮಾಡಿದೆ. ಈ ಅವಕಾಶ ಸಿಕ್ಕಿರುವುದು ನನ್ನ ಸೌಭಾಗ್ಯ ಎಂದುಕೊಂಡಿದ್ದೇನೆ. ಆದ್ದರಿಂದ ತಾವೆಲ್ಲ ಮತದಾರ ಬಂಧುಗಳು ಈ ಚುನಾವಣೆಯಲ್ಲಿ ತಮ್ಮ ಅಮೂಲ್ಯವಾದ ಮತವನ್ನು ನನಗೆ ನೀಡಿ ಜಯಶೀಲರನ್ನಾಗಿ ಮಾಡುವ ಮೂಲಕ ಕೇಂದ್ರದಲ್ಲಿ ಮತ್ತೊಮ್ಮೆ ನರೇಂದ್ರ ಮೋದಿಯವರ ಆಡಳಿತಕ್ಕೆ ಸಹಕಾರ ನೀಡಬೇಕು ಎಂದು ತಿಳಿಸಿದರು.

ಜಿಲ್ಲಾ ಬಿಜೆಪಿ ಘಟಕದ ಅಧ್ಯಕ್ಷ ನಿರಂಜನ್ ಕುಮಾರ್, ಬಿಜೆಪಿ ಮಂಡಲದ ಅಧ್ಯಕ್ಷರಾದ ವೃಷಭೇಂದ್ರ, ರಾಜು ಮುಖಂಡರಾದ ಪ್ರಕಾಶ್ ನಾಗಪ್ಪ, ಡಾ.ದತ್ತೇಶ್ ಕುಮಾರ್, ನಿಶಾಂತ್, ವೆಂಕಟೇಶ್, ಜಯಸಂದ್ರ, ಜೆಡಿಎಸ್ ಮುಖಂಡರಾದ ಮಂಜೇಶ್, ಉದ್ಬನೂರು ಪ್ರಸಾದ್, ಶಿವಮೂರ್ತಿ, ಹಾಗೂ ಮುಖಂಡರು ಮತ್ತು ಕಾರ್ಯಕರ್ತರು ಉಪಸ್ಥಿತರಿದ್ದರು.

ಗಮನ ಸೆಳೆದ ಮತದಾನ ಜಾಗೃತಿಯ ಬೃಹತ್ ಬೈಕ್ ಜಾಥಾ

■ ಕಾಯಕಯೋಗಿ ಸುದ್ದಿ



ಚಾಮರಾಜನಗರ: ಲೋಕಸಭಾ ಸಾರ್ವತ್ರಿಕ ಚುನಾವಣೆಯ ಅಂಗವಾಗಿ ಮತದಾನದ ಮಹತ್ವ ಕುರಿತು ನಾಗರಿಕರಿಗೆ ಅರಿವು ಮೂಡಿಸುವ ನಿಟ್ಟಿನಲ್ಲಿ ಚಾಮರಾಜನಗರ ಪಟ್ಟಣದಲ್ಲಿಂದು ಹಮ್ಮಿಕೊಳ್ಳಲಾಗಿದ್ದ ಬೃಹತ್ ಬೈಕ್ (ರ‍್ಯಾಲಿ) ಜಾಥಾ ಎಲ್ಲರ ಗಮನ ಸೆಳೆಯಿತು.

ನಗರದ ಡಾ.ಬಿ.ಆರ್.ಅಂಬೇಡ್ಕರ್ ಜಿಲ್ಲಾ ಕ್ರೀಡಾಂಗಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಜಿಲ್ಲಾ ಸ್ವೀಪ್ ಸಮಿತಿ ಸಹಯೋಗದಲ್ಲಿ ಆಯೋಜಿಸಲಾಗಿದ್ದ ಕಾರ್ಯಕ್ರಮದಲ್ಲಿ ಜಿಲ್ಲಾ ಚುನಾವಣಾಧಿಕಾರಿ ಹಾಗೂ ಜಿಲ್ಲಾಧಿಕಾರಿಗಳಾದ ಶಿಲ್ಪಾ ನಾಗ್ ಅವರು ಮತದಾನದ ಪ್ರತಿಜ್ಞಾ ವಿಧಿ ಬೋಧಿಸಿದರು.

ಜಿಲ್ಲಾ ಚುನಾವಣಾಧಿಕಾರಿ ಹಾಗೂ ಜಿಲ್ಲಾಧಿಕಾರಿ ಶಿಲ್ಪಾ ನಾಗ್, ಜಿಲ್ಲಾ ಸ್ವೀಪ್ ಸಮಿತಿ ಅಧ್ಯಕ್ಷರು ಹಾಗೂ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಆನಂದ್ ಪ್ರಕಾಶ್ ಮೀನಾ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪದ್ಮಿನಿ ಸಾಹು, ಇತರೆ ಗಣ್ಯರು ಕೇಸರಿ, ಬಿಳಿ, ಹಸಿರು ಬಣ್ಣಗಳ ಂದ ಕೂಡಿದ ಮತದಾನ ಜಾಗೃತಿಯ ಬಲೂನ್‌ಗಳನ್ನು ಆಕಾಶಕ್ಕೆ ಹಾರಿ ಬಿಡುವ ಮೂಲಕ ಬೈಕ್ ಜಾಥಾವನ್ನು ಉದ್ಘಾಟಿಸಿದರು.

ಇದೇ ವೇಳೆ ಬೈಕ್ ಜಾಥಾವನ್ನು ಉದ್ದೇಶಿಸಿ ಮಾತನಾಡಿದ ಜಿಲ್ಲಾ ಚುನಾವಣಾಧಿಕಾರಿ ಹಾಗೂ ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಅವರು ಪ್ರತಿಯೊಬ್ಬರಲ್ಲೂ ಮತದಾನದ ಜಾಗೃತಿ ಮೂಡಿಸುವ ಬೈಕ್ ಜಾಥಾ ಹಮ್ಮಿಕೊಳ್ಳಲಾಗಿದೆ. ಚುನಾವಣೆಯು ಐದು ವರ್ಷಕ್ಕೊಮ್ಮೆ ಬರುವ ಹಬ್ಬವಾಗಿದೆ. ಮತದಾರರ ಪಟ್ಟಿಯಲ್ಲಿ ಹೆಸರು ನೊಂದಾಯಿಸಿರುವ ಎಲ್ಲ ಅರ್ಹ ಮತದಾರರು ಮತಗಟ್ಟೆಗೆ ಬಂದು ಕಡ್ಡಾಯವಾಗಿ ಮತದಾನ ಮಾಡಬೇಕು ಎಂದರು.

ಲೋಕಸಭಾ ಚುನಾವಣೆಯ ಮತದಾನವು ಏಪ್ರಿಲ್ 26ರಂದು ನಡೆಯಲಿದ್ದು, ಈ ಬಾರಿ ಮೊದಲ ಸಲ ಮತದಾನ ಮಾಡುವ 18 ವರ್ಷ ತುಂಬಿದ ಯುವ ಮತದಾರರು ಶಪಥದ ಮತ ಚಲಾಯಿಸಬೇಕು. ಮತದಾನದ ಪಾವಿತ್ರ್ಯತೆ ಹಾಗೂ ಯಾವುದೇ ಆಮಿಷಗಳಿಗೆ ಒಳಗಾಗದೇ ಮತದಾನ ಮಾಡುವಂತೆ ಇತರರಿಗೂ ತಿಳಿಹೇಳಬೇಕು ಎಂಡ ಜಿಲ್ಲಾ ಚಿನಾವಣಾಧಿಕಾರಿ ಶಿಲ್ಪಾ ನಾಗ್ ಅವರು ತಿಳಿಸಿದರು.

ಬಳಿಕ ನೂರಾರು ಬೈಕ್‌ಗಳಲ್ಲಿ ಸಮಾವೇಶಗೊಂಡಿದ್ದ ಜಾಥಾಗೆ ಜಿಲ್ಲಾ ಸ್ವೀಪ್ ಸಮಿತಿ ನೋಡಲ್ ಅಧಿಕಾರಿ ಪಿ. ಲಕ್ಷ್ಮೀ ಅವರು ಹಸಿರು ನಿಶಾನೆ ತೋರಿ ಜಾಥಾಗೆ ಶುಭ ಕೋರಿದರು.

ಜಿಲ್ಲಾ ಚುನಾವಣಾಧಿಕಾರಿ ಹಾಗೂ ಜಿಲ್ಲಾಧಿಕಾರಿಗಳಾದ ಶಿಲ್ಪಾ ನಾಗ್, ಜಿಲ್ಲಾ ಸ್ವೀಪ್ ಸಮಿತಿ ಅಧ್ಯಕ್ಷರು ಹಾಗೂ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಆನಂದ್ ಪ್ರಕಾಶ್ ಮೀನಾ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪದ್ಮಿನಿ ಸಾಹು ಅವರುಗಳು ಸಹ ಬೈಕ್ ಚಲಾಯಿಸಿದ್ದು ಜಾಥಾದ ವಿಶೇಷವಾಗಿತ್ತು.

ಜಿಲ್ಲಾ ಕ್ರೀಡಾಂಗಣದಿಂದ ಹೊರಟ ಬೈಕ್ ಜಾಥಾವು ನಗರದ ಎಲ್.ಐ.ಸಿ ವೃತ್ತ, ಸಂತೇ ಮಹಳ್ಳಿ ವೃತ್ತ, ಪಚ್ಚಪ್ಪ ವೃತ್ತ, ಬಿ.ರಾಚಯ್ಯ ಜೋಡಿರಸ್ತೆ, ರಾಮಸಮುದ್ರ ಮೂಲಕ ಸಾಗಿ ಬಳಿಕ ಕೆ.ಎಸ್.ಆರ್.ಟಿ.ಸಿ ಬಸ್ ನಿಲ್ದಾಣ, ಗುಂಡ್ಲುಪೇಟೆ ಸರ್ಕಲ್ ಮಾರ್ಗವಾಗಿ ಅಂತಿಮವಾಗಿ ಡಾ. ಬಿ.ಆರ್. ಅಂಬೇಡ್ಕರ್ ಜಿಲ್ಲಾ ಕ್ರೀಡಾಂಗಣ ತಲುಪಿತು. ಬೈಕ್ ಜಾಥಾದಲ್ಲಿ ಪಾಲ್ಗೊಂಡಿದ್ದ ನೂರಾರು ಅಧಿಕಾರಿಗಳು, ಇತರರು ಮತದಾನ ಅರಿವು ನಾಮಫಲಕಗಳನ್ನು ಹಿಡಿದು 'ಚುನಾವಣಾ ಪರ್ವ–ದೇಶದ ಗರ್ವ' ಘೋಷಣೆಗಳನ್ನು ಕೂಗಿ ಜನಜಾಗೃತಿ ಮೂಡಿಸಿದರು.

ಅಕ್ರಮ ನಡೆಯದಂತೆ ಅಬಕಾರಿ ಇಲಾಖೆ ಕಟ್ಟೆಚ್ಚರ



ಚಾಮರಾಜನಗರ: ಲೋಕಸಭಾ ಚುನಾವಣೆ ಕಾವು ದಿನದಿಂದ ದಿನಕ್ಕೆ ರಂಗೇರುತ್ತಿದ್ದು ಚಾಮರಾಜನಗರ ಲೋಕ ಅಖಾಡದಲ್ಲಿ ಯಾವುದೇ ಅಕ್ರಮ ನಡೆಯಬಾರದೆಂದು ಅಬಕಾರಿ ಇಲಾಖೆ ಕಟ್ಟೆಚ್ಚರ ವಹಿಸಿದೆ.

ಇದೇ ಮೊದಲ ಬಾರಿ ಅಬಕಾರಿ ಇಲಾಖೆ ಮದ್ಯದಂಗಡಿಗಳಲ್ಲಿ ಮತದಾನ ಜಾಗೃತಿ ಮೂಡಿಸುತ್ತಿದ್ದು, ಚಾಮರಾಜನಗರದ ಮದ್ಯಗಡಿಗಳಲ್ಲಿ ಭಿತ್ತಿಪತ್ರ ಅಂಟಿಸಿ ಮದ್ಯಪ್ರಿಯರು ಮತದಾನದಿಂದ ದೂರ ಉಳಿಯದಂತೆ ಅರಿವು ಮೂಡಿಸುತ್ತಿದೆ.

ಗಡಿಜಿಲ್ಲೆಯಲ್ಲಿ 145 ಕ್ಕೂ ಅಧಿಕ ಬಿಟ್ ಲೆಟ್ ಗಳಿದ್ದು ಎಲ್ಲೆಡೆ ಮತದಾನ ಜಾಗೃತಿ ಭಿತ್ತಿಚಿತ್ರ ಅಂಟಿಸಲಾಗಿದೆ. ಮದ್ಯದಂಗಡಿಗೆ ಹೋಗುವ ಮುನ್ನ, ಮದ್ಯ ಸೇವಿಸುವಾಗ ಜನರಿಗೆ ಕಾಣುವಂತೆ ಹಾಗೂ ಹೊರಹೋಗುವ ಸ್ಥಳಗಳಲ್ಲಿ ಈ ಬಿತ್ತಿಪತ್ರ ಅಂಟಿಸಲಾಗಿದ್ದು ಮತದಾನ ಜಾಗೃತಿ ವ್ಯಾಪ್ತಿಗೆ ಇದೇ ಮೊದಲ ಬಾರಿಗೆ ಮದ್ಯಪ್ರಿಯರನ್ನೂ ಸೇರಿಸಲಾಗಿದೆ.

ಚಾಮರಾಜನಗರದಲ್ಲಿ 18 ಲಕ್ಷಕ್ಕೂ ಅಧಿಕ ಮತದಾರರಿದ್ದು ಮದ್ಯಪ್ರಿಯರ ಸಂಖ್ಯೆ 5 ಲಕ್ಷದಷ್ಟಿದೆ. ಈ ಹಿನ್ನೆಲೆಯಲ್ಲಿ, ಅಬಕಾರಿ ಇಲಾಖೆಯು ಮದ್ಯಪ್ರಿಯರು ಮತದಾನದಿಂದ ದೂರ ಉಳಿಯದಂತೆ ಮಾಡಲು ಜಾಗೃತಿ ಮೂಡಿಸಲಾಗುತ್ತಿದೆ.

ರಾಜಕಾರಣಿಗಳ ಬಾರ್ ಮೇಲೆ ನಿಗಾ: ಇನ್ನು, ಜಿಲ್ಲೆಯಲ್ಲಿ ರಾಜಕಾರಣಿಗಳ ಮಾಲಿಕತ್ವ ಹಾಗೂ ಪ್ರಭಾವ ಇರುವ ಮದ್ಯದಂಗಡಿಗಳ ಮೇಲೆ ಅಬಕಾರಿ ಇಲಾಖೆ ನಿಗಾ ಇಟ್ಟಿದೆ. ಜಿಲ್ಲೆಯಲ್ಲಿ ಒಟ್ಟು 41 ಮದ್ಯದಂಗಡಿಗಳನ್ನು ಪಟ್ಟಿ ಮಾಡಿ ನಿತ್ಯ ಖರೀದಿ. ದಾಸ್ತಾನು ಪರಿಶೀಲನೆ ಮಾಡುವ ಜೊತೆಗೆ ಈ ಹಿಂದೆ ಖರೀದಿ– ಮಾರಾಟದ ಲೆಕ್ಕವನ್ನೂ ಅಬಕಾರಿ ಇಲಾಖೆ ತಾಳೆ ಹಾಕುವ ಕೆಲಸ ಮಾಡುತ್ತಿದ್ದು ಅಕ್ರಮ ಮದ್ಯ ಸಂಗ್ರಹಕ್ಕೆ ಕಡಿವಾಣ ಹಾಕುವ ಕೆಲಸ ಮಾಡುತ್ತಿದೆ. ಒಟ್ಟಿನಲ್ಲಿ ಅಬಕಾರಿ ಇಲಾಖೆಯು ಚುನಾವಣೆ ಹಿನ್ನೆಲೆ ತಪಾಸಣೆ, ಕಾರ್ಯಾಚರಣೆಗಳನ್ನು ಚುರುಕುಗೊಳಿಸಿ ಕಟ್ಟೆಚ್ಚರ ವಹಿಸಿದೆ.

ಬರ ನಿರ್ವಹಣೆ ಸಂಬಂಧ ಮೇವಿನ ಕೊರತೆ ಇರುವ ಗ್ರಾಮಗಳ ಸಾರ್ವಜನಿಕರು ಮಾಹಿತಿ ನೀಡಲು ಮನವಿ

■ ಕಾಯಕಯೋಗಿ ಸುದ್ದಿ

ಚಾಮರಾಜನಗರ:– ಚಾಮರಾಜನಗರ ಜಿಲ್ಲೆಯಾದ್ಯಂತ ಬರ ನಿರ್ವಹಣೆ ಹಿನ್ನೆಲೆಯಲ್ಲಿ ಜಾನುವಾರುಗಳಿಗೆ ಮೇವಿನ ಕೊರತೆ ಕಂಡು ಬಂದಲ್ಲಿ ಸಾರ್ವಜನಿಕರು ಜಿಲ್ಲಾಧಿಕಾರಿಗಳ ಕಚೇರಿಯ ವಿಪತ್ತು ನಿರ್ವಹಣಾ ಕೋಶದ ದೂರವಾಣಿ ಸಂಖ್ಯೆಗಳಿಗೆ ಮಾಹಿತಿ ನೀಡುವಂತೆ ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಅಧ್ಯಕ್ಷರಾದ ಶಿಲ್ಪಾ ನಾಗ್ ಅವರು ತಿಳಿಸಿದ್ದಾರೆ.

ಬರ ನಿರ್ವಹಣೆ

website: www.kayakayogi.com

ಕಾಯಕಯೋಗಿ

KAYAKA YOGI - Regional Daily

ಪುಟ–5 | 07–04–2024

ಹಾಸನ–ರಾಮನಗರ

ಏ.5 ರಿಂದ ಮೇ 4 ರವರೆಗೆ 1000 ಗ್ರಾಮ ಆಡಳಿತ ಅಧಿಕಾರಿ ಹುದ್ದೆಗಳಿಗೆ ಆನ್‌ಲೈನ್‌ನಲ್ಲಿ ಅರ್ಜಿ ಆಹ್ವಾನ

■ ಕಾಯಕಯೋಗಿ ಸುದ್ದಿ

ಹಾಸನ: ಕರ್ನಾಟಕ ಸರ್ಕಾರದ ಕಂದಾಯ ಇಲಾಖೆಯಲ್ಲಿ ಖಾಲಿ ಇರುವ ಒಟ್ಟು 1000 ಗ್ರಾಮ ಆಡಳಿತ ಅಧಿಕಾರಿ ಹುದ್ದೆಗಳಿಗೆ ಕರ್ನಾಟಕ ಪರೀಕ್ಷಾ ಪ್ರಾಧಿಕಾರ ಅರ್ಜಿ ಆಹ್ವಾನಿಸಿದ್ದು, ಕೆಲವು ತಾಂತ್ರಿಕ ಕಾರಣಗಳಿಂದ ಆನ್‌ಲೈನ್ ಅರ್ಜಿ ಸಲ್ಲಿಸುವ ಪ್ರಕ್ರಿಯೆ ಪ್ರಾರಂಭವಾಗಿರಲಿಲ್ಲ. ಏ.5 ರಂದು ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ಪರಿಷ್ಕೃತ ವೇಳಾಪಟ್ಟಿ ಬಿಡುಗಡೆ ಮಾಡಿದ್ದು ಏ. 5ರಿಂದ ಮೇ 4 ರವರೆಗೆ ಆನ್‌ಲೈನ್‌ಮೂಲಕ ಅರ್ಜಿ ಸಲ್ಲಿಸಬಹುದಾಗಿದೆ.

ದ್ವಿತೀಯ ಪಿ.ಯೂ.ಸಿ ತೇರ್ಗಡೆಯಾಗಿರುವ ವಿದ್ಯಾರ್ಥಿಗಳು ಹುದ್ದೆಗಳಿಗೆ ಅರ್ಜಿ ಸಲ್ಲಿಸಬಹುದಾಗಿದೆ. ಅರ್ಜಿ ಸಲ್ಲಿಸಲು ಹಾಗೂ ಹೆಚ್ಚಿನ ಮಾಹಿತಿಗಾಗಿ ಅಧಿಕೃತ ವೆಬ್‌ಸೈಟ್ ವಿಳಾಸ <https://cetonline.karnataka.gov.in/kea/"sÉÃn> ನೀಡಬಹುದಾಗಿದೆ. ಹಾಸನದ ಸಾಲಗಾಮೆ ರಸ್ತೆಯಲ್ಲಿರುವ ಕೃಷಿಕ್ ಸರ್ವೋದಯ ಫ್ರೌಡೇಶನ್(ರಿ)ನಲ್ಲಿ ಗ್ರಾಮ ಆಡಳಿತ ಅಧಿಕಾರಿ ಹಾಗೂ ಪಂಚಾಯತಿ ಅಭಿವೃದ್ಧಿ ಅಧಿಕಾರಿ ನೇಮಕಾತಿ ಪರೀಕ್ಷೆಗಳಿಗೆ ರಿಯಾಯಿತಿ ಶುಲ್ಕದಲ್ಲಿ ನುರಿತ ವಿಷಯ ತಜ್ಞರಿಂದ ತರಬೇತಿ ಪ್ರಾರಂಭಿಸಲಾಗುವುದು.

ಆಸಕ್ತರು ಮೊಬೈಲ್ ಸಂಖ್ಯೆ 8660217739 ಕ್ಕೆ ಕರೆ ಅಥವಾ ವಾಟ್ಸಾಪ್ ಮಾಡಬಹುದಾಗಿದೆ ಎಂದು ಶಾಖೆಯ ಗೌರವ ಕಾರ್ಯದರ್ಶಿಗಳಾದ ಹೆಚ್.ಪಿ.ಮೋಹನ್ ರವರು ತಿಳಿಸಿರುತ್ತಾರೆ.

ಕೇಂದ್ರ ವೀಕ್ಷಕರಿಂದ ಪರಿಶೀಲನೆ

ಹಾಸನ : ಹಾಸನ ಲೋಕಸಭಾ ಕ್ಷೇತ್ರಕ್ಕೆ ಕೇಂದ್ರ ಚುನಾವಣಾ ಆಯೋಗದ ವೀಕ್ಷಕರಾದ ಚಂದ್ರಶೇಖರ್ ಠಾಕೂರ್ ಅವರು ಶನಿವಾರ ವಿವಿಧ ಚೆಕ್ ಪೋಸ್ಟ್ ಗಳಿಗೆ ಭೇಟಿ ನೀಡಿ ಪರಿಶೀಲಿಸಿದರು.

ಜೌಲೇನಹಳ್ಳಿ ಹಾಗೂ ಮದ್ದಾಪುರ ಚೆಕ್ ಪೋಸ್ಟ್ ಗಳಿಗೆ ತೆರಳಿದ ವೀಕ್ಷಕರು, ತಪಾಸಣಾ ಕಾರ್ಯ ವೈಖರಿಯನ್ನು ಪರಿಶೀಲಿಸಿದರು. ಅರಕಲಗೂಡು, ಹೊಳೆನರಸೀಪುರ, ಶ್ರವಣಬೆಳಗೊಳ ಮತ್ತು ಹಾಸನ ವಿಧಾನಸಭಾ ಕ್ಷೇತ್ರಗಳ ಇವಿಎಂ ಸ್ಟಾಂಗ್ ರೂಂ ಗಳಿಗೂ ಭೇಟಿ ನೀಡಿದ ವೀಕ್ಷಕರು, ಸಿದ್ಧತೆಗಳನ್ನು ಪರಿಶೀಲಿಸಿದರು.

ವಿಶೇಷ ಚೇತನರಿಂದ ಮತದಾನ ಜಾಗೃತಿ ತ್ರಿಚಕ್ರ ಬೈಕ್ ರ‍್ಯಾಲಿ ಜಾಗೃತಿ ಜಾಥಕ್ಕೆ ಚಾಲನೆ

■ ಕಾಯಕಯೋಗಿ ಸುದ್ದಿ



ಹಾಸನ: 18 ವರ್ಷ ಮೇಲ್ಪಟ್ಟ ಎಲ್ಲರೂ ಕಡ್ಡಾಯ ಮತದಾನ ಮಾಡುವ ಮೂಲಕ ಪ್ರಜಾಪ್ರಭುತ್ವವನ್ನು ಬಲಪಡಿಸಬೇಕು. ಯಾವುದೇ ಆಸೆ ಆಮಿಷಗಳಿಗೆ ಒಳಗಾಗದೇ ಪ್ರತಿಯೊಬ್ಬರೂ ಕಡ್ಡಾಯವಾಗಿ ಮತದಾನ ಮಾಡಬೇಕು ಎಂದು ಜಿಲ್ಲಾಧಿಕಾರಿ ಸಿ. ಸತ್ಯಭಾಮ ತಿಳಿಸಿದ್ದಾರೆ.

ಜಿಲ್ಲಾಧಿಕಾರಿ ಕಚೇರಿ ಆವರಣದಲ್ಲಿಂದು ಜಿಲ್ಲಾ ಸ್ವೀಪ್ ಸಮಿತಿ ಹಾಗೂ ನಗರಸಭೆ, ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳ ಕಾರ್ಯಾಲಯದ ಸಹಯೋಗದಲ್ಲಿ ವಿಶೇಷಚೇತನರ ಯಂತ್ರಚಾಲಿತ ತ್ರಿಚಕ್ರ ವಾಹನಗಳೊಂದಿಗೆ ಮತದಾನ ಜಾಗೃತಿ ಜಾಥಾ ಕಾರ್ಯಕ್ರಮವನ್ನು ಚಾಲನೆ ನೀಡಿ ಮಾತನಾಡಿ ಅವರು ಎಲ್ಲರೂ ಮತದಾನ ಮಾಡಬೇಕು. ವಿಕಲಚೇತನರಿಗೆ ಮನೆಯ ಲ್ಲಿಯೇ ಮತದಾನ ಮಾಡುವ ವ್ಯವಸ್ಥೆ ಇದೆ ಎಂದು ತಿಳಿಸಿದರು.

ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕಾಧಿಕಾರಿ ಬಿ.ಆರ್ ಪೂರ್ಣಿಮಾ ಅವರು ಮಾತನಾಡಿ ಮತದಾರರಲ್ಲಿ ಹೆಚ್ಚು ಉತ್ಸಾಹ ನೀಡಿ ಮತದಾನ ಮಾಡಬೇಕು.ಎಲ್ಲರೂ ವಿಶೇಷ ಚೇತನರು ಮತಗಟ್ಟೆಗೆ ಬಂದು ಮತದಾನ ಮಾಡುವಂತೆ ಪ್ರೇರಣೆ ನೀಡುವಲ್ಲಿ ಸಹಕಾರಿಯಾಗಿದೆ. ಶೇಕಡಾ 100ರಷ್ಟು ಮತದಾನ ಮಾಡಬೇಕು. ತಮ್ಮ ಹಕ್ಕನ್ನು ಚಲಾಯಿಸಬೇಕು. ಎಲ್ಲರೂ ಕಡ್ಡಾಯವಾಗಿ ಮತದಾನ ಮಾಡಬೇಕು ಎಂದು ತಿಳಿಸಿದರು.

ವಿಶೇಷಚೇತರ ಸಂಗೀತಾ ಶಿಕ್ಷಕರಾದ ಲೋಕೇಶ್ ಅವರು ಮಾತನಾಡಿ ಪ್ರಜೆಗಳಿಂದ ಪ್ರಜೆಗಳಿಗಾಗಿ ಪ್ರಜೆಗಳಿಗೋಸ್ಕರ ಮತದಾನ ಮಾಡಬೇಕು ಯಾವುದೇ ಆಸೆ ಆಮಿಷಗಳಿಗೆ ಒಳಗಾಗದೇ ಮತದಾನ ಮಾಡಿ ಹಿರಿಯ ನಾಗರೀಕರು ವಿಶೇಷ ಚೇತನರು ತಮ್ಮ ಹಕ್ಕನ್ನು ಬಲಪಡಿಸುವಂತೆ ಮತದಾನ ಮಾಡಿ ಅಂಗವಿಕಲರಿಗೆ ಮತದಾನ ಮಾಡುವ ವೇಳೆ ಸಮಸ್ಯೆಯಾಗದ ರೀತಿಯಲ್ಲಿ ಮತಗಟ್ಟೆಗಳ ಬಳಿ ರ‍್ಯಾಂಪ್ ವ್ಯವಸ್ಥೆ ಸೇರಿದಂತೆ ಅಗತ್ಯ ಸೌಲಭ್ಯಗಳನ್ನು ಕಲ್ಪಿಸಲಾಗಿದೆ ಎಂದು ತಿಳಿಸಿದರು

ಕಾರ್ಯಕ್ರಮದಲ್ಲಿ ಅಪರ ಜಿಲ್ಲಾಧಿಕಾರಿ ಕೆ.ಟಿ ಶಾಂತಲಾ, ಅಂಗವಿಕಲರ ಕಲ್ಯಾಣಾಧಿಕಾರಿ ಅನುಪಮಾ, ಜಿಲ್ಲಾ ಪಂಚಾಯಿತಿ ಮುಖ್ಯ ಯೋಜನಾಧಿಕಾರಿ ಪರಪ್ಪಸ್ವಾಮಿ, ನಗರಸಭೆ ಆಯುಕ್ತರಾದ ಯೋಗಾನಂದ, ವಿಶೇಷ ಚೇತನರು, ಮತ್ತಿತರರು ಇದ್ದರು.

ಮೀತವಾಗಿ ಕುಡಿಯುವ ನೀರು ಬಳಸಲು ಕರೆ

ಹಾಸನ : ಸಕಲೇಶಪುರ ಪುರಸಭೆಯ ಕುಡಿಯುವ ನೀರಿನ ಮೂಲವಾದ ಹೇಮಾವತಿ ನದಿಯಲ್ಲಿ ನೀರಿನ ಪ್ರಮಾಣವು ಕಡಿಮೆಯಾಗಿದ್ದು ಇದರಿಂದಾಗಿ ಸಕಲೇಶಪುರ ಪುರಸಭಾ ವ್ಯಾಪ್ತಿಯೆಳಗೆ ಕುಡಿಯುವ ನೀರಿನ ಸಂಪರ್ಕ ಹೊಂದಿರುವವರು ನೀರನ್ನು ಮಿತವಾಗಿ ಬಳಸಬೇಕಾಗಿ ಹಾಗೂ ಕುಡಿಯುವ ನೀರನ್ನು ವಾಹನ ತೊಳೆಯುವುದು ಹಾಗೂ ಇನ್ನಿತರೆ ದುಂದು ವೆಚ್ಚ ಮಾಡದೇ ಪುರಸಭೆಯೊಂದಿಗೆ ಸಹಕರಿಸಲು ಪುರಸಭೆ ಸಕಲೇಶಪುರ ಮುಖ್ಯಾಧಿಕಾರಿ ತಿಳಿಸಿದ್ದಾರೆ.

ಮುಟ್ಟಿನ ನೈರ್ಮಲ್ಯ ಕುರಿತು ಜಾಗೃತಿ ಸಂದೇಶ

■ ಕಾಯಕಯೋಗಿ ಸುದ್ದಿ



ಕನಕಪುರ :ನಗರದ ರೂರಲ್ ಪದವಿ ಕಾಲೇಜಿನ ಎಸ್ ಕರಿಯಪ್ಪ ಸಭಾಂಗಣದಲ್ಲಿ ರೋಟರಿ ಕ್ಲಬ್ ಆಫ್ ವಿದ್ಯಾ ಸಾಗರ ಸಂಸ್ಥೆಯಿಂದ ವಿಶೇಷ ಜಾಗೃತಿ ಕಾರ್ಯಕ್ರಮ ಆಯೋಜಿಸಲಾಗಿತ್ತು.


ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಡಾ. ಬೃಂದಾ ಹೆಣ್ಣಿನ ಮುಟ್ಟಿನ ಸಮಯದ ನೈರ್ಮಲ್ಯ ಹಾಗೂ ಮುನ್ನೆಚ್ಚರಿಕೆಯ ಬಗ್ಗೆ ತಿಳಿಸುತ್ತಾ ಮುಟ್ಟಿನ ಸಮಯದಲ್ಲಿ ಸ್ವಚ್ಛತೆಯ ಅರಿವಿನ ಮಹತ್ವ ತಿಳಿಸಿದರು.ಯಾವುದೇ ಭಯ ಗೊಂದಲಕ್ಕೆ ಆಸ್ಪದ ಕೊಡದೆ ನೈರ್ಮಲ್ಯದ ಕಡೆ ಗಮನ ಕೊಡುವುದರ ಜೊತೆಗೆ ಮಂಜಾಗೃತಾ ಅಂಶ ಗಳನ್ನು ಪಾಲಿಸುವುದು ಸೂಕ್ತವಾಗಿದ್ದು, ಆಹಾರ, ಸಮತೋಲನ, ವ್ಯಾಯಮ , ಯೋಗಾಸನ ಮುಟ್ಟಿನ ಸಮಯದಲ್ಲಿ ನಿಮ್ಮನ್ನು ಹೆಚ್ಚು ಸದೃಢ ಮಾಡಲು ಸಹಕಾರಿಯಾಗಲಿದೆ ಎಂದರು.

ದಯಾನಂದ ಸಾಗರ್ ಆಸ್ಪತ್ರೆಯ ವೈದ್ಯೆ ವಿಜ್ಞಾನದ ಸುಷ್ಮಾ ಮಾತನಾಡಿ ಮುಟ್ಟಿನ ಸಮಯದಲ್ಲಿ ಅತಿಯಾದ ನಿರ್ಲಕ್ಷವನ್ನು ತೋರಿ ಹಲವಾರು ಸಮಸ್ಯೆಗಳಿಗೆ ದಾರಿ ಮಾಡಿಕೊಡುವ ಹೆಣ್ಣು ಮಕ್ಕಳ ಕುರಿತು ಜಾಗೃತಿಯನ್ನು ಮೂಡಿಸಿ ಹೆಣ್ಣು ಮಕ್ಕಳಿಗೆ ಮುಟ್ಟಿನ ಸಮಯದ ಕೆಲವು ಗೊಂದಲಗಳು ಹಾಗೂ ಸಮಸ್ಯೆಗಳಿಗೆ ವೈದ್ಯಕೀಯ ಪರಿಹಾರದ ಬಗ್ಗೆ ವಿವರಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ರೂರಲ್ ಕಾಲೇಜಿನ ಪ್ರಾಂಶುಪಾಲರಾದ ಎಂ ಟಿ ಬಾಲಕೃಷ್ಣ ಮಾತನಾಡಿ ಗ್ರಾಮೀಣ ಪ್ರದೇಶದ ಹೆಣ್ಣು ಮಕ್ಕಳಿಗೆ ಈ ರೀತಿಯ ಜಾಗೃತಿ ಉಪನ್ಯಾಸದ ಅವಶ್ಯಕತೆ ಅಗಾದ ಪ್ರಮಾಣ ದಲ್ಲಿದ್ದು ಈ ಉಪನ್ಯಾಸ ಮುಂದಿನ ದಿನಗಳಲ್ಲಿ ಅವರು ಸ್ವಚ್ಛತೆ ಮತ್ತು ದೇಹ ಸದೃಢತೆ ಬಗ್ಗೆ ಗಮನ ಹರಿಸಲು ಹೆಚ್ಚಿ ಸಹಾಯಕಾರಿಯಾಗಲಿದೆ ಎಂದರು. ಕಾರ್ಯಕ್ರಮದಲ್ಲಿ ಉಪಪ್ರಾಂಶುಪಾಲ ಪ್ರೊ ದೇವರಾಜು, ಪ್ರೊ ವಾಣಿ, ಪ್ರೊ ಜ್ಯೋತಿ, ಪ್ರೊ ಸುಷ್ಮಾ ಪ್ರೊ ನಂದಿನಿ ಸೇರಿದಂತೆ ರೂರಲ್ ಪದವಿ ಕಾಲೇಜಿನ ವಿದ್ಯಾರ್ಥಿನಿ ಯರು ಉಪಸ್ಥಿತರಿದ್ದರು.

ಎಚ್.ಡಿ.ಕುಮಾರಸ್ವಾಮಿ ಹೆಸರು ಬದಲಿಸಿಕೊಳ್ಳಲಿ: ರವಿ ಟೀಕೆ

■ ಕಾಯಕಯೋಗಿ ಸುದ್ದಿ



ಕನಕಪುರ– ಮಾಜಿ ಮುಖ್ಯಮಂತ್ರಿ ಹೆಚ್.ಡಿ. ಕುಮಾರಸ್ವಾಮಿ, ರಾಮನಗರ ಮತ್ತು ಚನ್ನಪಟ್ಟಣ ನನ್ನ ಎರಡು ಕಣ್ಣುಗಳು ಇದ್ದಂತೆ ಎನ್ನುತ್ತಿದ್ದವರು ಎರಡು ಕಣ್ಣುಗಳನ್ನು ಬಿಟ್ಟು ಮಂಡ್ಯಕ್ಕೆ ಹೋಗಿದ್ದಾರೆ ಇನ್ನು ಮುಂದೆ ಇವರು ಹೆಚ್.ಡಿ. ಕುಮಾರಸ್ವಾಮಿ ಹೆಸರನ್ನು ಬದಲಾಯಿಸಿ ಆರ್.ಡಿ.ಕೆ. ಎಂ.ಡಿ.ಕೆ ಆಗಿ ಹೆಸರು ಬದಲಿಸಿಕೊಳ್ಳುವಂತೆ ಜಿಲ್ಲಾ ಕಾಂಗ್ರೆಸ್ ವಕ್ತಾರ ಮರಸಪ್ಪ ರವಿ ಟೀಕಿಸಿದ್ದಾರೆ.

ಶನಿವಾರ ಸುದ್ದಿಗಾರರೊಂದಿಗೆ ಮಾತನಾಡಿದ್ದ ಅವರು ರಾಮನಗರ ನನ್ನ ಕರ್ಮಭೂಮಿ ಎನ್ನುತ್ತಾ ತಾಲ್ಲೂಕಿನ ಜನತೆಗೆ ಮಂಕುಬೂದಿ ಎರಚಿ ಕರ್ಮಭೂಮಿಯನ್ನು ಕೈಬಿಟ್ಟು ಮಂಡ್ಯಕ್ಕೆ ಫಲಾಯನ ಮಾಡಿದ್ದು ಯಾಕಾಗಿ ಎಂಬುದು ಬಹಿರಂಗ ಪಡಿಸಬೇಕು. ತಮ್ಮ ಅಧಿಕಾರಿ ಉಳಿವಿಗಾಗಿ ತಮಗೆ ಅಧಿಕಾರನೀಡಿದ ಕ್ಷೇತ್ರಗಳನ್ನು ತೊರೆದು ಅಧಿಕಾರ ಹಾಗೂ ಸ್ವಾರ್ಥಕ್ಕಾಗಿ ಜನರನ್ನು ವಂಚಿಸುವುದನ್ನು ಜನರು ಮನಗಂಡು ಸಾರ್ವತ್ರಿಕ ಲೋಕಸಭಾ ಚುನಾವಣೆಯಲ್ಲಿ ಜನತೆ ತಕ್ಕ ಪಾಠ ಕಲಿಸುವುದು ಖಚಿತ ಎಂದು ತಿಳಿಸಿರುವ ಅವರು ರಾಜ್ಯಕ್ಕೆ ಯಾವುದೇ ಅನ್ಯಾಯವಾಗಲಿ ಲೋಕಸಭೆಯಲ್ಲಿ ರಾಜ್ಯದ ಪರ ಧ್ವನಿ ಎತ್ತುವುದರ ಮೂಲಕ ಸಂಸದ ಡಿ.ಕೆ. ಸುರೇಶ್ ರಾಜ್ಯದ ಗೌರವವನ್ನು ಎತ್ತಿ ಹಿಡಿದ್ದಿದ್ದಾರೆ. ಮೂರು ಬಾರಿ ಸಂಸದರಾಗಿ ಕ್ಷೇತ್ರದ ಸುತ್ತಾಗಲಿ ಹಗಲಿರುಳೆನ್ನದೆ ಬೆಂಗಳೂರು ಗ್ರಾಮಾಂತರ ಲೋಕಸಭಾ ವ್ಯಾಪ್ತಿಯ ಪ್ರತಿಯೊಂದು ತಾಲ್ಲೂಕುಗಳ ಅಗತ್ಯತೆಗಳನ್ನು ಮನಗಂಡು ಅಭಿವೃದ್ಧಿಗಾಗಿ ಶ್ರಮಿಸಿದ್ದಾರೆ. ಅಲ್ಲದೆ ನರೇಗಾ ಯೋಜನೆಯ ಕಾಮಗಾರಿ ಅನುಷ್ಠಾನಗೊಳಿಸುವಲ್ಲಿ ರಾಷ್ಟ್ರಮಟ್ಟದಲ್ಲಿ ಮೊದಲನೇ ಸ್ಥಾನವನ್ನು ಕನಕಪುರಕ್ಕೆ ತಂದುಕೊಟ್ಟಂತಹ ಧಿಮಂತ ನಾಯಕ ಡಿ.ಕೆ ಸುರೇಶ್ ಸಾದನೆಯನ್ನು ಬಿ.ಜೆ.ಪಿ ಸಂಸದರಾದಿಯಾಗಿ ಜನ ಮೆಚ್ಚುಗೆ ಗಳಿಸಿದ್ದು, ಈ ಚುನಾವಣೆಯಲ್ಲಿ ಜನ ಇವರನ್ನು ಮತ್ತೆ ಬಹುಮತದಿಂದ ಆರಿಸಿ ಕಳುಹಿಸುವರೆಂಬ ವಿಶ್ವಾಸ ಇರುವುದಾಗಿ ತಿಳಿಸಿದ್ದಾರೆ.

ಸ್ವೀಪ್ ಸಮಿತಿಯಿಂದ ಮತದಾನ ಜಾಗೃತಿ ಜಾಥಾ

■ ಕಾಯಕಯೋಗಿ ಸುದ್ದಿ



ಪಿರಿಯಾಪಟ್ಟಣ : ಪಟ್ಟಣದ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಮತ್ತು ಪಟ್ಟಣ ತಾಲ್ಲೂಕು ಪಂಚಾಯಿತಿಯ ಸ್ವೀಪ್ ಸಮಿತಿಯ ಸಹಯೋಗದಲ್ಲಿ ಮತದಾನ ಜಾಗೃತಿ ಹಾಗೂ ಜಾಥಾ ಕಾರ್ಯಕ್ರಮವನ್ನು ಪಟ್ಟಣದ ದೇವರಾಜ ಅರಸು ಭವನದಲ್ಲಿ ಆಯೋಜಿಸಲಾಗಿತ್ತು.

ಈ ಸಂದರ್ಭದಲ್ಲಿ ಯುವ ಮತದಾರರು ಕಡ್ಡಾಯವಾಗಿ ಮತದಾನ ಮಾಡಬೇಕೆಂದು ಸಹಾಯಕ ಚುನಾವಣಾಧಿಕಾರಿ ಶ್ರೀ ಜಿ.ಡಿ ಶೇಖಿರ್ ತಿಳಿಸಿದರು.

ತಾಲ್ಲೂಕಿನ ಸ್ವೀಪ್ ಸಮಿತಿಯ ಅಧ್ಯಕ್ಷರು ಹಾಗೂ ತಾಲ್ಲೂಕು ಪಂಚಾಯಿತಿಯ ಇಒ ಡಿ ಬಿ ಸುನೀಲ್ ಕುಮಾರ್ ಅವರು ಪ್ರತಿ ಯೊಬ್ಬರೂ ಮತದಾನ ಪಟ್ಟಿಯಲ್ಲಿ ಕಡ್ಡಾಯ ವಾಗಿ ನೋಂದಾಯಿಸಿಕೊಂಡು ಮತದಾನ ಮಾಡಬೇಕೆಂದು ಸಲಹೆ ನೀಡಿದರು.

ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರಾಂಶುಪಾಲರಾದ ಶ್ರೀಮತಿ ಅಂಬಿಕ ಮತದಾನದ ಮಹತ್ವವನ್ನು ಯುವಜನತೆ ಅರಿತು ಇತರರಿಗೂ ಜಾಗೃತಿ ಮೂಡಿಸ ಬೇಕೆಂದು ಹಾಗೂ ಮತದಾನ ನಮ್ಮ ದೇಶದ ಹೆಮ್ಮೆ ಎಲ್ಲರೂ ಪಾಲ್ಗೊಳ್ಳಬೇಕೆಂದು ಕರೆ ನೀಡಿದರು.

ತಾಲ್ಲೂಕಿನ ತಹಶೀಲ್ದಾರ್ ಶ್ರೀ ಸುರೇಂದ್ರ ಕುಮಾರ್ ಅವರು ಯಾವುದೇ ಆಸೆ ಆಮಿಷಗಳಿಗೆ ಒಳಗಾದೇ, ಮತದಾನ ಮಾಡಲು ಕುಟುಂಬದವರಿಗೆ ಜಾಗೃತಿ ಮೂಡಿಸಬೇಕೆಂದು ಮನವಿ ಮಾಡಿದರು.

ಕಾರ್ಯಕ್ರಮದಲ್ಲಿ ಭಾಗವಹಿಸಿದ್ದ ಎಲ್ಲರೂ 'ಮತದಾನದ ಪ್ರತಿಜ್ಞಾವಿಧಿ'ಯನ್ನು ಸ್ವೀಕರಿಸಿದರು. ನಂತರ ಕಾಲೇಜಿನ ವಿದ್ಯಾರ್ಥಿ ಗಳು ಬಸವೇಶ್ವರ ವೃತ್ತದಲ್ಲಿ ಮಾನವ ಸರಪಳಿಯನ್ನು ನಿರ್ಮಿಸಿ, ಮತದಾನದ ಘೋಷಣೆಗಳ ಮೂಲಕ ಜನತೆಗೆ ಜಾಗೃತಿ ಮೂಡಿಸಿದರು.

ಈ ಕಾರ್ಯಕ್ರಮವನ್ನು ಕಾಲೇಜಿನ ಅಧ್ಯಾಪಕರಾದ ನಂಜುಂಡಸ್ವಾಮಿ ಅವರು ನಿರೂಪಿಸಿದರು. ಈ ಸಂದರ್ಭದಲ್ಲಿ ಪುರ ಸಭೆಯ ಮುಖ್ಯಾಧಿಕಾರಿ ಕೆ. ಯು ಮುತ್ತಪ್ಪ, ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಗ್ರಂಥಪಾಲಕರಾದ ರಮೇಶ್, ವಾಣಿಜ್ಯ ಶಾಸ್ತ್ರ ವಿಭಾಗದ ಸಾಗರ್.ಡಾ ಶೈಲಶ್ರೀ, ಅನಿತಾ, ಮಂಜುನಾಥ್, ಯೋಗೇಶ್ , ನಾಗೇಶ್, ವಂಜು , ಶಿವಣ್ಣ, ಜಯಸ್ವಾಮಿ, ಚಿಂದ್ರೇಗೌಡ, ಸದ್ಯಾಶ್, ಸಂಧ್ಯಾ ನಝೀಜುಲ್ಲಾ ಶರೀಫ್, ರವಿ, ಚೈತ್ರ ಹಾಗೂ ತಾಲ್ಲೂಕು ಪಂಚಾಯಿತಿಯ ಸಿಬ್ಬಂದಿ ವರ್ಗದವರು ಮುಂತಾದವರು ಹಾಜರಿದ್ದರು.

ಉಚಿತ ಟೈಲರಿಂಗ್ ತರಬೇತಿಗೆ ಆಸಕ್ತ ಮಹಿಳೆಯರಿಂದ ಅರ್ಜಿ ಆಹ್ವಾನ

■ ಕಾಯಕಯೋಗಿ ಸುದ್ದಿ

ರಾಮನಗರ: ಶ್ರೀ ಧರ್ಮಸ್ಥಳ ಮಂಜುನಾಥೇಶ್ವರ ಶಿಕ್ಷಣ ಟ್ರಸ್ಟ್ ಮತ್ತು ಕೆನರಾ ಬ್ಯಾಂಕ್‌ನ ಸಹಯೋಗದಲ್ಲಿ ನಡೆಸುತ್ತಿರುವ ರುಡ್‌ಸೆಟ್ ಸಂಸ್ಥೆಯ ವತಿಯಿಂದ ಹುಣ್ಣಿಕೊಂಡಿರುವ ಫ್ಯಾಶನ್ ಡಿಸೈನಿಂಗ್(ಟೈಲರಿಂಗ್) ಕುರಿತ 30 ದಿನಗಳ ಉಚಿತ ತರಬೇತಿಯು ಏಪ್ರಿಲ್ 12 ರಿಂದ ಆರಂಭವಾಗಲಿದ್ದು, ಏಪ್ರಿಲ್ 12 ರಂದು ನಡೆಯಲಿರುವ ನೇರ ಸಂದರ್ಶನದಲ್ಲಿ ಗ್ರಾಮೀಣ ಆಸಕ್ತ ನಿರುದ್ಯೋಗಿ ಮಹಿಳೆಯರು ಭಾಗವಹಿಸಬಹುದಾಗಿದೆ.

ಆಸಕ್ತರು 18 ರಿಂದ 45 ವರ್ಷ ವಯೋಮಾನದವರಾಗಿದ್ದು, ಕನ್ನಡ ಭಾಷೆ ಓದಲು ಮತ್ತು ಬರೆಯಲು ಬಲ್ಲವರಾಗಿರಬೇಕು. ಅಭ್ಯರ್ಥಿಗಳು ಆಧಾರ್ ಕಾರ್ಡ್ನ್ನು ಹೊಂದಿರಬೇಕು ಹಾಗೂ ಬಿಪಿಎಲ್ ಕಾರ್ಡ್ ಅನ್ನು ಹೊಂದಿರುವ ಗ್ರಾಮೀಣ ಪ್ರದೇಶದ ಗ್ರಾಮೀಣ ಅಭ್ಯರ್ಥಿಗಳಿಗೆ ಆದ್ಯತೆ ನೀಡಲಾಗುವುದು.

ತರಬೇತಿಯ ಕಡ್ಡಾಯವಾಗಿ ವಸತಿಯುತವಾಗಿದ್ದು, ತರಬೇತಿಯ ಅವಧಿಯಲ್ಲಿ ಉಚಿತವಾಗಿ ಊಟ ಮತ್ತು ವಸತಿ ನೀಡಲಾಗುವುದು ಹಾಗೂ ತರಬೇತಿ ಪೂರ್ಣಗೊಂಡ ನಂತರ ಕೇಂದ್ರ ಸರ್ಕಾರದ ಗ್ರಾಮೀಣಾಭಿವೃದ್ಧಿ ಸಚಿವಾಲಯದಿಂದ ಪ್ರಮಾಣಪತ್ರವನ್ನು ವಿತರಿಸಲಾಗುವುದು.

ಆಸಕ್ತರು ಅರ್ಜಿ ಸಲ್ಲಿಸಲು ಹಾಗೂ ಹೆಚ್ಚಿನ ಮಾಹಿತಿಗಾಗಿ ರುಡ್‌ಸೆಟ್ ಸಂಸ್ಥೆ, ಅರಿಶಿನಕುಂಟಿ, ನೆಲಮಂಗಲ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ, ಮೊಬೈಲ್ ಸಂಖ್ಯೆ: 9380162042, 9740982585, 9113880324 ಅನ್ನು ಸಂಪರ್ಕಿಸಬಹುದಾಗಿದೆ ಎಂದು ರುಡ್‌ಸೆಟ್ ಸಂಸ್ಥೆಯ ಬೆಂಗಳೂರು ಶಾಖೆಯ ನಿರ್ದೇಶಕರಾದ ರವಿಕುಮಾರ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಲೋಕಸಭಾ ಚುನಾವಣೆಯ ಪ್ರಚಾರಕ್ಕೆ 18 ವರ್ಷದೊಳಗಿನ ಮಕ್ಕಳ ಬಳಕೆಗೆ ನಿಷೇಧ

■ ಕಾಯಕಯೋಗಿ ಸುದ್ದಿ

ಹಾಸನ: ಭಾರತ ಚುನಾವಣಾ ಆಯೋಗವು ಲೋಕಸಭಾ ಚುನಾವಣೆ–2024 ರ ಚುನಾವಣಾ ಪ್ರಚಾರ ಕಾರ್ಯಕ್ಕೆ 18 ವರ್ಷಕ್ಕಿಂತ ಕೆಳಗಿರುವ ಮಕ್ಕಳನ್ನು ಬಳಸಿಕೊಳ್ಳುವುದನ್ನು ನಿಷೇದಿಸಿರುತ್ತದೆ. ಭಾರತ ಸರ್ಕಾರವು ಬಾಲಕಾರ್ಮಿಕ ಮತ್ತು ಕಿಶೋರಾವಸ್ಥೆ ಕಾರ್ಮಿಕರ ದುಡಿಮೆಯನ್ನು ನಿಯಂತ್ರಿಸಲು ಹಾಗೂ ನಿಷೇದಿಸಲು ಬಾಲ ಕಾರ್ಮಿಕ ಮತ್ತು ಕಿಶೋರ ಕಾರ್ಮಿಕ (ನಿಷೇದ ಮತ್ತು ನಿಯಂತ್ರಣ) ಕಾಯ್ದೆ 1986 ನ್ನು ಜಾರಿಗೆ ತಂದಿರುತ್ತದೆ.

ಕಾಯ್ದೆಯ ಅನ್ವಯ 14 ವರ್ಷಕ್ಕಿಂತ ಕಡಿಮೆ ವಯಸ್ಸಿನ ಮಕ್ಕಳನ್ನು ಯಾವುದೇ ಕೆಲಸಕ್ಕೆ ನಿಯೋಜಿಸಿಕೊಳ್ಳುವುದು ಸಂಪೂರ್ಣವಾಗಿ ನಿಷೇದಿಸಿದೆ ಹಾಗೂ 14–18 ರ ವಯಸ್ಸಿನ ಕಿಶೋರ ಕಾರ್ಮಿಕ ಮಕ್ಕಳನ್ನು ಅಪಾಯಕಾರಿಯಾದ ಕ್ಷೇತ್ರದಲ್ಲಿ ಕೆಲಸ ನಿರ್ವಹಿಸುವುದು ಸಂಪೂರ್ಣವಾಗಿ ನಿಷೇದಿಸಿ

website: www.kayakayogi.com

ಕಾಯಕಯೋಗಿ

KAYAKA YOGI - Regional Daily

ಪುಟ-6 | 07-04-2024

ಬೆಂಗಳೂರು

ಮತ್ತೊಮ್ಮೆ ಮೂರನೇ ಬಾರಿಗೆ ನರೇಂದ್ರ ಮೋದಿಯವರು ಪ್ರಧಾನಿ:ಅರುಣ್ ಸಿಂಗ್



ದೇವನಹಳ್ಳಿರಾಜ್ಯ ಮತ್ತು ದೇಶದ ಭಾರತೀಯ ಜನತಾ ಪಾರ್ಟಿಯ ಕಾರ್ಯಕರ್ತರಿಗೆ ಸಂಸ್ಥಾಪನ ದಿನಾಚರಣೆಯ ಅಂಗವಾಗಿ ಶುಭಾಶಯಗಳನ್ನು ಕೋರುತ್ತೇನೆ. ಭಾರತೀಯ ಜನತಾ ಪಾರ್ಟಿಯ ಕಾರ್ಯಕರ್ತರು ಬಹಳ ಶ್ರಮವಹಿಸಿ ಪಾರ್ಟಿಯ ವಿಚಾರಧಾರೆಗಳನ್ನು ಮತ್ತು ಭಾರತ ಪ್ರಣ್ಯತೆಯನ್ನು ಉಳಿಸಲು ಸಹಕಾರದಿಂದ ನಿರಂತರವಾಗಿ ಕೆಲಸ ನಿರ್ವಹಿಸುತ್ತಿರುತ್ತಾರೆ. ಈ ಬಾರಿ ಮತ್ತೊಮ್ಮೆ ಮೂರನೇ ಬಾರಿಗೆ ನರೇಂದ್ರ ಮೋದಿಯವರು ಪ್ರಧಾನಿ ಆಗಬೇಕೆಂಬ ಉದ್ದೇಶದಿಂದ ಪ್ರತಿಯೊಬ್ಬ ಕಾರ್ಯಕರ್ತರು ಭಾರತೀಯ ಜನತಾ ಪಾರ್ಟಿಯನ್ನು ದೆಂಬಲಿಸಲಿದ್ದಾರೆ ಎಂದು ರಾಜ್ಯ ಬಿಜೆಪಿ ಉಸ್ತುವಾರಿ ಅರುಣ್ ಸಿಂಗ್ ಹೇಳಿದರು.

ದೇವನಹಳ್ಳಿ ಪಟ್ಟಣದ ಗಾರೆ ರಮಿಕುಮಾರ್ ಲೇಔಟಿನಲ್ಲಿರುವ ರಾಜ್ಯ ಎಸ್ಸಿ ಮೋರ್ಚಾ ಖಜಾಂಚಿ ಎಕೆಪಿ ನಾಗೇಶ್ ಅವರ ನಿವಾಸದಲ್ಲಿ ಬಿಜೆಪಿ ಸಂಸ್ಥಾಪನಾ ದಿನಾಚರಣೆ ಕಾರ್ಯಕ್ರಮ ನಡೆಯಿತು.

ರಾಷ್ಟ್ರೀಯ ಬಿಜೆಪಿ ಪ್ರಧಾನ ಕಾರ್ಯದರ್ಶಿ ಅರುಣ್ ಸಿಂಗ್ ಹಾಗೂ ಚಿಕ್ಕಬಳ್ಳಾಪುರ ಲೋಕಸಭಾ ಕ್ಷೇತ್ರ ಎನ್.ಡಿ.ಎ.ಅಭ್ಯರ್ಥಿ ಕೆ.ಸುಧಾಕರ್ ಭೇಟಿ ನೀಡುವುದರ ಮೂಲಕ ಮುಖಂಡರು ಹಾಗೂ ಕಾರ್ಯಕರ್ತರೊಂದಿಗೆ ಬಿಜೆಪಿ ಬಾವುಟವನ್ನು ಹಾರಿಸಿ, ಸಿಹಿ ಹಂಚಿ ಸಂಭ್ರಮಿಸಲಾಯಿತು.

ಚಿಕ್ಕಬಳ್ಳಾಪುರ ಲೋಕಸಭಾ ಕ್ಷೇತ್ರ ಎನ್.ಡಿ.ಎ ಅಭ್ಯರ್ಥಿ ಕೆ.ಸುಧಾಕರ್ ಮಾತನಾಡಿ ಸಂಸ್ಥಾಪನ ದಿನವನ್ನು ಆಚರಿಸುತ್ತಿದ್ದು 45 ವರ್ಷಗಳು ಕಳೆದಿದೆ. ಎರಡು ಸ್ಥಾನಗಳಿಂದ ಪ್ರಾರಂಭವಾದ ಪಕ್ಷ ಭಾಜಪವಾಗಿದೆ. ಕಾರ್ಯಕರ್ತರ ಶ್ರಮ ಸಂಘಟನೆ ಮತ್ತು ಶಕ್ತಿ ಈ ಮೂರರಿಂದ ಇವತ್ತು 400 ಸ್ಥಾನಗಳವರೆಗೆ ಬರೀವಿ ಅನ್ನುವ ವಿಶ್ವಾಸ. ಇದು ಪಕ್ಷದ ಆಶಯದಿಂದ ಆಗಿದೆ.

ರಾಷ್ಟ್ರೀಯತೆ, ದೇಶಾಭಿಮಾನ, ಸಮಗ್ರತೆ, ದೇಶವನ್ನು ಇಡೀ ವಿಶ್ವದಲ್ಲಿ ಅತ್ಯಂತ ಎತ್ತರಕ್ಕೆ ತೆಗೆದುಕೊಂಡು ಹೋಗುವ ತತ್ವ ಸಿದ್ಧಾಂತದಿಂದ ಒಂದು ಅಡಿಪಾಯದಲ್ಲಿ ಬೆಳೆದಂತಹ ಒಂದು ರಾಜಕೀಯ ಪಕ್ಷವಾಗಿದೆ ಎಂದರು.

ಇದೇ ಸಂದರ್ಭದಲ್ಲಿ ರಾಜ್ಯ ಎಸ್ಸಿ ಮೋರ್ಚ ಖಜಾಂಚಿ ಎಕೆಪಿ ನಾಗೇಶ್, ಜಿಲ್ಲಾಧ್ಯಕ್ಷ ರಾಮಕೃಷ್ಣಪ್ಪ, ಪ್ರಧಾನ ಕಾರ್ಯದರ್ಶಿ ರವಿಕುಮಾರ್ ಎಚ್.ಎಂ, ಅಸಂಘಟಿತ ಕಾರ್ಮಿಕ ಪ್ರಕೋಷ್ಠದ ಸಂಚಾಲಕ ಅಂಬರೀಶ್ ಗೌಡ, ಟೌನ್ ಅಧ್ಯಕ್ಷ ಸಂದೀಪ್, ನೀಲೇರಿ ಮಂಜುನಾಥ್, ಚೇತನ್ ಗೌಡ, ಮಹಿಳಾ ಮೋರ್ಚಾ ಅಧ್ಯಕ್ಷೆ ವಿಮಲಾ ಶಿವಕುಮಾರ್, ಜಿಲ್ಲಾ ಪ್ರಧಾನ ಕಾರ್ಯದರ್ಶಿ ನಾಗವೇಣಿ, ಇನ್ನಿತರರು ಇದ್ದರು.

ಮತದಾನ ಜಾಗೃತಿ ಪರಿಣಾಮಕಾರಿಯಾಗಿಸಲು ಏ.21ರಂದು ಎಲ್ಲಾ ಮತಗಟ್ಟೆಗಳಲ್ಲಿ ವಾಕಥಾನ್

■ ಕಾಯಕಯೋಗಿ ಸುದ್ದಿ

ಚಾಮರಾಜನಗರ: ಮತದಾನ ಜಾಗೃತಿ ಕಾರ್ಯಕ್ರಮಗಳನ್ನು ಮತ್ತಷ್ಟು ಪರಿಣಾಮಕಾರಿಯಾಗಿ ಹಮ್ಮಿಕೊಳ್ಳಲು ಇದೇ ತಿಂಗಳ 21ರಂದು ಜಿಲ್ಲೆಯ ಎಲ್ಲಾ ಮತಗಟ್ಟೆಗಳಲ್ಲಿ ವಾಕಥಾನ್ ಏರ್ಪಡಿಸುವಂತೆ ಜಿಲ್ಲಾ ಸ್ವೀಪ್ ಸಮಿತಿ ಅಧ್ಯಕ್ಷರು ಹಾಗೂ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಆನಂದ್ ಪ್ರಕಾಶ್ ಮೀನಾ ಅವರು ಮತಗಟ್ಟೆ ಅಧಿಕಾರಿಗಳಿಗೆ ಸೂಚನೆ ನೀಡಿದರು.

ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಲೋಕಸಭಾ ಸಾರ್ವತ್ರಿಕ ಚುನಾವಣೆಯ ಸಂಬಂಧ ಸ್ವೀಪ್ ಕಾರ್ಯಚಟುವಟಿಕೆಗಳ ಅನುಷ್ಠಾನ ಕುರಿತು ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಲೋಕಸಭಾ ಚುನಾವಣೆಯ ಅಂಗವಾಗಿ ಇದೇ ತಿಂಗಳ 26ರಂದು ಚಾಮರಾಜನಗರ ಲೋಕಸಭಾ ಕ್ಷೇತ್ರವ್ಯಾಪ್ತಿಯಲ್ಲಿ ಮತದಾನ ನಡೆಯಲಿದ್ದು, ಮತದಾನದ ಮಹತ್ವ ಕುರಿತು ನಾಗರಿಕರಿಗೆ ಪರಿಣಾಮಕಾರಿ ಅರಿವು ಮೂಡಿಸಬೇಕಾಗಿದೆ. ಭಾರತ ಚುನಾವಣಾ ಆಯೋಗವು ಅಂದು ಪ್ರಜಾಪ್ರಭುತ್ವದ ಹಬ್ಬವನ್ನು ಆಚರಿಸಲು ಸೂಚಿಸಿರುವ ನಿಟ್ಟಿನಲ್ಲಿ ಏಪ್ರಿಲ್ 21ರಂದು 'ನಮ್ಮ ನಡೆ ಮತಗಟ್ಟೆಯ ಕಡೆಗೆ' ವಾಕಥಾನ್ ಕಾರ್ಯಕ್ರಮವನ್ನು ಎಲ್ಲಾ ಮತಗಟ್ಟೆಗಳಲ್ಲಿ ರಾಷ್ಟ್ರೀಯ ಹಬ್ಬದ



ಮಾದರಿಯಲ್ಲಿ ಆಚರಿಸಲು ಉದ್ದೇಶಿಸಲಾಗಿದೆ ಎಂದರು.

ಜಿಲ್ಲೆಯ ಎಲ್ಲಾ ಮತಗಟ್ಟೆ ಅಧಿಕಾರಿಗಳು ಈ ಸಂಬಂಧ ಆಯಾ ವ್ಯಾಪ್ತಿಯ ತಹಶೀಲ್ದಾರರು, ತಾಲೂಕು ಹಾಗೂ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಶಾಲಾ ಶಿಕ್ಷಕರೊಂದಿಗೆ ಸಮನ್ವಯ ಸಾಧಿಸಿ ಮತಗಟ್ಟೆ ಇರುವ ಗ್ರಾಮಗಳ ನಿಗದಿತ ಪರಿಮಿತಿಯಲ್ಲಿ ಸಾರ್ವಜನಿಕರನ್ನೊಳಗೊಂಡು ವಾಕಥಾನ್ ಏರ್ಪಡಿಸಿ ಸ್ಥಾಪಿತವಾಗಿರುವ ಮತಗಟ್ಟೆಯಲ್ಲಿ ಚುನಾವಣಾ ಆಯೋಗ ನೀಡಿರುವ ಬೆಳಿಗ್ಗೆ 8 ಗಂಟೆಗೆ ಧ್ವಜಾರೋಹಣ ನಡೆಸಬೇಕು. ಪ್ರತಿ ಮತಗಟ್ಟೆಗಳಲ್ಲಿ ಕನಿಷ್ಠ ಮೂಲಸೌಕರ್ಯಗಳಾದ ಕುಡಿಯಿವ ನೀರು, ಶೌಚಾಲಯ, ನೆರಳಿನ ವ್ಯವಸ್ಥೆ ಅಚ್ಚುಕಟ್ಟಾಗಿರುವಂತೆ ನೋಡಿಕೊಳ್ಳಬೇಕು ಎಂದು ತಿಳಿಸಿದರು.

'ನಮ್ಮ ನಡೆ ಮತಗಟ್ಟೆಯ ಕಡೆಗೆ' ವಾಕಥಾನ್ ಕಾರ್ಯಕ್ರಮವನ್ನು ಪ್ರಾಥಮಿಕವಾಗಿ ಮತಗಟ್ಟೆ ಹಂತದಲ್ಲಿ ಮತಗಟ್ಟೆಯನ್ನು ಗುರುತಿಸಲಾಗಿದ್ದು, ಆಯಾ ಮತಗಟ್ಟೆಯ ಅಧಿಕಾರಿಗಳು, ಗ್ರಾಪಂ. ವ್ಯಾಪ್ತಿಯ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು, ತಾಲೂಕುಮಟ್ಟದಲ್ಲಿ ವಿಧಾನಸಭಾ ಕ್ಷೇತ್ರ ಚುನಾವಣಾಧಿಕಾರಿಗಳು ಮತ್ತು ಜಿಲ್ಲಾಮಟ್ಟದಲ್ಲಿ ಜಿಲ್ಲಾ ಚುನಾವಣಾಧಿಕಾರಿಗಳು ನೇತೃತ್ವದಲ್ಲಿ ಆಯೋಜಿಸಬೇಕು. ವಾಕಥಾನ್ ಜೊತೆಗೆ ಕಾಲ್ನಡಿಗೆ ಜಾಥಾ, ಮತದಾನ ಜಾಗೃತಿ ಕುರಿತ ಭಿತ್ತಿಪತ್ರಗಳ ವಿತರಣೆ, ಸೈಕಲ್ ಜಾಥಾ, ಬೀದಿನಾಟಕ, ಜಾನಪದ ಕಲೆಗಳ ಮೂಲಕ ಮತದಾನದ ಅರಿವು ಕಾರ್ಯಕ್ರಮಗಳ ಅವಶ್ಯಕತೆ ಎಂದು ಹೇಳಿದರು.

ಜಿಲ್ಲೆಯಲ್ಲಿ ಕಳೆದ 2019ರ ಲೋಕಸಭಾ ಚುನಾವಣೆಯಲ್ಲಿ ಕಡಿಮೆ ಮತದಾನವಾಗಿರುವ ಮತಗಟ್ಟೆಗಳನ್ನು ಗುರುತಿಸಲಾಗಿದ್ದು, ಆಯಾ ಮತಗಟ್ಟೆಮಟ್ಟದ ಅಧಿಕಾರಿಗಳು ಪ್ರತಿ ಮನೆಮನೆಗಳಿಗೆ ಖುದ್ದು ಭೇಟಿ ನೀಡಿ ಮತದಾರರ ಚೀಟಿಯನ್ನು ವಿತರಿಸುವ ಕಾರ್ಯವನ್ನು ಚುರುಕುಗೊಳಿಸಬೇಕು. ಕಡ್ಡಾಯವಾಗಿ ಹಾಗೂ ತಪ್ಪದೆ ಮತದಾನ ಮಾಡುವಂತೆ ಜನಜಾಗೃತಿ ಮೂಡಿಸಬೇಕು. ಈ ಸಂಬಂಧ ಗುಂಪ್ಪುಮೇಟಿ, ಕೊಳ್ಳೆಗಾಲ ಹಾಗೂ ಹನೂರು ಕ್ಷೇತ್ರಗಳ ಮತಗಟ್ಟೆ ಅಧಿಕಾರಿಗಳು ಸಭೆ ನಡೆಸಿ ಜಾಗೃತಿ ಕಾರ್ಯಕ್ರಮಗಳನ್ನು ಯಶಸ್ವಿಯಾಗಿ ಅನುಷ್ಠಾನಗೊಳಿಸಬೇಕು ಎಂದು ತಿಳಿಸಿದರು.

ಚುನಾವಣಾ ಆಕ್ರಮಗಳಿಗೆ ಕಡಿವಾಣ ಹಾಕಲು ಸಿ-ವಿಜಿಲ್ ಆಪ್ ಅನ್ನು ಎಲ್ಲಾ ಅಧಿಕಾರಿ, ನೌಕರರು ಡೌನ್ ಲೋಡ್ ಮಾಡಿಕೊಳ್ಳಬೇಕು. ಸಿ-ವಿಜಿಲ್‌ನಲ್ಲಿ ಹೆಚ್ಚಿನ ದೂರುಗಳು ದಾಖಲಾಗಲು ಆಪ್ ಬಗ್ಗೆ ಹೆಚ್ಚಿನ ಅರಿವು ಮೂಡಿಸಬೇಕು. ಆಪ್‌ನಲ್ಲಿ ನಕಾರಾತ್ಮಕ ದೂರುಗಳಷ್ಟೆ ಅಲ್ಲ. ಸಕಾರಾತ್ಮಕ ಅಂಶಗಳನ್ನು ಅಪ್‌ಲೋಡ್ ಮಾಡಬಹುದಾಗಿದೆ. ಅಲ್ಲದೆ ಜಿಲ್ಲಾ ಸ್ವೀಪ್ ಸಮಿತಿ ವಿಶಿಷ್ಟವಾಗಿ ಮುದ್ರಿಸಿರುವ ಮತದಾನದ ಮಮತೆಯ ಕರೆಯೋಲೆ ಆಹ್ವಾನ ಪತ್ರಗಳನ್ನು ಪ್ರತಿ ಮನೆಮನೆಗೆ ವಿತರಿಸಿ ಜನರಲ್ಲಿ ಜಾಗೃತಿ ಮೂಡಿಸಬೇಕು ಎಂದು ಜಿಲ್ಲಾ ಸ್ವೀಪ್ ಸಮಿತಿ ಅಧ್ಯಕ್ಷರಾದ ಆನಂದ್ ಪ್ರಕಾಶ್ ಮೀನಾ ಅವರು ಸಂಬಂಧಪಟ್ಟ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಇದೇ ವೇಳೆ ಮಾತನಾಡಿದ ಜಿಲ್ಲಾ ಸ್ವೀಪ್ ನೋಡಲ್ ಅಧಿಕಾರಿ ಹಾಗೂ ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ಪಿ. ಲಕ್ಷ್ಮೀ ಅವರು ಈ ಬಾರಿ ಮತದಾನದ ಪ್ರಮಾಣವನ್ನು ಹೆಚ್ಚಿಸಲು ವಿಶೇಷ ಮತಗಟ್ಟೆಗಳನ್ನು ಸ್ಥಾಪಿಸಲಾಗುತ್ತಿದ್ದು, ಎಲ್ಲಾ ಮತಗಟ್ಟೆಗಳಲ್ಲಿ ಚಿತ್ರಕಲೆ, ರಂಗೋಲಿ ಬಿಡಿಸಬೇಕು. ಮಹಿಳೆಯರನ್ನು ಸೆಳೆಯಲು ಸಖಿ ಮತಗಟ್ಟೆ, ಅರಣ್ಯದ ಅರಿವು ಮೂಡಿಸುವ ಹಸಿರು ಮತಗಟ್ಟೆ, ರೈತರಿಗಾಗಿ ಅನ್ನದಾತರ ಮತಗಟ್ಟೆ, ವಿಶೇಷಚೇತನರಿಗಾಗಿ ಪಿಡಬ್ಲೂಡಿ ಮತಗಟ್ಟೆ, ರಾಮಸಮುದ್ರದಲ್ಲಿ ಜಾನಪದ ಕಲೆಗಳ ಮತಗಟ್ಟೆ ಮತ್ತು ಬುಡಕಟ್ಟು ಜನರು ಹೆಚ್ಚಾಗಿ ವಾಸಿಸುವ ಸ್ಥಳಗಳಲ್ಲಿ ಬುಡಕಟ್ಟು ಜನರ ಆಹಾರ ಪದ್ಧತಿ, ಉಡುಗೆ ತೊಡುಗೆ, ಆವರು ಬಳಸುವ ಪರಿಕರಗಳನ್ನಿಟ್ಟು ವಿಶೇಷ ಮತಗಟ್ಟೆಗಳ ಅಂದವನ್ನು ಹೆಚ್ಚಿಸಿ ಮತದಾರರನ್ನು ಸೆಳೆಯಲು ಕಾರ್ಯಚಟುವಟಿಕೆಗಳನ್ನು ಅಚ್ಚುಕಟ್ಟಾಗಿ ಆಯೋಜಿಸುವಂತೆ ತಿಳಿಸಿದರು.

ವಿವಿಧ ಜಿಲ್ಲಾಮಟ್ಟದ ಅಧಿಕಾರಿಗಳು, ಮತಗಟ್ಟೆಮಟ್ಟದ ಅಧಿಕಾರಿಗಳು ಸಭೆಯಲ್ಲಿ ಉಪಸ್ಥಿತರಿದ್ದರು.

ಹಸಿರು ಕ್ರಾಂತಿಯ ಹರಿಕಾರ ಬಾಬು ಜಗಜೀವನ್ ರಾಮ್ ಜಯಂತಿ ಆಚರಣೆ

ಮಂಜುಸ್ವಾಮಿ ಎಂ ಎನ್ ಕೊರಟಗೆರೆ.

ಕೊರಟಗೆರೆ : ಮಾಜಿ ಉಪಪ್ರಧಾನ ಮಂತ್ರಿ ಹಸಿರು ಕ್ರಾಂತಿಯ ಹರಿಕಾರ ಬಾಬು ಜಗಜೀವನ್ ರಾಮ್ ಜಯಂತಿಯನ್ನು ಲೋಕಸಭಾ ಚುನಾವಣೆಯ ನೀತಿ ಸಂಹಿತೆ ಹಿನ್ನೆಲೆಯಲ್ಲಿ ಸರಳವಾಗಿ ತಹಶೀಲ್ದಾರ್ ಕಚೇರಿಯಲ್ಲಿ ಆಚರಣೆ ಮಾಡಲಾಯಿತು .ಕೊರಟಗೆರೆ ಪಟ್ಟಣದ ತಹಸೀಲ್ದಾರ್ ಕಚೇರಿಯಲ್ಲಿ ಆಯೋಜಿಸಲಾಗಿದ್ದ ಬಾಬು ಜಗಜೀವನ ರಾಮ್ ಜಯಂತೋತ್ಸವವನ್ನು ಸರಳವಾಗಿ ಬಾಬು ಜಗಜೀವನ್ ರಾಮ್ ರವರ ಫೋಟೋಗೆ ಪುಷ್ಪಾರ್ಚನೆ ಅರ್ಪಿಸುವುದರ ಮೂಲಕ ತಹಶೀಲ್ದಾರ್ ಕೆ ಮಂಜುನಾಥ್ ಹಾಗೂ ಹಲವು ದಲಿತಪರ ಸಂಘಟನೆಗಳ ಮುಖಂಡರುಗಳ ಸಮ್ಮುಖದಲ್ಲಿ ಆಚರಣೆ ಮಾಡಲಾಯಿತು.



ತಹಸೀಲ್ದಾರ್ ಕೆ.ಮಂಜುನಾಥ್ ಮಾತನಾಡಿ ಭಾರತೀಯ ರಾಜಕೀಯ ಮತ್ತು ಸಾಮಾಜಿಕ ಕಾರಣಗಳಲ್ಲಿ ಜಗಜೀವನ್ ರಾಮ್ ಅವರ ವ್ಯಕ್ತಿಜೀವನವು ನಾಲ್ಕು ದಶಕಗಳನ್ನು ವ್ಯಾಪಿಸಿದೆ. ಅವರು ಬ್ರಿಟಿಷ್ ಭಾರತದ ಕೊನೆಯ ವರ್ಷಗಳಲ್ಲಿ ಸ್ವಾತಂತ್ರ್ಯ ನಾಯಕರಾಗಿದ್ದರು ಮತ್ತು ಭಾರತದ ಮೊದಲ ಕ್ಯಾಬಿನೆಟ್ಟಿನಲ್ಲಿ ಕಾರ್ಮಿಕ ಸಚಿವರಾದರು. "ಅಸ್ಪೃಶ್ಯರಿಗೆ" ಸಹ ಎಲ್ಲಾ ಭಾರತೀಯರಿಗೆ ಸಮಾನತೆಯ ಹೋರಾಟದಲ್ಲಿ ಅವರು ನಾಯಕರಾಗಿದ್ದರು. ಮತ್ತು ಅವರು ಭಾರತೀಯ ಸಂವಿಧಾನದಲ್ಲಿ ಬಹಳಷ್ಟು "ಸಾಮಾಜಿಕ ನ್ಯಾಯ" ನಿಬಂಧನೆಗಳನ್ನು ಪಡೆಯುವಲ್ಲಿ ಪ್ರಮುಖ ಪಾತ್ರ ವಹಿಸಿದ್ದರು.

ದಲಿತ್ ವೆಂಕಟೇಶ್ ಮಾತನಾಡಿ ಬಿಹಾರದ ಚಿಂದ್ವಾದ ದಲಿತ ಕುಟುಂಬದಲ್ಲಿ ಜನಿಸಿದ ಜಗಜೀವನ್ ರಾಮ್, ಕಷ್ಟದಲ್ಲಿ ಬೆಳೆದು ಬಂದವರು. ತಾರತಮ್ಯ ಎಂಬ ಸಾಮಾಜಿಕ ಅನಿಷ್ಟದ ನಡುವೆ ಮೇರು ಸಾಧನೆ ಮಾಡಿ, ಸಮಾಜದ ನಿರ್ಮಾಣಕ್ಕಾಗಿ ಹೋರಾಡಿ ಸಾಧನೆ ಮಾಡಿದರು. ಸಾಮಾಜಿಕ ಅಸಮಾನತೆಯ ನಡುವೆ ಶಿಕ್ಷಣವನ್ನು ಪಡೆದುಕೊಂಡವರು ಬಾಬು ಜಗಜೀವನ್ ರಾಮ್ ಎಂದರು.

ದಲಿತ ಮುಖಂಡ ಹಾಗೂ ನಿವೃತ್ತ ಸೈನಿಕ ನರಸಿಂಹಮೂರ್ತಿ ಮಾತನಾಡುತ್ತಾ ಸಮಾಜದಲ್ಲಿ ಅಸ್ಪೃಶ್ಯತೆಯ ಕರಿ ನೆರಳು ಜಗಜೀವನ್ ರಾಮ್ ಬಿದ್ದು ನಲುಗಿದ್ದವರಾಗಿದ್ದು , ಡಾ. ಬಿ .ಆರ್ ಅಂಬೇಡ್ಕರ್ ಸಂವಿಧಾನ ನೀಡಿದ್ದರೆ ಬಾಬು ಜಗಜೀವನ್ ರಾಮ್ ಸಂವಿಧಾನ ಉಳಿವಿಗಾಗಿ ಬಾಳ ಶ್ರಮಪಟ್ಟವರಾಗಿದ್ದು, ಅವರ ಆದರ್ಶ ನಮ್ಮೆಲ್ಲರಿಗೂ ದಾರಿದೀಪ ಎಂದರು.

ದಲಿತ ಮುಖಂಡ ನಾಗರಾಜು ಮಾತನಾಡಿ ಕೊರಟಗೆರೆ ಪಟ್ಟಣದಲ್ಲಿ ಡಾ . ಬಿ ಆರ್ ಅಂಬೇಡ್ಕರ್ ಪ್ರತಿಮೆ ಸ್ಥಾಪನೆ ಮಾಡಬೇಕು ಎಂದು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ತಾ .ಪಂ ಇ ಓ ಅಪೂರ್ವ ಸಿ, ಸಿಪಿಐ ಅನಿಲ್ ಕುಮಾರ್,ಸಮಾಜ ಕಲ್ಯಾಣ ಅಧಿಕಾರಿ ಯಮುನಾ, ಜಿ. ಪಂ ಎಇಇ ರವಿಕುಮಾರ್, ಪ ಪಂ ಮುಖ್ಯಾಧಿಕಾರಿ ಮಂಜುನಾಥ್, ತಾ. ಪಂ ಯೋಜನಾಧಿಕಾರಿ ಮಧುಸೂದನ್, ದಲಿತ ಮುಖಂಡರಾದ ನಾಗರಾಜು, ಗೋಪಿ, ಚಿಕ್ಕಪ್ಪಯ್ಯ, ಶಿವರಾಂ, ನಾಗೇಶ್, ನರಸಿಂಹ ಮೂರ್ತಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಅಭ್ಯರ್ಥಿಗಳ ಚುನಾವಣಾ ವೆಚ್ಚಗಳ ಪರಿಶೀಲನೆ

ಮಂಡ್ಯ: ಮಂಡ್ಯ ಲೋಕಸಭಾ ಚುನಾವಣೆಗೆ ಸ್ಪರ್ಧಿಸಿರುವ ಅಭ್ಯರ್ಥಿಗಳು ಚುನಾವಣಾ ಪ್ರಚಾರದ ಅವಧಿಯಲ್ಲಿ (ನಾಮಪತ್ರ ಸಲ್ಲಿಕೆ ದಿನಾಂಕದಿಂದ ಫಲಿತಾಂಶ ಘೋಷಣೆ ದಿನಾಂಕದವರೆಗೆ) ಮಾಡುವ ವೆಚ್ಚಗಳ ವಿವರಗಳನ್ನು ನಾಮಪತ್ರ ಸಲ್ಲಿಕೆ ದಿನಾಂಕದಂದು ಒದಗಿಸಿರುವ ಭಾಗ ಎ, ಬಿ ಮತ್ತು ಸಿ ವಹಿಗಳಲ್ಲಿ ನಿರ್ವಹಿಸಿ 3 ಬಾರಿ ಚುನಾವಣಾ ಆಯೋಗದಿಂದ ನೇಮಿಸಲ್ಪಟ್ಟಿರುವ ಚುನಾವಣಾ ವೆಚ್ಚದ ವೀಕ್ಷಕರ ಪರಿಶೀಲನೆಗೆ ಒಳಪಡಿಸಬೇಕಾಗಿರುತ್ತದೆ.

ಅಭ್ಯರ್ಥಿಗಳು ನಿರ್ವಹಿಸಿರುವ ಚುನಾವಣಾ ವೆಚ್ಚ ವಿವರದ ವಹಿಗಳನ್ನು ಚುನಾವಣಾ ವೆಚ್ಚ ವೀಕ್ಷಕರುಗಳಾದ ರೋಹಿತ್ ಅಸ್ಸುದಾನಿ ಹಾಗೂ ಕುಮಾರ್ ಪ್ರಿಯತಮ್ ಅಶೋಕ್ ಅವರು ಏಪ್ರಿಲ್ 10 ರಂದು ಬೆಳಿಗ್ಗೆ 10.30 ರಿಂದ ಮಧ್ಯಾಹ್ನ 1 ಗಂಟೆಯವರೆಗೆ ಮೊದಲನೇ ಪರಿಶೀಲನೆ, ಏಪ್ರಿಲ್ 16 ರಂದು ಬೆಳಿಗ್ಗೆ 10.30 ರಿಂದ ಮಧ್ಯಾಹ್ನ 1 ಗಂಟೆಯವರೆಗೆ ಎರಡನೇ ಪರಿಶೀಲನೆ ಮತ್ತು ಏಪ್ರಿಲ್ 23 ರಂದು ಬೆಳಿಗ್ಗೆ 10.30 ರಿಂದ ಮಧ್ಯಾಹ್ನ 1 ಗಂಟೆಯವರೆಗೆ ಮೂರನೇ ಪರಿಶೀಲನೆಯನ್ನು ಮಂಡ್ಯ ಜಿಲ್ಲಾಧಿಕಾರಿಗಳ ಕಚೇರಿ ಕೊಠಡಿ ಸಂಖ್ಯೆ 22 ರಲ್ಲಿ ನಡೆಸಲಿದ್ದಾರೆ.

ಸದರಿ ದಿನಾಂಕಗಳಂದು ಚುನಾವಣೆಗೆ ಸ್ಪರ್ಧಿಸಿರುವ ಅಭ್ಯರ್ಥಿಗಳು ಭಾಗ ಎ, ಬಿ ಮತ್ತು ಸಿ ನಲ್ಲಿ ನಿರ್ವಹಿಸಿರುವ ವೆಚ್ಚ ವಹಿಗಳನ್ನು ತಪ್ಪದೇ ಚುನಾವಣಾ ವೆಚ್ಚ ವೀಕ್ಷಕರ ಪರಿಶೀಲನೆಗೆ ಹಾಜರುಪಡಿಸಲು ತಿಳಿಸಿದೆ. ತಪ್ಪಿದಲ್ಲಿ ನಿಯಮಾನುಸಾರ ಕ್ರಮ ವಹಿಸುವುದರ ಜೊತೆಗೆ ನೀಡಲಾಗಿರುವ ವಿವಿಧ ವಾಹನ ಅನುಮತಿಗಳನ್ನು ಹಿಂಪಡೆಯಲಾಗುವುದು ಎಂದು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಚುನಾವಣಾ ಅಧಿಕಾರಿಗಳಾದ ಡಾ. ಕುಮಾರ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ನಮ್ಮ ಸಂಸ್ಥೆ ಸಮಾಜದ ಪ್ರತಿಯೊಬ್ಬ ಸಮಾಜ ಸುಧಾಕರಿಗೆ ಗೌತವಿಸುತ್ತದೆ: ಟಿ.ಎಂ.ಸಹದೇಶ್

ದೇವನಹಳ್ಳಿ:ಭಾರತದ ಮಾಜಿ ಉಪ ಪ್ರಧಾನಿಗಳು, ಸಮಾಜದ ಹಸಿರು ಕ್ರಾಂತಿಯ ಹರಿಕಾರರಾದ ಶ್ರೀ ಬಾಬುಜಗಜೀವನ್ ರಾಮ್ ರವರ 117ನೇ ಜಯಂತಿಯ ಪ್ರಯುಕ್ತ ಸಾರ್ವಜನಿಕ ಸಂಪರ್ಕ ಕೇಂದ್ರದಲ್ಲಿ ಸಂಸ್ಥಾಪಕರಾದ ಟಿ.ಎಂ. ಸಹದೇಶ್ ರವರು ಪುಷ್ಪ ನಮನ ಸಲ್ಲಿಸಿದರು. ನಂತರ ಮಾತನಾಡಿದ ಅವರು ನಮ್ಮ ಸಂಸ್ಥೆಯ ವತಿಯಿಂದ ಬುದ್ಧ, ಬಸವ, ಅಂಬೇಡ್ಕರ್, ಕುವೆಂಪು, ನಾರಾಯಣ ಗುರು, ಪೆರಿಯಾರ್, ಟಿಪ್ಪುಸುಲ್ತಾನ್, ವಾಲ್ಮೀಕಿ, ಕೆಂಪೇಗೌಡರು ಇನ್ನು ಸಾವಿರಾರು ಸಮಾಜ ಸುಧಾರಕರುಗಳಿಗೆ ಸರಿಸಮಾನವಾಗಿ ಗೌರವ ಸಮರ್ಪಣೆ ಮಾಡಿಕೊಂಡು ಬರುತ್ತಿದ್ದು, ಅದೇ ರೀತಿಯಾಗಿ ಹಸಿರು ಕ್ರಾಂತಿಯ ಹರಿಕಾರರಾದ ಶ್ರೀ ಜಗಜೀವನ ರಾಮ್ ರವರು ಕೂಡ ಧೀನ ದಲಿತರ ನಾಯಕರಾಗಿದ್ದರು ಅವರ ಆದರ್ಶಗಳಂತೆ ನಾವು ಕೆಸ ಮಾಡಬೇಕು ಎಂದು. ನಮ್ಮ ಸಂಸ್ಥೆಯ ವತಿಯಿಂದ ನಾವು ಜಾತ್ಯತೀತವಾಗಿ ಮತ್ತು ಪಕ್ಷಾತೀತವಾಗಿ ಕೆಲಸ ನಿರ್ವಹಿಸುತ್ತಿದ್ದೇವೆ ಎಂದು ತಿಳಿಸಿದರು. ಇದೇ ಸಂದರ್ಭದಲ್ಲಿ ದೇವನಹಳ್ಳಿಯ ಸಮಾಜ ಸೇವಕರಾದ ಶ್ರೀನಿವಾಸ್ ರವರು ಹಾಗೂ ಹಲವು ಮುಖಂಡರು ಉಪಸ್ಥಿತರಿದ್ದರು.

ಲೋಕಸಭಾ ಚುನಾವಣೆ/ ಮತ ಜಾಗೃತಿಗೆ ಹಲವು ಸಂಸ್ಥೆಗಳು ಸ